ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 297
21–5–2025 ಬುಧವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 297

## ಪ್ರಭಾ ಸಂಸದರಾಗಿ ವರುಷ ನಿಮಿತ್ತ ಆನ್ ಲೈನ್ ಚಿತ್ರಕಲಾ ಸ್ಪರ್ಧೆ

**ದಾವಣಗೆರೆ:** ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಸಂಸದರಾಗಿ ಒಂದು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ದಾವಣಗೆರೆ ಲೋಕಸಭಾ ಕ್ಷೇತ್ರದ ನಾಗರೀಕರಿಗಾಗಿ ಟೀಂ ಪ್ರಭಾ ವಿಕಾಸ್ ತಂಡದಿಂದ ದಾವಣಗೆರೆ– 2030 ನನ್ನ ಕನಸು, ನನ್ನ ನಗರ ಥೀಮ್ ನಲ್ಲಿ ಆನ್‌ಲೈನ್ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರ ವರ್ಷದ ಸಾರ್ವಜನಿಕ ಸೇವೆಯ ಸಂಭ್ರಮದಲ್ಲಿ ಸಾರ್ವಜನಿಕರ ದೃಷ್ಟಿಕೋನದಲ್ಲಿ ದಾವಣಗೆರೆ ಹೇಗಿರಬೇಕು ಹಾಗೂ ಅಭಿವೃದ್ಧಿ ಪಥದತ್ತ ದಾವಣಗೆರೆ ಹೇಗೆ ಬದಲಾಗಬೇಕು ವಿಷಯ ಕುರಿತಂತೆ ಸ್ಪರ್ಧೆ ನಡೆಯಲಿದೆ.

ಸ್ಪರ್ಧೆ 7–14 ವರ್ಷದ ವಿಭಾಗ, 15–20 ವರ್ಷ, 21–24 ವರ್ಷ ಹಾಗೂ 25 ವರ್ಷ ಮತ್ತು ಮೇಲ್ಪಟ್ಟವರು ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಪ್ರತಿ ವಿಭಾಗದಲ್ಲಿ ಮೊದಲ ಬಹುಮಾನ 5,000 ರೂ., ಪ್ರಮಾಣಪತ್ರ, ಎರಡನೇ ಬಹುಮಾನ – 3,000 ರೂ. ಹಾಗೂ ಪ್ರಮಾಣಪತ್ರ ಒಳಗೊಂಡಿದೆ.

ಚಿತ್ರ ರಚನೆಗೆ ನಿಯಮಿತ ಪೆನ್ಸಿಲ್‌ಗಳು, ಕ್ರಯೋನ್‌ಗಳು, ಜಲವರ್ಣಗಳು, ಸ್ಕೆಚ್ ಪೆನ್ , ಅಕ್ರಿಲಿಕ್ ಬಣ್ಣ, ಆಯಿಲ್ ಪೇಂಟ್, ಗ್ರ್ಯಾಫೈಟ್ ಪೆನ್ಸಿಲ್‌ಗಳು, ಅಥವಾ ಕ್ಯಾನ್ವಾಸ್ ಬಳಸಬಹುದು. ಕಲಾಕೃತಿಯನ್ನು ಉತ್ತಮ ಗುಣಮಟ್ಟದಲ್ಲಿ ಸ್ಕ್ಯಾನ್ ಮಾಡಬೇಕು ಅಲ್ಲದೆ ಪ್ರತಿ ಸ್ಪರ್ಧಿಯು ತಮ್ಮ ಪೂರ್ಣ ಹೆಸರು, ಹುಟ್ಟಿದ ದಿನಾಂಕ, ವಯೋಮಿತಿ, ಶಾಲೆ,ಕಾಲೇಜು ಹೆಸರು, 25 ಮೇಲ್ಪಟ್ಟರಿಗೆ ಶೈಕ್ಷಣಿಕ ಅರ್ಹತೆ, ಸಂಪರ್ಕ ಸಂಖ್ಯೆ, ಕಲಾಕೃತಿಯ ಶೀರ್ಷಿಕೆಯೊಂದಿಗೆ ನಿಮ್ಮ ರೇಖಾಚಿತ್ರದ ಸಂಕ್ಷಿಪ್ತ ವಿವರಣೆಯು 300 ಪದಗಳನ್ನು ಮೀರದಂತೆ ಇರಬೇಕು.

# ಬಿಜೆಪಿ ಮಾಡೆಲ್‌ನಲ್ಲಿ ಹಣ ಆಯ್ದ ವ್ಯಕ್ತಿಗಳ ಕೈಯಲ್ಲಿರುತ್ತದೆ ಆದರೆ ಕಾಂಗ್ರೆಸ್ ಬಡವರಿಗೆ ನೀಡುತ್ತದೆ: ರಾಹುಲ್ ಗಾಂಧಿ

**ಹೊಸಪೇಟೆ:** ಬಿಜೆಪಿಯು ಆಯ್ದ ಶ್ರೀಮಂತರು ಸಂಪೂರ್ಣ ಹಣ ಮತ್ತು ಸಂಪನ್ಮೂಲಗಳನ್ನು ಪಡೆಯುವ ಮಾಡೆಲ್ ಅನ್ನು ಅನುಸರಿಸುತ್ತದೆ. ಆದರೆ, ಕಾಂಗ್ರೆಸ್ ಮಾಡೆಲ್‌ನಲ್ಲಿ ಹಣವನ್ನು ಬಡವರ ಬ್ಯಾಂಕ್ ಖಾತೆಗಳಿಗೆ ಮತ್ತು ಜೇಬಿಗೆ ಹಾಕಲಾಗುತ್ತದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮಂಗಳವಾರ ಹೇಳಿದ್ದಾರೆ.



ಕಾಂಗ್ರೆಸ್ ಸರ್ಕಾರ ಎರಡು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ನಡೆಸುತ್ತಿರುವ ಸಾಧನಾ ಸಮಾವೇಶದಲ್ಲಿ ಮಾತನಾಡಿದರು. ಈ ಸಂದರ್ಭದಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಅರ್ಹ ಫಲಾನುಭವಿಗಳಿಗೆ ಹಕ್ಕು ಪತ್ರಗಳನ್ನು ವಿತರಿಸಲಾಯಿತು. ಅವರ ದಾಖಲೆರಹಿತ ವಾಸಸ್ಥಳಗಳನ್ನು ಕಂದಾಯ ಗ್ರಾಮಗಳೆಂದು ಘೋಷಿಸಲಾಗಿದೆ.

'ಕಾಂಗ್ರೆಸ್ ಪಕ್ಷದ ಸರ್ಕಾರ ಎರಡು ವರ್ಷಗಳನ್ನು ಪೂರೈಸಿದೆ. ಚುನಾವಣೆಯ ಸಮಯದಲ್ಲಿ ನಾವು ನಿಮಗೆ ಐದು ಭರವಸೆಗಳನ್ನು ನೀಡಿದ್ದೆವು. ಕಾಂಗ್ರೆಸ್ ಪಕ್ಷ ಅವುಗಳನ್ನು ಪೂರೈಸುವುದಿಲ್ಲ ಎಂದು ಬಿಜೆಪಿಯವರು ಹೇಳಿದರು. ಇದನ್ನು ಮಾಡಲು ಸಾಧ್ಯವಿಲ್ಲ ಎಂದು ಪ್ರಧಾನಿ ಹೇಳಿದರು. ಆದರೆ, ನಾವು ನೀಡಿದ ಭರವಸೆಗಳನ್ನು ಪೂರೈಸಿದ್ದೇವೆ' ಎಂದು ಹೇಳಿದರು. ಸರ್ಕಾರ ಜಾರಿಗೆ ತಂದಿರುವ ಐದು ಖಾತರಿ ಯೋಜನೆಗಳನ್ನು ಪಟ್ಟಿ ಮಾಡಿದ ಅವರು, 'ಕರ್ನಾಟಕದ ಬಡವರ ಬ್ಯಾಂಕ್ ಖಾತೆಗೆ ಹಣವನ್ನು ಹಾಕುವುದಾಗಿ ನಾವು ನಿಮಗೆ ಹೇಳಿದ್ದೇವೆ. ಇಂದು, ಸಾವಿರಾರು ಕೋಟಿ ರೂಪಾಯಿಗಳನ್ನು ನೇರವಾಗಿ ನಿಮ್ಮ ಬ್ಯಾಂಕ್ ಖಾತೆಗೆ ಹಾಕಲಾಗುತ್ತಿದೆ. ಈ ಹಣವನ್ನು ನೀವು ನಿಮ್ಮ ಮಕ್ಕಳ ಶಿಕ್ಷಣಕ್ಕಾಗಿ, ನಿಮ್ಮ ಆರೋಗ್ಯಕ್ಕಾಗಿ ಬಳಸುತ್ತೀರಿ. ಇದನ್ನೇ ನಾವು ಬಯಸಿದ್ದೆವು. ನಿಮ್ಮ ಹಣವು ನಿಮ್ಮ ಜೇಬಿಗೆ ಹಿಂತಿ–ರುಗುತ್ತಿದೆ' ಎಂದರು.

ಭಾರತದ ಸಂಪೂರ್ಣ ಹಣವು ಆಯ್ದ ಜನರಿಗೆ ಮಾತ್ರ ಸಿಗಲಿ ಎಂದು ಬಿಜೆಪಿ ಬಯಸುತ್ತದೆ. ಆದರೆ, ಈ ಹಣವು ಬಡವರು, ಹಿಂದುಳಿದವರು, ದಲಿತರು, ಆದಿವಾಸಿಗಳ ಜೇಬಿಗೆ ನೇರವಾಗಿ ಹೋಗಬೇಕೆಂದು ನಾವು ಬಯಸುತ್ತೇವೆ. ನಾವು ನಿಮ್ಮ ಜೇಬಿಗೆ ಹಣವನ್ನು ಹಾಕಿದಾಗ, ಆ ಹಣ ಮಾರುಕಟ್ಟೆಗೆ ಹೋಗುತ್ತದೆ ಮತ್ತು ಇದರಿಂದಾಗಿ ಉತ್ಪಾದನೆ ಹೆಚ್ಚಾಗುತ್ತದೆ ಮತ್ತು ನೀವು ಈ ಹಣವನ್ನು ನಿಮ್ಮ ಹಳ್ಳಿಗಳಲ್ಲಿ ಅಥವಾ ನಗರಗಳಲ್ಲಿ ಖರ್ಚು ಮಾಡುವುದರಿಂದ ಆ ಹಣವು ಹಳ್ಳಿಗಳಿಗೆ ಸೇರುತ್ತದೆ ಮತ್ತು ಕರ್ನಾಟಕದ ಆರ್ಥಿಕತೆಯು ಅದರಿಂದ ಪ್ರಯೋಜನ ಪಡೆಯುತ್ತದೆ' ಎಂದು ಅವರು ಹೇಳಿದರು. ಬಿಜೆಪಿಯ ಮಾದರಿಯಲ್ಲಿ, ಸಂಪೂರ್ಣ ಹಣವನ್ನು ಎರಡು–ಮೂರು ಬಿಲಿಯನೇರ್‌ಗಳಿಗೆ ನೀಡಲಾಗುತ್ತದೆ. ಈ ಬಿಲಿಯನೇರ್‌ಗಳು ಹಳ್ಳಿಗಳಲ್ಲಿ ಅಥವಾ ಪಟ್ಟಣಗಳಲ್ಲಿ ಹಣವನ್ನು ಖರ್ಚು ಮಾಡುವುದಿಲ್ಲ. ಅವರು ಲಂಡನ್, ನ್ಯೂಯಾರ್ಕ್ ಮತ್ತು ಇತರ ಸ್ಥಳಗಳಲ್ಲಿ ಆಸ್ತಿಗಳನ್ನು ಖರೀದಿಸುತ್ತಾರೆ ಎಂದು ರಾಹುಲ್ ಗಾಂಧಿ ದೂರಿದರು.

ಬಿಜೆಪಿ ಮಾದರಿಯಲ್ಲಿ ನಿಮ್ಮ ಹಣವು ಆಯ್ದ ಕೆಲವರ ಕೈಗೆ ಹೋಗುತ್ತದೆ. ಅವರ ಮಾದರಿಯಲ್ಲಿ ಉದ್ಯೋಗ ಕೊರತೆ ಉಂಟಾಗುತ್ತದೆ. ಆದರೆ, ನಮ್ಮ ಮಾದರಿಯಲ್ಲಿ ಉದ್ಯೋಗ ಸೃಷ್ಟಿಯಾಗುತ್ತದೆ. ಅವರ ಮಾದರಿಯಲ್ಲಿ, ನೀವು ಅನಾರೋಗ್ಯದಿಂದ ಬಳಲುತ್ತೀರಿ, ಅದರಿಂದ ನೀವು ಸಾಲ ಮಾಡಿಕೊಳ್ಳುವಿರಿ. ನಮ್ಮ ಮಾದರಿಯಲ್ಲಿ, ನಿಮ್ಮ ಜೇಬಿನಲ್ಲಿ ಹಣವಿರುತ್ತದೆ ಮತ್ತು ನಿಮಗೆ ಚಿಕಿತ್ಸೆ ನೀಡಲಾಗುತ್ತದೆ. ಅವರ ಮಾದರಿಯಲ್ಲಿ ನೀವು ಶಿಕ್ಷಣಕ್ಕಾಗಿ ಖಾಸಗಿ ಶಾಲೆಗಳು, ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಿಗೆ ಲಕ್ಷಾಂತರ ಹಣವನ್ನು ನೀಡುತ್ತೀರಿ ಮತ್ತು ಸಾಲವನ್ನು ಎದುರಿಸುತ್ತೀರಿ. ಆದರೆ, ನಮ್ಮ ಮಾದರಿಯಲ್ಲಿ ನಾವು ನಿಮಗೆ ಹಣವನ್ನು ನೀಡುತ್ತೇವೆ' ಎಂದು ಅವರು ಹೇಳಿದರು.

ಈ ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಪಕ್ಷದ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ಪಕ್ಷದ ಮುಖಂಡರು ಇದ್ದರು.

# ಬೆಂಗಳೂರಿನಲ್ಲಿ ಭಾರೀ ಮಳೆ ಅವಾಂತರ: ಐವರ ಬಲಿ



**ಬೆಂಗಳೂರು:** ಸೋಮವಾರ ನಗರದಲ್ಲಿ ಸುರಿದ ಭಾರೀ ಮಳೆಗೆ ಎರಡು ಪ್ರತ್ಯೇಕ ಘಟನೆಗಳಲ್ಲಿ 12 ವರ್ಷದ ಬಾಲಕ ಸೇರಿದಂತೆ ಐವರು ಸಾವನ್ನಪ್ಪಿದ್ದಾರೆ.

ಭಾನುವಾರ ರಾತ್ರಿ ಸುರಿದ ಭಾರೀ ಮಳೆಯ ನಂತರ ಸೋಮವಾರ ಬೆಳಿಗ್ಗೆ 7.30 ರ ಸುಮಾರಿಗೆ ಖಾಸಗಿ ಕಂಪನಿಯ ಕಾಂಪೌಂಡ್ ಗೋಡೆ ಕುಸಿದು 35 ವರ್ಷದ ಮಹಿಳೆಯೊಬ್ಬರು ಸಾವನ್ನಪ್ಪಿದ್ದಾರೆ.

ಮೃತ ಮಹಿಳೆಯನ್ನು ಯಾದಗಿರಿ ಮೂಲದ ಶಶಿಕಲಾ ಎಂದು ಗುರ್ತಿಸಲಾಗಿದೆ. ಮಹದೇವಪುರ ಪೊಲೀಸ್ ಠಾಣೆ ವ್ಯಾಪ್ತಿಯ ಖಾಸಗಿ ಕಂಪನಿಯಲ್ಲಿ ಮನೆಗೆಲಸದ ಉದ್ಯೋಗಿಯಾಗಿ ಕೆಲಸ ಮಾಡುತ್ತಿದ್ದರು. ಕೆಲಸ ಮಾಡುತ್ತಿದ್ದಾಗ ಗೋಡೆ ಕುಸಿದು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಮತ್ತೊಂದು ಘಟನೆಯಲ್ಲಿ, ಸೋಮವಾರ ಸಂಜೆ 6.15 ರ ಸುಮಾರಿಗೆ ಮೈಕೋ ಲೇಔಟ್ ಪೊಲೀಸ್ ಠಾಣೆ ವ್ಯಾಪ್ತಿಯ ಎನ್‌ಎಸ್ ಪಾಳ್ಯದಲ್ಲಿ ನಡೆದಿದೆ.

ಬಿಟಿಎಂ ಲೇಔಟ್ ಎರಡನೇ ಹಂತದ ಮಧುವನ್ ಅಪಾರ್ಟ್‌ಮೆಂಟ್‌ನ ನೆಲಮಾಳಿಗೆಯಲ್ಲಿ ತುಂಬಿದ್ದ ನೀರನ್ನು ತೆರವುಗೊಳಿಸುವ ವೇಳೆ ವಿದ್ಯುತ್ ಸ್ಪರ್ಶಿಸಿ ಇಬ್ಬರು ಸಾವನ್ನಪ್ಪಿದ್ದಾರೆ.

ಮೃತರನ್ನು ಮನಮೋಹನ್ ಕಾಮತ್ (63) ಹಾಗೂ ದಿನೇಶ್ (12) ಎಂದು ಗುರ್ತಿಸಲಾಗಿದೆ. ಸೋಮವಾರ ಸಂಜೆ ಸುರಿದ ಭಾರೀ ಮಳೆಯ ನಂತರ, ಅಪಾರ್ಟ್‌ಮೆಂಟ್‌ನ ನೆಲಮಾಳಿಗೆಯಲ್ಲಿ ನೀರು ತುಂಬಿತ್ತು. ಕಾಮತ್ ಅವರು, ಮೋಟಾರ್ ಬಳಸಿ ನೀರನ್ನು ಹೊರಹಾಕಲು ಪ್ರಯತ್ನಿಸುತ್ತಿದ್ದರು.

# ಕುಮಾರಸ್ವಾಮಿ– ಬಿಜೆಪಿಯವರು ಹತಾಶೆಯ ಮನುಷ್ಯರು : ಡಿಕೆಶಿ

**ಬೆಂಗಳೂರು:** ಮಳೆ ನೀರಿನಿಂದ ಉಂಟಾಗುವ ಅವಘಡಗಳನ್ನು ತಪ್ಪಿಸಲು ಮೊದಲೇ ಸಜ್ಜಾಗಿದ್ದೆವು. ನಾವು ಶೇ. 70 ರಷ್ಟು ಪ್ರದೇಶಗಳಲ್ಲಿನ ಸಮಸ್ಯೆಗಳನ್ನು ನಿವಾರಣೆ ಮಾಡಿದ್ದೇವೆ. ಈಗಾಗಲೇ ಇಡೀ ಬೆಂಗಳೂರಿನಾದ್ಯಂತ 197 ಕಿಮೀ ಉದ್ದದ ಮಳೆನೀರುಗಾಲುವೆ ನಿರ್ಮಾಣದ ಕೆಲಸ ನಡೆ–ಯುತ್ತಿದೆ." ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಬಿಬಿಎಂಪಿ ಮುಖ್ಯ ಕಚೇರಿಯ ವಾರ್ ರೂಮಲ್ಲಿ ಮಾಧ್ಯಮದವರ ಜತೆ ಸೋಮವಾರ ಮಾತನಾಡಿದರು. ನಾನು ಬೆಂಗಳೂರಿನ ಜವಾಬ್ದಾರಿ ತೆಗೆದುಕೊಂಡ ನಂತರ ಮಳೆ ನೀರಿನಿಂದ ತೊಂದರೆಗೆ ಒಳಗಾಗುತ್ತಿದ್ದ 210 ಪ್ರದೇಶಗಳನ್ನು ಗುರುತಿಸಲಾಯಿತು. 166 ಪ್ರದೇಶಗಳಲ್ಲಿನ ಸಮಸ್ಯೆಗಳನ್ನು ನಿವಾರಣೆ ಮಾಡಲಾಗಿದೆ. ಇನ್ನು 44 ಪ್ರದೇಶಗಳಲ್ಲಿ ಕೆಲಸ ಬಾಕಿಯಿದ್ದು ಇದರಲ್ಲಿ 24 ಪ್ರದೇಶಗಳಲ್ಲಿ ಕೆಲಸ ನಡೆಯುತ್ತಿದೆ.

ಸಂಚಾರಿ ಪೊಲೀಸರು ಮಳೆ ಬಂದಾಗ ಸಮಸ್ಯೆ ಉಂಟಾಗುವ 132 ಪ್ರದೇಶಗಳನ್ನು ಗುರುತಿಸಿದ್ದಾರೆ. ಇದರಲ್ಲಿ ಏಪ್ರಿಲ್ ವೇಳೆಗೆ 82 ಪ್ರದೇಶಗಳಲ್ಲಿ ಸಮಸ್ಯೆ ನಿವಾರಣೆ ಮಾಡಿದ್ದೇವೆ. 41 ಕೆಲಸಗಳು ಬಾಕಿ ಉಳಿದಿವೆ. ಮಳೆನೀರುಗಾಲುವೆಗೆ ಎಂದೇ 2 ಸಾವಿರ ಕೋಟಿ ಖರ್ಚು ಮಾಡಲಾಗುತ್ತಿದೆ" ಎಂದು ಹೇಳಿದರು. "ಮಳೆ ಎಂಬುದು ಪ್ರಕೃತಿಯ ನಿಯಮ. ನಾವು ಜನಸಾಮಾನ್ಯರ ಬದುಕಿನ ಬಗ್ಗೆ ಕಾಳಜಿ ಹೊಂದಿದ್ದೇವೆ. ಉಂಟಾಗಿರುವ ಸಮಸ್ಯೆಗಳನ್ನು ನಿವಾರಣೆ ಮಾಡಲು ನಾವು ಕ್ರಮ ತೆಗೆದುಕೊಳ್ಳುತ್ತೇವೆ. ಬೆಂಗಳೂರಿನ ಜನತೆ ಯಾವುದೇ ಕಾರಣಕ್ಕೂ ಗಾಬರಿಗೆ ಒಳಗಾಗುವುದು ಬೇಡ" ಎಂದರು.



"ದುರಾದೃಷ್ಟವಶಾತ್ ಮಹಿಳೆಯೊಬ್ಬರ ಮೇಲೆ ಖಾಸಗಿ ಪ್ರದೇಶದಲ್ಲಿದ್ದ ಕಟ್ಟಡದ ಗೋಡೆ ಬಿದ್ದು ಮೃತಪಟ್ಟಿದ್ದಾರೆ. ನಮಗೂ ನಮ್ಮ ಜವಾಬ್ದಾರಿಯ ಬಗ್ಗೆ ಅರಿವಿದೆ" ಎಂದು ಬೇಸರ ವ್ಯಕ್ತಪಡಿಸಿದರು.

ಸಿಲ್ಕ್ ಬೋರ್ಡ್, ಹೆಬ್ಬಾಳದ ನಂತರದ ಭಾಗ, ಯಲಹಂಕ ಇಲ್ಲೆಲ್ಲೇ ಹೆಚ್ಚು ಮಳೆ ಸುರಿದಿದೆ. ಇಲ್ಲಿ ಒಂದೆರಡು ಕಡೆ ರೈಲ್ವೇ ಅಂಡರ್ ಪಾಸ್ ಕೆಲಸ ನಡೆಯುತ್ತದೆ. ಆದ ಕಾರಣ ನೀರು ನಿಂತು ಹೆಚ್ಚು ತೊಂದರೆಯಾಗುತ್ತಿದೆ. ಆದ್ದರಿಂದ ಆ ಇಲಾಖೆಯವರ ಜೊತೆ ಸಮನ್ವಯ ಸಾಧಿಸಿ ಕೆಲಸ ಮಾಡಲಾಗುವುದು" ಎಂದರು.

ಕುಮಾರಸ್ವಾಮಿ ಗ್ರೇಟರ್ ಬೆಂಗಳೂರಲ್ಲ ಲೂಟರ್ ಬೆಂಗಳೂರು ಎಂದು ಕರೆದಿರುವ ಬಗ್ಗೆ ಕೇಳಿದಾಗ, "ಕುಮಾರಸ್ವಾಮಿ ಹಾಗೂ ಬಿಜೆಪಿಯ ನಾಯಕರು ಹತಾಶೆಯ ಮನುಷ್ಯರು" ಎಂದರು. ನಿಮ್ಮನ್ನ ಅಥವಾ ಸರ್ಕಾರವನ್ನು ನೋಡಿ ಹತಾಶೆಗೆ ಒಳಗಾಗಿದ್ದಾರೆಯೇ ಎಂದಾಗ, "ನಾನು ಹಾಗೂ ಸರ್ಕಾರ ಎರಡೂ ನೋಡಿ ಹತಾಶರಾಗಿದ್ದಾರೆ. ನಾವು ಇಷ್ಟೊಂದು ಸಾಧನೆ ಮಾಡಿದ್ದೇವೆ. ಅವರಿಗೆ ಏನನ್ನೂ ಹೇಳಿಕೊಳ್ಳಲು ಆಗುತ್ತಿಲ್ಲವಲ್ಲ. ಜೋಕರ್ ಆಟವಾಡಲು ನನಗೆ ಚಾನ್ಸ್ ಸಿಗಲಿಲ್ಲವಲ್ಲ ಎಂದು ಸಂಕಟ" ಎಂದರು.

ಡಿ.ಕೆ.ಶಿವಕುಮಾರ್ ರಿಯಲ್ ಎಸ್ಟೇಟ್ ಮಾಡುವವರು ಎನ್ನುವ ಬಿಜೆಪಿಯವರ ಟೀಕೆಯ ಬಗ್ಗೆ ಕೇಳಿದಾಗ, "ನಾನು ಇಲ್ಲಿ ಅದನ್ನು ಮಾತನಾಡುವುದಿಲ್ಲ. ಬೇರೆ ವೇದಿಕೆಯಲ್ಲಿ ಮಾತನಾಡುತ್ತೇನೆ. ಆರ್.ಅಶೋಕ್ ಹಾಗು ವಿರೋಧ ಪಕ್ಷದ ಯಾರನ್ನಾದರೂ ಕರೆಯಿರಿ ಮಾಧ್ಯಮಗಳ ಮುಂದೆಯೇ ಚರ್ಚೆ ನಡೆಸೋಣ" ಎಂದು ತಿರುಗೇಟು ನೀಡಿದರು.

ಗ್ರೇಟರ್ ಬೆಂಗಳೂರು ವಾಟರ್ ಬೆಂಗಳೂರಾಗಿದೆ ಎನ್ನುವ ವಿಪಕ್ಷಗಳ ಟೀಕೆಗಳ ಬಗ್ಗೆ ಕೇಳಿದಾಗ, "ನಾವು ಬೆಂಗಳೂರಿನ ಎಷ್ಟು ಸಮಸ್ಯೆಗಳನ್ನು ನಿವಾರಣೆ ಮಾಡಿದ್ದೇವೆ ಎಂಬುದರ ಬಗ್ಗೆ ನಮ್ಮ ಜೊತೆ ಚರ್ಚೆಗೆ ಅವರುಗಳು ಬರಲಿ. ಕೇವಲ ಆರೋಪ ಮಾಡಿ ಹಿಟ್ ಅಂಡ್ ರನ್ ಮಾಡುವುದಲ್ಲ. ಅವರು ಪಟ್ಟಿ ಮಾಡಿಕೊಂಡು ಬರಲಿ. ನಾವು ಸುಮ್ಮನೇ ಕುಳಿತಿದ್ದೇವ ಎಂಬುದು ತಿಳಿಯಲಿ" ಎಂದು ಹೇಳಿದರು. ನೀವು ಸವಾಲು ಹಾಕಲು ತಯಾರಿದ್ದೀರಾ ಎಂದು ಕೇಳಿದಾಗ, "ನಾನು ಯಾವಾಗಲೂ ತಯಾರಿದ್ದೇನೆ. ಮಾಧ್ಯಮಗಳಲ್ಲಿಯೇ ಇದಕ್ಕೆ ವೇದಿಕೆ ಸಿದ್ಧ ಮಾಡಿ" ಎಂದರು.

ವಿರೋಧ ಪಕ್ಷಗಳು ಬೆಂಗಳೂರಿನ ಸ್ಥಿತಿಗೆ ಕಾಂಗ್ರೆಸ್ ಕಾರಣ ಎಂದು ಟೀಕೆ ಮಾಡಿರುವ ಬಗ್ಗೆ ಕೇಳಿದಾಗ, "ಅವರ ಕಾಲದಲ್ಲಿ ಏನಾಗಿದೆ ಎಂಬುದನ್ನು ವಿಪಕ್ಷಗಳು ನೋಡಿಕೊಳ್ಳಲಿ. ನಾವಾದರು ಶೇ.70 ರಷ್ಟು ಪ್ರದೇಶಗಳಲ್ಲಿ ಸಮಸ್ಯೆಗಳನ್ನು ನಿವಾರಣೆ ಮಾಡಿದ್ದೇವೆ. ಬೆಂಗಳೂರು ಯೋಜಿತವಾದ ನಗರವಲ್ಲ. ಆದರೂ ನಾವು ನಮ್ಮ ಕರ್ತವ್ಯ ಮಾಡುತ್ತೇವೆ" ಎಂದರು.

# ಸಾಧನ ಸಮಾವೇಶ ಪ್ರಶ್ನಿಸಿ ಜೆಸಿಟಿಯುನಿಂದ ಜನಾಗ್ರಹ ಚಳುವಳಿ

**ದಾವಣಗೆರೆ:** ರಾಜ್ಯ ಸರ್ಕಾರದ ಸಾಧನಾ ಸಮಾವೇಶವನ್ನು ಪ್ರಶ್ನಿಸಿ ಜಿಲ್ಲೆಯ ರೈತ ಹಾಗೂ ಕಾರ್ಮಿಕ ಹೋರಾಟ ಸಮಿತಿಗಳಾದ ಸಂಯುಕ್ತ ಹೋರಾಟ ಕರ್ನಾಟಕ ದಾವಣಗೆರೆ ಜಿಲ್ಲಾ ಸಮಿತಿಯಿಂದ ಮಂಗಳವಾರ ಜಯದೇವ ವೃತ್ತದಲ್ಲಿ ಜನಾಗ್ರಹ ಚಳುವಳಿ ನಡೆಸಲಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ಪ್ರತಿಭಟನಾಕಾರರು, ಕಳೆದ ವಿಧಾನ ಸಭಾ ಚುನಾವಣಾ ಪ್ರಣಾಳಿಕೆಯಲ್ಲಿ ಕರಾಳ ಕೃಷಿ ಕಾಯ್ದೆಗಳ ರದ್ದತಿ, ಬಲವಂತದ ಭೂ ಸ್ವಾಧೀನಕ್ಕೆ ತಡೆ. ಬಗರ್ ಹುಕಂ, ಅರಣ್ಯ ಸಾಗುವಳಿ ರೈತರಿಗೆ ರಕ್ಷಣೆ, ಸಂವಿಧಾನ ಹಕ್ಕುಗಳ ಖಾತರಿ, ಕೋಮುವಾದಿ ಕೃತ್ಯಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ, ರೈತರಿಗೆ ಬೆಂಬಲ ಬೆಲೆ ರಕ್ಷಣೆ ಮುಂತಾದ ಆಶ್ವಾಸನೆಗಳನ್ನು ನೀಡಿ ಅಧಿಕಾರಕ್ಕೆ ಬಂದು ಎರಡು ವರ್ಷಗಳಾದರೂ ಹಿಂದಿನ ಸರ್ಕಾರದ ನೀತಿಗಳನ್ನೇ ಮುಂದುವರೆಸುತ್ತಿದೆ ಎಂದು ಕಿಡಿ–ಕಾರಿದರು.

ರಾಜ್ಯ ಸರ್ಕಾರ, ಖಾಸಗೀಕರಣ ಸೇರಿದಂತೆ ಮೋದಿ ಸರ್ಕಾರದ ವಿರೋಧಿ ಕಾರ್ಪೋರೇಟ್ ಪರವಾದ ಎಲ್ಲಾ ಕ್ರಮಗಳನ್ನು ವೇಗವಾಗಿ ಜಾರಿಗೊಳಿಸುತ್ತಿರುವ ಹಿನ್ನೆಲೆಯಲ್ಲಿ ಎಲ್ಲಾ ರೈತ, ಕಾರ್ಮಿಕ, ದಲಿತ, ವಿದ್ಯಾರ್ಥಿ ಯುವಜನ ಸಂಘಟನೆಗಳ ಪ್ರಮುಖ ಕಾರ್ಯಕರ್ತರು ಭಾಗವಹಿಸಿದ್ದು, ಹಿಂದಿನ ಸರ್ಕಾರದ ಕ್ರಮಗಳನ್ನೇ ಮುಂದುವರೆಸುತ್ತಿರುವ ಔಚಿತ್ಯವನ್ನು ಪ್ರಶ್ನಿಸಿ, ಜನಾಗ್ರಹ ನಿರ್ಣಯಗಳನ್ನು ಈಡೇರಿಸುವಂತೆ ಒತ್ತಾಯಿಸಿದರು.

ಹಿಂದಿನ ಬಿಜೆಪಿ ನೇತೃತ್ವದ ರಾಜ್ಯ ಸರ್ಕಾರ ಅನುಸರಿಸುತ್ತಿದ್ದ ನೀತಿಗಳನ್ನೇ ಈ ಸರ್ಕಾರ ಕೂಡ ಮುಂದುವರೆಸುತ್ತಿದೆ. ಕಾರ್ಮಿಕರು ದುಡಿಮೆ ಅವಧಿಯನ್ನು 8 ಗಂಟೆಯಿಂದ 12 ಗಂಟೆಗೆ ಹಿಂದಿನ ಸರ್ಕಾರ ಏರಿಕೆ ಮಾಡಿತ್ತು. ಈ ಸರ್ಕಾರ ಈ ಕಾರ್ಮಿಕ ವಿರೋಧಿ ಕ್ರಮವನ್ನು ರದ್ದುಪಡಿಸುವ ಬದಲು ಏರಿಕೆಯನ್ನು ನೋಟೀಫಿಕೇಷನ್ ಮಾಡಿದೆ. ನೂರಾರು ವರ್ಷಗಳಿಂದ ಉಳುಮೆ ಮಾಡಿಕೊಂಡು ಬರುತ್ತಿರುವ ಲಕ್ಷಾಂತರ ಬಡ, ದಲಿತ, ಹಿಂದುಳಿದ ವರ್ಗಗಳ ಬಗರ್ ಹುಕುಂ ಹಾಗೂ ಅರಣ್ಯ ಸಾಗುವಳಿ ರೈತರ ಭೂಮಿ ಸಕ್ರಮಾತಿ ಸಮಿತಿ ಮುಂದೆ ತರದೇ ಮೀನಾಮೇಷ ಎಣಿಸುತ್ತಿದೆ ಎಂದರು.

ಇನ್ನು ಹಕ್ಕುಪತ್ರ ಅರ್ಜಿಗಳನ್ನು ತಹಶಿಲ್ದಾರ್ ಹಾಗೂ ಜಿಲ್ಲಾಧಿಕಾರಿಗಳ ಹಂತಗಳಲ್ಲೇ ಕಾನೂನುಬಾಹಿರವಾಗಿ ವಜಾಗೊಳಿಸಿ ರಾಜ್ಯದ ಎಲ್ಲ ಕಡೆ ನಿರ್ದಯವಾಗಿ ಪೊಲೀಸ್ ಹಾಗೂ ಅರಣ್ಯ ಇಲಾಖೆ ಮೂಲಕ ಬಳಸಿ ಒಕ್ಕಲೆಬ್ಬಿಸಲಾಗುತ್ತಿದೆ. ಬಲವಂತದ ಹಾಗೂ ಅನ್ಯಾಯದ ಭೂ ಸ್ವಾಧೀನವನ್ನು ಮನಸೋ ಇಚ್ಛೆ ರಾಜ್ಯಾದ್ಯಂತ ನಡೆಸಲಾಗುತ್ತಿದೆ. ಫಲವತ್ತಾದ ಕೃಷಿ ಭೂಮಿಯನ್ನು ಉಳಿಸಿಕೊಳ್ಳದೇ ಆಹಾರ ಭದ್ರತೆಗೆ ಗಂಭೀರ ಆಪಾಯ ತಂದೊಡ್ಡಿದೆ ಎಂದು ಅಸಮಾಧಾನ ವ್ಯಕ್ತ ಪಡಿಸಿದರು.

# ಜೂ.6 ಬೆಂಗಳೂರಿನಲ್ಲಿ ಶಿವಾಜಿ ಮಹಾರಾಜರ ಕುರಿತಾದ ಪುಸ್ತಕ ಬಿಡುಗಡೆ

ದಾವಣಗೆರೆ: ಪುಣೆಯ ಬರಹಗಾರ ದತ್ತಾಜಿ ನಲವಡೆ ಬರೆದಿರುವ ಮತ್ತು ಪ್ರೊ. ಶಿವಾಜಿರಾವ್ ಚವ್ಹಾಣ್ ಅವರು ಕನ್ನಡಕ್ಕೆ ಅನುವಾದಿಸಿರುವ 'ವಿಶ್ವದ ಮಹಾನಾಯಕ ಛತ್ರಪತಿ ಶಿವಾಜಿ ಮಹಾರಾಜ' ಶೀರ್ಷಿಕೆ ಹೊಂದಿರುವ ಪುಸ್ತಕದ ಲೋಕಾರ್ಪಣೆ ಇದೇ ಜೂನ್ 6ರಂದು ಬೆಂಗಳೂರಿನ ಬೆಂಗಳೂರು ಪ್ರೆಸ್ ಕ್ಲಬ್ ಹಾಲ್‌ನಲ್ಲಿ ಬೆಳಿಗ್ಗೆ 11.30ಕ್ಕೆ ನೆರವೇರಲಿದೆ ಎಂದು ಅನುವಾದಕ ಪ್ರೊ.ಶಿವಾಜಿರಾವ್ ಚವ್ಹಾಣ್ ತಿಳಿಸಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಛತ್ರಪತಿ ಶಿವಾಜಿ ಮಹಾರಾಜರ ವಿಶ್ವಪ್ರಸಿದ್ಧ ಆಡಳಿತ. ಶೌರ್ಯ ಮತ್ತು ಮಾನವ ಕಲ್ಯಾಣ ಕಾರ್ಯಗಳ ನಿಜವಾದ ಇತಿಹಾಸವನ್ನು ಕನ್ನಡ ಮಾತನಾಡುವ ಜನರಿಗೆ ತಲುಪುವಂತೆ ಮಾಡುವ ಸಲುವಾಗಿ ಕನ್ನಡಕ್ಕೆ ಅನುವಾದಿಸಿದ್ದು, ಶಿವಾಜಿ ಮಹಾರಾಜರ 352 ನೇ ಪಟ್ಟಾಭಿಷೇಕದ ದಿನದಂದೇ ಬಿಡುಗಡೆ ಮಾಡಲಾಗುವುದು ಎಂದರು.

ಕನ್ನಡದಲ್ಲಿ ಇದು ಮೊದಲ ಸಮಗ್ರ ಶಿವಾಜಿ ಚರಿತ್ರೆ ಆಗಿದ್ದು, ಛತ್ರಪತಿ ಶಿವಾಜಿ ಮಹಾರಾಜರ ಮಾನವ ಕಲ್ಯಾಣ ಕಾರ್ಯಗಳು, ಅಪರೂಪದ ವಾಸ್ತುಶಿಲ್ಪ, ಸಾಹಿತ್ಯ, ಐತಿಹಾಸಿಕ ಸ್ಥಳಗಳು ಹಾಗೂ ಛತ್ರಪತಿ ಶಿವಾಜಿಯ ವೀರ ಸಹಚರರ ಬಗ್ಗೆಯೂ ಮಾಹಿತಿಯನ್ನು ಈ ಪುಸ್ತಕ ಒಳಗೊಂಡಿದೆ ಎಂದರು.

ತಂಜಾವೂರು ರಾಜ್ಯದ ಯುವರಾಜ ಶಿವಾಜಿರಾಜಿ ಭೋಂಸ್ಲೆ ಗ್ರಂಥ ಬಿಡುಗ–ಡೆ ಮಾಡಲಿದ್ದು, ಮಾಜಿ ಸಚಿವ ಪಿ.ಜಿ.ಆರ್. ಸಿಂಧ್ಯಾ ಅಧ್ಯಕ್ಷತೆ ವಹಿಸಲಿದ್ದಾರೆ. ಈ ವೇಳೆ ವಿಜಯನಗರ ಸಾಮ್ರಾಜ್ಯದ ವಂಶಸ್ಥ ರಾಜಾ ಕೃಷ್ಣದೇವರಾಯ, ಕರ್ನಾಟಕ ವೆಲ್ಪೇರ್ ಅಸೋಸಿಯೇಶನ್ ಅಧ್ಯಕ್ಷ ಎಸ್. ಮನೋಜ್ ಕುಮಾರ್ ರಾಣೋರೆ, ಇತಿಹಾಸಕಾರ ಹಾಗೂ ಸಾಹಿತಿ ದತ್ತಾಜಿ ನಾಲವಾಡ, ಕನ್ನಡ ಭಾಷಾ ಅನುವಾದಕ ಪ್ರೊ.ಶಿವಾಜಿರಾವ್ ಚವ್ಹಾಣ್, ಶಾಹಾಜಿರಾಜಿ ಭೋಂಸ್ಥೆ ಸ್ಮಾರಕ ಸಮಿತಿಯ ಅಣ್ಣಾಜಿರಾವ್ ನಲವಡೆ, ತಾನಾಜಿರಾವ್ ನಲವಡೆ ಉಪಸ್ಥಿತರಿರುವರು ಎಂದು ಹೇಳಿದರು.

# ಬೀಜ, ರಸಗೊಬ್ಬರ ಸಮರ್ಪಕ ಪೂರೈಕೆಗೆ ಶಾಸಕ ಕೆ.ಎಸ್. ಬಸವಂತಪ್ಪ ಸೂಚನೆ

**ದಾವಣಗೆರೆ:** ಮುಂಗಾರು ಹಂಗಾಮಿನ ಪೂರ್ವದಲ್ಲಿಯೇ ರೈತರಿಗೆ ಅಗತ್ಯವಾಗಿ ಬೇಕಾಗಿರುವ ಬಿತ್ತನೆ ಬೀಜ, ರಸಗೊಬ್ಬರ ಸಮರ್ಪಕವಾಗಿ ಪೂರೈಕೆ ಮಾಡಬೇಕೆಂದು ಶಾಸಕ ಕೆ.ಎಸ್. ಬಸವಂತಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸೋಮವಾರ ಈ ಸಾಲಿನ ಮುಂಗಾರು ಹಂಗಾಮಿನ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಈಗಾಗಲೇ ಮುಂಗಾರು ಆರಂಭದ ಪೂರ್ವದಲ್ಲಿಯೇ ಉತ್ತಮ ಮಳೆ ಬರುತ್ತಿದೆ. ರೈತರು ಕೂಡ ಬಿತ್ತನೆಗೆ ಭೂಮಿ ಹದ ಮಾಡಿಕೊಳ್ಳುತ್ತಿದ್ದಾರೆ. ರೈತರಿಗೆ ಯಾವುದೇ ರೀತಿಯಲ್ಲೂ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೃಷಿ ಪರಿಕರಗಳ ಕೃತಕ ಅಭಾವ ಉಂಟಾಗಬಾರದು. ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು.

ಕಳಪೆ ಬಿತ್ತನೆ ಬೀಜ, ರಸಗೊಬ್ಬರ ಪೂರೈಸದಂತೆ ಎಚ್ಚರಿಕೆ ವಹಿಸಬೇಕು. ಪ್ರತಿವರ್ಷ ಈ ಬಗ್ಗೆ ರೈತರಿಂದ ಆರೋಪಗಳು ಕೇಳಿ ಬರುತ್ತಿವೆ. ಬಿತ್ತನೆ ಬೀಜ, ರಸಗೊಬ್ಬರ ರೈತರಿಗೆ ಪೂರೈಸುವ ಪೂರ್ವದಲ್ಲಿ ಪರೀಕ್ಷೆಗೆ ಒಳಪಡಿಸಿ, ಗುಣಮಟ್ಟ ಖಾತ್ರಿಪಡಿಸಿಕೊಂಡು ರೈತರಿಗೆ ಬೀಜ, ರಸಗೊಬ್ಬರ ಪೂರೈಕೆ ಮಾಡಬೇಕು.



ಒಂದು ವೇಳೆ ಕಳಪೆ ಬೀಜ, ರಸಗೊಬ್ಬರ ಪೂ–ರೈಕೆ ಮಾಡಿರುವ ಬಗ್ಗೆ ಆರೋಪಗಳು ಕೇಳಿ ಬಂದ–ರೆ ಕಠಿಣ ಕ್ರಮ ತೆಗೆದುಕೊಳ್ಳಲಾಗುತ್ತದೆ ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಮುಂಗಾರು ಪೂರ್ವದಲ್ಲಿಯೇ ರೈತ ಸಂಪರ್ಕ ಕೇಂದ್ರ, ಸೊಸೈಟಿಗಳ ಮೂಲಕ ರೈತರಿಗೆ ಬೇಕಾದ ಸಜ್ಜೆ, ಮೆಕ್ಕೆಜೋಳ, ಜೋಳ ಸೇರಿದಂತೆ ವಿವಿಧ ಬೆಳೆಯ ಬೀಜಗಳನ್ನು ದಾಸ್ತಾನು ಮಾಡಿ ಒದಗಿಸಬೇಕು. ಅಲ್ಲದೇ ಗುಣಮಟ್ಟದ ಬೀಜ ನೀಡುವಲ್ಲಿ ಇಲಾಖೆ ಹೆಚ್ಚು ಗಮನ ಹರಿಸಬೇಕು. ರೈತ ಸಂಪರ್ಕ ಕೇಂದ್ರದ ಎದುರು ರೈತರು ದಿನವಿಡೀ ಬೀಜ ಸೇರಿದಂತೆ ಕೃಷಿ ಉಪಕರಣಗಳಿಗಾಗಿ ಕಾದು ಕುಳಿತುಕೊಳ್ಳುವ ಪರಿಸ್ಥಿತಿ ನಿರ್ಮಾಣ ಆಗಬಾರದು. ಅಧಿಕಾರಿಗಳು ಇಂತಹ ಪರಿಸ್ಥಿತಿಯನ್ನು ದೂರ ಮಾಡಬೇಕೆಂದು ತಾಕೀತು ಮಾಡಿದರು. ಸರ್ಕಾರ ನಿಗದಿಪಡಿಸಿದ ದರದಲ್ಲಿ ಬೀಜ, ರಸಗೊಬ್ಬರ, ಕೀಟನಾಶಕ ಮಾರಾಟ ಮಾಡಿ ರಶೀದಿ ನೀಡಬೇಕು. ಪರಿಕರಗಳನ್ನು ಹೆಚ್ಚಿನ ಬೆಲೆಗೆ ಮತ್ತು ಅವಧಿ ಮೀರಿ ಮಾರಾಟ ವಾಡುವುದು ಕಂಡು ಬಂದಲ್ಲಿ ಮುಲಾಜಿಲ್ಲದೇ ಕ್ರಮ ಜರುಗಿಸಲಾಗುವುದು. ಕೆಲವು ಸೊಸೈಟಿಗಳಲ್ಲಿ ರಶೀದಿ ಹರಿಯದೆ ಹೆಚ್ಚಿನ ಬೆಲೆಯಡಿ ರಸಗೊಬ್ಬರ ಮಾರಾಟ ಮಾಡಿದ ಬಳಿಕ ಕಡಿಮೆ ದರದಲ್ಲಿ ರಶೀದಿ ಹರಿಯುವುದು ಕಂಡು ಬರುತ್ತಿದ್ದು, ಇದನ್ನು ತಪ್ಪಿಸಬೇಕು. ರೈತರಿಗೆ ಹೆಚ್ಚಿನ ಹೊರೆ ಮಾಡದಂತೆ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳಬೇಕೆಂದು ಸೂಚನೆ ನೀಡಿದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮಲ್ಲಿ ಕೆಲವರು ಇದು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು. ಹೆಣಟಿಜಜಜಿಟಿಜಜಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ. ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ. ಧರ್ಮಕಾರ್ಯಗಳು / ಹವನಗಳು / ಮಂಗಳಕರ ಸಮಾರಂಭಗಳನ್ನು ಮನೆಯಲ್ಲಿ ಕೈಗೊಳ್ಳಲಾಗುವುದು

### ವೃಷಭ ರಾಶಿ

ನಿಮ್ಮ ಅನಿರೀಕ್ಷಿತ ಸ್ವಭಾವ ನಿಮ್ಮ ವೈವಾಹಿಕ ಸಂಬಂಧವನ್ನು ಹಾಳು ಮಾಡಲು ಬಿಡಬೇಡಿ. ಇದನ್ನು ತಡೆಯುವುದನ್ನು ಖಚಿತಪಡಿಸಿಕೊಳ್ಳಿ, ಇಲ್ಲದಿದ್ದಲ್ಲಿ ನೀವು ನಂತರ ವಿಷಾದಪಡಬಹುದು. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ. ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ.

### ಮಿಥುನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್ಗಳು ಮತ್ತು ಮ್ಯೂಚುವಲ್ ಫಂಡ್ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ನಿಮ್ಮ ಮನೆಯ ಪರಿಸರದಲ್ಲಿ ಒಳ್ಳೆಯ ಬದಲಾವಣೆಗಳನ್ನು ಮಾಡುತ್ತೀರಿ. ಪ್ರೇಮ ಧನಾತ್ಮಕ ಕಂಪನಗಳನ್ನು ತೋರಿಸುತ್ತದೆ ಇಂದು ನೀವು ನಿಮ್ಮ ಕೆಲಸಗಳನ್ನು ಸಮಯದಲ್ಲೇ ಪೂರೈಸಲು ಪ್ರಯತ್ನಿಸಬೇಕು.

### ಕರ್ಕ ರಾಶಿ

ನಿಮ್ಮನ್ನು ಫಿಟ್ ಆಗಿ ಮತ್ತು ಚೆನ್ನಾಗಿರಿಸಿಕೊಳ್ಳಲು ಹೆಚ್ಚಿನ ಕ್ಯಾಲೋರಿಯ ಆಹಾರವನ್ನು ತಪ್ಪಿಸಿ ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಮಗಳ ಅನಾರೋಗ್ಯ ನಿಮ್ಮ ಮನಸ್ಸಿಗೆ ಅಸಮಾಧಾನ ತರುತ್ತದೆ. ಅವಳು ತನ್ನ ಅನಾರೋಗ್ಯದ ಜೊತೆ ಹೋರಾಡುತ್ತಿದ್ದ ಹಾಗೆ ಅವಳ ಚೈತನ್ಯವನ್ನು ಉದ್ದೀಪನಗೊಳಿಸಲು ಅವಳಿಗೆ ನಿಮ್ಮ ಪ್ರೀತಿಯನ್ನು ನೀಡಿ.

### ಸಿಂಹ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು, ಎಂದು ನಿಮಗೆ ನನ್ನ ಸಲಹೆ ನೀಡಲಾಗಿದೆ, ಅದನ್ನು ಮಾಡುವುದು ನಿಮ್ಮ ಆರೋಗ್ಯವನ್ನು ಹದಗೆಡಿಸುತ್ತದೆ ಮತ್ತು ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸಹ ಹದಗೆಡಿಸುತ್ತದೆ.

### ಕನ್ಯಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್ಗೆ ಭೇಟಿ ನೀಡಿ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಇಂದು ಕಾರ್ಡ್ ನಲ್ಲಿ ಪ್ರಣಯಶಾಲಿ ಪ್ರಭಾವಗಳು ಹೆಚ್ಚಾಗಿವೆ. ನಿಮ್ಮ ಗತಕಾಲದ ಯಾರೋ ನಿಮ್ಮನ್ನು ಸಂಪರ್ಕಿಸಬಹುದು ಮತ್ತು ಇದನ್ನು ಒಂದು ಸ್ಮರಣೀಯ ದಿನವಾಗಿಸಬಹುದು.

### ತುಲಾ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು. ಅವನು(ಳು) ನಿಮ್ಮ ನಿರೀಕ್ಷೆಗಳನ್ನು ಪೂರೈಸುವುದು ನಿಮ್ಮ ಕನಸನ್ನು ನನಸಾಗಿಸಬಹುದು

### ವೃಶ್ಚಿಕ ರಾಶಿ

ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ ನಿಮ್ಮ ಮನಸ್ಸಿನಲ್ಲಿ ಅನೇಕ ವಿಷಯಗಳಿರುತ್ತವೆ ಹಾಗೂ ನೀವು ಯಾವುದನ್ನು ಅನುಸರಿಸಬೇಕೆನ್ನುವ ಸಮಸ್ಯೆ ಹೊಂದಿರುತ್ತೀರಿ.

### ಧನು ರಾಶಿ

ನಿಮ್ಮ ಮನಸ್ಸಿನಲ್ಲಿ ಸಕಾರಾತ್ಮಕ ಆಲೋಚನೆಗಳನ್ನು ತನ್ನಿ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ – ಹಣವನ್ನು ಹೂಡುವ ಪ್ರಶ್ನೆ ಬಂದಾಗ ಆತುರದ ನಿರ್ಧಾರಗಳನ್ನು ಮಾಡಬೇಡಿ. ನಿಮ್ಮ ಹತ್ತಿರದ ಜನರು ವೈಯಕ್ತಿಕ ಮಟ್ಟದಲ್ಲಿ ನಿಮಗೆ ಸಮಸ್ಯೆಗಳನ್ನು ಸೃಷ್ಟಿಸುತ್ತಾರೆ.

### ಮಕರ ರಾಶಿ

ಕೆಲಸದ ಒತ್ತಡ ಇಂದು ಸ್ವಲ್ಪ ಒತ್ತಡ ತರಬಹುದು. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ನೀವು ಅಪರೂಪಕ್ಕೆ ಭೇಟಿ ಮಾಡುವ ಜನರನ್ನು ಸಂಪರ್ಕಿಸಲು ಒಳ್ಳೆಯ ದಿನ. ನಿಮ್ಮ ಪ್ರಿಯತಮೆಯ ಜೊತೆಗಿನ ಸಂಬಂಧ ಯಾರಾದರೊಬ್ಬರ ಹಸ್ತಕ್ಷೇಪದಿಂದ ಹಾಳಾಗಬಹುದು. ನಿಮ್ಮ ಅಭಿಪ್ರಾಯ ಕೇಳಿದಾಗ ಅದನ್ನು ವ್ಯಕ್ತಪಡಿಸಲು ನಾಚಬೇಡಿ ಇದಕ್ಕೆ ನಿಮಗೆ ತುಂಬ ಮೆಚ್ಚುಗೆ ಸಿಗುತ್ತದೆ.

### ಕುಂಭ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು. ನಿಮ್ಮ ಜ್ಞಾನದಾಹ ನಿಮಗೆ ಹೆಣಟಿಜಜಜಿಟಿಜಜಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ಯಾರಾದರೂ ನಿಮ್ಮ ಹೆಸರು ಕೆಡಿಸಲು ಪ್ರಯತ್ನಿಸಬಹುದದ್ದರಿಂದ ಜಾಗರೂಕರಾಗಿರಿ.

### ಮೀನ ರಾಶಿ

ನಿಮ್ಮ ಕುಟುಂಬದ ನೀವು ಕಿರಿಕಿರಿ ಸಾಧ್ಯವಾಯಿತು ಇದು ನಿಮ್ಮಿಂದ ಸಾಕಷ್ಟು ನಿರೀಕ್ಷಿಸುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು.

# ಹೊಂಡದಗಣಪತಿ ಹಾಡು ಲೋಕಾರ್ಪಣೆ

**ಚಿಕ್ಕಮಗಳೂರು:** ಧಾರ್ಮಿಕವಾಗಿ ಸೇವೆ ಸಲ್ಲಿಸಲು ಸಂಸ್ಕಾರವೇ ಪ್ರೇರಣೆ ನೀಡುತ್ತದೆ. ಇಲ್ಲಿಆರ್ಥಿಕ ಲಾಭದ ಇಚ್ಛೆಗಳಿರುವುದಿಲ್ಲ. ಕಲ್ಕಟ್ಟೆ ಗಾನ ದೀವಿಗೆ ಈ ಹಾದಿಯಲ್ಲಿ ಸಾಗುತ್ತಿದೆಎಂದುಕೋಟೆ ವಿನಾಯಕ ನಗರದ ಹೊಂಡದಗಣಪತಿದೇವಾಲಯದಅರ್ಚಕ ಶ್ರೀ ಕುಮಾರ ಭಟ್ ತಿಳಿಸಿದರು.

ಕಲ್ಕಟ್ಟೆ ಪುಸ್ತಕದ ಮನೆ, ಅಖಿಲ ಭಾರತೀಯ ಸಾಹಿತ್ಯ ಪರಿಷತ್, ಶ್ರೀ ಗುರುಕೃಪಾ ಸಂಗೀತ ಸೇವಾ ಟ್ರಸ್ಟ್, ಸೂರಂಕಣ, ದೀವಿಗೆ ಬಳಗದ ಆಶ್ರಯದಲ್ಲಿಶ್ರೀ ವಿನಾಯಕನಗರದ ಹೆ ೂಂಡದಗಣಪತಿದೇವಾಲಯದಲ್ಲಿಇತ್ತೀಚ 'ಗೆಏರ್ಪಡಿಸಿದ್ದ ಭಕ್ತಿಗೀತೆ ಲೋಕಾರ್ಪಣೆ ಸಮಾರಂಭದಲ್ಲಿಅವರು ಮಾತನಾಡಿದರು.

ಭಕ್ತಿಗೀತೆಗಳನ್ನು ನಿರಂತರವಾಗಿ ಬರೆಯುತ್ತಿದ್ದಕಲ್ಕಟ್ಟೆಯ ಮಲ್ಲೇಶರಾವ್ಅವರ ಸವಿನೆನಪಿನಲ್ಲಿ ಈ ಗಾನ ಸರಣಿ ಹೊರಬರುತ್ತಿರುವುದು ವಿಶೇಷ. ಶೃಂಗೇರಿಯಲ್ಲಿ ಮಲ್ಲೇಶಯ್ಯಎಂದರೆಅತಿಜನಪ್ರಿಯ ಹೆಸರು. ಅವರ ಪುತ್ರ ನಾಗರಾಜರಾವ್ಕಲ್ಕಟ್ಟೆಯ ವರುಇಲ್ಲಿಅವರ ಸ್ಮರಣೆಯನ್ನುಧಾರ್ಮಿಕ ಕ್ಷೇತ್ರಗಳಿಗೆ ಗೀತೆ ಬರೆಯುವುದರ ಮೂಲಕ ಮಾಡುತ್ತಿರುವುದು ನಿಜಕ್ಕೂಅನುಕರಣೀಯಎಂ ದುಅವರು ಹೇಳಿದರು.

ಲೇಖಕ ಕೆಂಪನಹಳ್ಳಿ ಚಂದ್ರಶೇಖರ್ ಮಾತನಾಡಿಆತ್ಮೀಯ ವಲಯದವರಿಗೆ ನಾಗರಾಜರಾವ್ಕಲ್ಕಟ್ಟೆ, ಕೆ.ಎನ್.ನಾಗಭೂಷಣ್ ಹಾಗೂ ರೇಖಾನಾಗರಾಜರಾವ್ಅವರು ಈ ಭಕ್ತಿಗೀತೆಯ ಸರಣಿ ಮೂಲಕ ವಾರವಾರಟೆಂಪಲ್ರನ್ ಮಾಡಿಸುತ್ತಿರುವುದು ನಿಜಕ್ಕೂಖುಷಿಯೆನಿಸುತ್ತಿದೆ. ಸಾಮಾಜಿಕ ಜಾಲತಾಣಗಳಲ್ಲಿ ನೋಡಿದಾಗ ಈ ಏಳು ತಿಂಗಳಲ್ಲಿ ಚಿಕ್ಕಮಗಳೂರಿನ 31 ದೇವಾಲಯಗಳ



ಶ್ರೀ ವಿನಾಯಕನಗರದ ಹೊಂಡದಗಣಪತಿ ದೇವಾಲಯದಲ್ಲಿಇತ್ತೀಚೆಗೆ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಭಕ್ತಿಗೀತೆ ಲೋಕಾರ್ಪಣೆಗೊಂಡಿತು.

ಕುರಿತು ಭಕ್ತಿಗೀತೆದೊರೆಯುತ್ತದೆ. ಇದು ನಿಜಕ 'ೂಧಾರ್ಮಿಕರಂಗದಸಾಧನೆಯೇ ಸರಿ. ಇದು ಶತಕದಾಟಲಿ ಎಂದು ಶುಭಹಾರೈಸಿದರು.

ಹಿನ್ನೆಲೆ ಸಂಗೀತ ನೀಡಿದಕೆ. ಎನ್.ನಾಗಭೂಷಣ್ ನಮ್ಮೂರಿನ ದೇವಾಲಯಗಳಿಗೆ ಅವುಗಳದೇ ಆದ ಪರಂಪರಾಗತ ಆಚರಣೆಗಳಿವೆ. ಇಲ್ಲಿರುವ ಗೀತೆಗಳು ವಾರ್ಷಿಕ ಆಚರಣೆಗಳ ಬಗ್ಗೆಯೂ ಮಾಹಿತಿ ನೀಡುವುದಲ್ಲದೆ, ಇತಿಹಾಸವನ್ನುಚಿಕ್ಕದಾಗಿ ಪರಿಚಯಿಸುವ ಕೆಲಸ ಮಾಡುತ್ತವೆಎಂದರು.

ಗಿಟಾರ್ ವಾದಕರಾದಜಯಂತಾಚಾರ್ ಮಾತನಾಡಿ ಮಧುವಂತಿರಾಗದಲ್ಲಿರುವಇಂದು ಬಿಡುಗಡೆಯಾದಗೀತೆಯುಅತ್ಯಂತ ಸುಮಧುರವಾಗಿದೆ. ಸಾಹಿತ್ಯ, ಸಂಗೀತ,ಗಾಯನಎಲ್ಲರಂಗದಲ್ಲೂ ಈ ಗೀತೆ ಭಕ್ತಿಯಚೌಕಟ್ಟಿನಲ್ಲಿ ಯಶಸ್ವಿಯಾಗಿದೆ ಎಂದರು.

ಇದೇ ವೇಳೆ ನಿರ್ಮಾಪಕಿ, ಅ.ಭಾ.ಸಾ.ಪ ಸಾಂಸ್ಕೃತಿಕ ಸಂಚಾಲಕಿ ರೇಖಾನಾಗರಾಜರಾವ್, ನಾಗರಾಜರಾವ್ಕಲ್ಕಟ್ಟೆ, ನಾಗಭೂಷಣ್ಕೆ. ಎನ್., ಜಯಂತ್ಆಚಾರ್, ಕೆಂಪನಹಳ್ಳಿ ಚ ಂದ್ರಶೇಖರ್ಅವರಿಗೆದೇವಾಲಯದಅನುಗ್ರಹ ಪ್ರಸಾದ ನೀಡಿಗೌರವಿಸಲಾಯಿತು.

ಹಿರಿಯ ಪುರೋಹಿತರಾದ ವಸಂತಭಟ್, ಕವಿತಾ, ನೇಕಾರಬೀದಿಯ ಶ್ರೀ ಕೋದಂಡರಾಮಸ್ವಾಮಿ ಸಂಘದಅಧ್ಯಕ್ಷರಾದರಾಮಣ್ಣ, ಅಂಚೆ ಇಲಾಖೆಯತಾರಾ ಮೊದಲಾದವರು ಉಪಸ್ಥಿತರಿದ್ದರು. ದೇವಾಲಯದ ಭಕ್ತವೃಂದದವರು ನಡೆಸಿದ ಅಷ್ಟೋತ್ತರ ನಾಮ ಸ್ಮರಣೆಆಕರ್ಷಣೀಯವಾಗಿತ್ತು.

## ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆಯಲು ಅರ್ಜಿ ಆಹ್ವಾನ

**ದಾವಣಗೆರೆ :** ಮಲೇಬೆನ್ನೂರು ಪುರಸಭೆಯ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ ಮಿಷನ್ (ನ)–2.0 ಯೋಜನೆಯ ಮಾಹಿತಿ ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನತ್ಯಾಜ್ಯ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತಂತೆ ನಗರ ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ಸ್ವ–ಸಹಾಯ ಗುಂಪುಗಳ ಸದಸ್ಯೇತರ ನೇಮಕಾತಿ (ಘನತ್ಯಾಜ್ಯ, ಪಾರಂಪರಿಕ ತ್ಯಾಜ್ಯ, ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ಸಿಡಿ ತ್ಯಾಜ್ಯ ನಿರ್ವಹಣೆ ಸ್ವಚ್ಛ–ಸರ್ವೇಕ್ಷಣ, ನಗರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಓಡಿಎಫ್, ಓಡಿಎಫ್, ಸ್ಟಾರ್ ರೇಟಿಂಗ್ಸ್ ಮತ್ತು ಇತರೆ ವಿಷಯಗಳ ಕುರಿತು ಮನೆ ಮನೆಗೂ ಭೇಟಿ ನೀಡಿ ನೇರವಾಗಿ ಮಾತನಾಡುವುದರ ಮೂಲಕ ಐ.ಇ.ಸಿ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಸ್ವ–ಸಹಾಯ ಗುಂಪುಗಳಿಂದ 2 ಸದಸ್ಯರುಗಳನ್ನು ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಮಹಿಳಾ ಅಭ್ಯರ್ಥಿಗಳು ಅಗತ್ಯ ದಾಖಲಾತಿಯೊಂದಿಗೆ ಮೇ.23 ರೊಳಗಾಗಿ ನಿಗಧಿತ ಅರ್ಜಿ ನಮೂನೆಯನ್ನು ಕಚೇರಿಯಿಂದ ಪಡೆದು ಮುಖ್ಯಾಧಿಕಾರಿಗಳು, ಪುರಸಭೆ, ಮಲೇಬೆನ್ನೂರು ವಿಳಾಸಕ್ಕೆ ದ್ವಿ–ಪ್ರತಿಯಲ್ಲಿ ಸಲ್ಲಿಸಬೇಕೆಂದು ಮುಖ್ಯಾಧಿಕಾರಿ ತಿಳಿಸಿದ್ದಾರೆ.

## ಮಾಜಿ ಸೈನಿಕರಿಗೆ ಆಫೀಸ್ ಅಸಿಸ್ಟೆಂಟ್ ಹುದ್ದೆಗೆ ಅರ್ಜಿ ಆಹ್ವಾನ

**ದಾವಣಗೆರೆ :** ಬ್ಯಾಂಕ್ ಆಫ್ ಬರೋಡದಲ್ಲಿ ಮಾಜಿ ಸೈನಿಕರಿಗಾಗಿ ಆಫೀಸ್ ಅಸಿಸ್ಟೆಂಟ್ ಹುದ್ದೆಗಳಿಗೆ ಮಾಜಿ ಸೈನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ವೆಬ್ ಸೈಟ್ www.bankofbaroda.co.in ನಲ್ಲಿ ಮೇ.23 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಬ್ಯಾಂಕ್‌ನ ಜಾಹೀರಾತು ಸಂಖ್ಯೆ–ಃಃಠಃ/ಊಖಏ/ಖಇಅ/ಂಗಿಖ//2025/05 ವೀಕ್ಷಿಸಬಹುದೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕರಾದ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

### ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ –2025

# ಸಮೀಕ್ಷಾದಾರರಿಂದ ಮನೆ ಮನೆ ಭೇಟಿ ಸಮೀಕ್ಷೆ ಅವಧಿ ಮೇ 25 ರವರೆಗೆ ವಿಸ್ತರಣೆ

**ಗದಗ:** ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ –2025 ಕುರಿತಂತೆ ಸಮೀಕ್ಷಾದಾರರಿಂದ ಮನೆ ಮನೆ ಭೇಟಿ ಸಮೀಕ್ಷೆಯನ್ನು ಮೇ 25ರವರೆಗೆ ವಿಸ್ತರಿಸಲಾಗಿದ್ದು ಸಮೀಕ್ಷೆದಾರರಿಗೆ ಮಾಹಿತಿ ನೀಡಿ ಸಹಕರಿಸಬೇಕೆಂದು ಜಿಲ್ಲಾದಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಸೋಮವಾರ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ –2025 ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮನೆ ಮನೆಯ ಭೇಟಿ ಸಂದರ್ಭದಲ್ಲಿ ತಮ್ಮ ಮಾಹಿತಿಯನ್ನು ಒದಗಿಸದೇ ಇದ್ದಲ್ಲಿ ಮೇ 26, 27, 28 ರಂದು ವಿಶೇಷ ಶಿಬಿರಗಳಲ್ಲಿ ಮಾಹಿತಿ ನೀಡಲು ಅವಕಾಶವಿದೆ. ನಿಮ್ಮ ವ್ಯಾಪ್ತಿಯ ಮತಗಟ್ಟೆಯಲ್ಲಿ ತಮ್ಮ ಆಧಾರ ಕಾರ್ಡ ಹಾಗೂ ರೇಷನ್ ಕಾರ್ಡನೊಂದಿಗೆ ಮಾಹಿತಿ ನೀಡಬೇಕು. ಸರ್ಕಾರದ ಸೌಲಭ್ಯಗಳು ಪರಿಶಿಷ್ಟ ಜಾತಿಯ ಒಳಪಂಗಡಗಳಿಗೆ ಸಮಾನವಾಗಿ ತಲುಪಬೇಕು ಎನ್ನುವ ಹಿನ್ನೆಲೆಯಲ್ಲಿ ಈ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ.



ಇದೊಂದು ರಾಜ್ಯ ಸರ್ಕಾರದ ಮಹತ್ವದ ಹೆಜ್ಜೆಯಾಗಿದೆ ಎಂದರು.

ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ–2025 ಕುರಿತಂತೆ ಆನ್‌ಲೈನ್ ಮೂಲಕ ಸ್ವಯಂ ಘೋಷಣೆ https://schedulecastesurvey.karnataka.gov.in/selfdeclaration ವೆಬ್‌ಸೈಟ್ ವಿಳಾಸದಲ್ಲಿ ಮೇ 19 ರಿಂದ 28 ರವರೆಗೆ ಮರು ನಿಗದಿ ಪಡಿಸಲಾಗಿದೆ. ಈ ಕುರಿತು ನಗರಸಭೆ ಹಾಗೂ ಕಸ ವಿಲೇವಾರಿ ವಾಹನದಲ್ಲಿ ಧ್ವನಿವರ್ಧಕದ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಮತ್ತು ಪೊಲೀಸ ಠಾಣೆಗಳಲ್ಲಿ ಈ ಕುರಿತು ಪ್ರಚಾರ ಕೈಗೊಳ್ಳಲು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು. ಇದೇ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ –2025 ಕುರಿತ ಭಿತ್ತಿ ಪತ್ರವನ್ನು ಬಿಡುಗಡೆ ಮಾಡಲಾಯಿತು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಮಾತನಾಡಿ ಮನೆ ಮನೆಯ ಭೇಟಿ ಸಂದರ್ಭದಲ್ಲಿ ತಮ್ಮ ಮಾಹಿತಿಯನ್ನು ನೀಡದವರು ನೇರವಾಗಿ ಆನ್‌ಲೈನ್ ಮೂಲಕ ಸ್ವಯಂ ಘೋಷಣೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ವಿವರಕ್ಕೆ ಸಹಾಯವಾಣಿ ಸಂಖ್ಯೆ 9481359000 ಸಂಪರ್ಕಿಸಬಹುದಾಗಿದೆ ಎಂದು ಸಭೆಗೆ ತಿಳಿಸಿದರು.ಸಭೆಯಲ್ಲಿ ಗಣತಿದಾರರಿಗೆ ಸರಿಯಾಗಿ ಮಾಹಿತಿ ಇಂಧೀಕರಿಸುವ ಕುರಿತು ಇರುವ ಗೊಂದಲಗಳ ಬಗ್ಗೆ ಹಾಗೂ ಸಮೀಕ್ಷೆಗೆ ಒಳಪಡುವ ಕುಟುಂಬಗಳು ನೀಡುವ ಮಾಹಿತಿಯನ್ನು ಸರಿಯಾಗಿ ನಮೂದಿಸುವ ಕುರಿತು ಅಲ್ಲದೇ ಬೇಡ ಜಂಗಮ ಪ್ರಮಾಣ ಪತ್ರ ಪಡೆಯದವರು ಸಮೀಕ್ಷಾ ಸಂದರ್ಭದಲ್ಲಿ ಜಾತಿ ನಮೂದಿಸುವ ಕುರಿತು ಇರುವ ಗೊಂದಲಗಳ ಬಗ್ಗೆ ಸಮಾಜದ ಮುಖಂಡರುಗಳು ಸಭೆಯ ಗಮನಕ್ಕೆ ತಂದರು. ಒಟ್ಟಾರೆ ಸಮೀಕ್ಷೆ ಸರಿಯಾಗಿ ಆಗಬೇಕು ಎಂಬ ಒಕ್ಕೊರಲ ಬೇಡಿಕೆ ಸಮಾಜದ ಮುಖಂಡರಿಂದ ವ್ಯಕ್ತವಾಯಿತು. ಮಾದಿಗ, ಮಾದಾರ , ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಜಾತಿಗಳ ನಮೂದಿಸುವ ಕುರಿತಂತೆಯೂ ಸಭೆಯಲ್ಲಿ ಸುದೀರ್ಘವಾಗಿ ಚರ್ಚೆ ನಡೆಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಶ್ರೀಮತಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಡಿವೈಎಸ್‌ಪಿ ಮಹಾಂತೇಶ ಸಜ್ಜನ , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ, ನಗರಾಬಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮುದಾಯದವರು ಪಾಲ್ಗೊಂಡಿದ್ದರು.

# ಮೂಲಭೂತ ಸೌಕರ್ಯಗಳು ಸಮ್ಮಿಲನಗೊಂಡಾಗ ಗ್ರಾ.ಪಂ ಅಭಿವೃದ್ಧಿ

**ಚಿಕ್ಕಮಗಳೂರು:** ಅಧಿಕಾರ ವಿಕೇಂದ್ರೀಕರಣದ ಮೂಲ ಸ್ಥಾನ ಗ್ರಾಮ ಪಂಚಾಯಿತಿ ಅಧಿಕಾರದ ಜೊತೆಗೆ ಮೂಲಭೂತ ಸೌಕರ್ಯಗಳು ಒಟ್ಟಿಗೆ ಸಮ್ಮಿಲನಗೊಂಡಾಗ ಆ ಪಂಚಾಯಿತಿ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಮೂಡಿಗೆರೆ ಕ್ಷೇತ್ರದ ಶಾಸಕಿ ನಯನ ಮೋಟಮ್ಮ ಅಭಿಪ್ರಾಯಿಸಿದರು.

ಅವರು ಇಂದು ಕ್ಷೇತ್ರದ ವ್ಯಾಪ್ತಿಯ ಅಂಬಳೆಯಲ್ಲಿ ಗ್ರಾಮ ಪಂಚಾಯಿತಿ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ವರೂ ಪಕ್ಷಾತೀತವಾಗಿ ಒಗ್ಗಟ್ಟಿನಿಂದ ಕೆಲಸ ಮಾಡಿದ ಪರಿಣಾಮ ಕಳೆದ 5 ತಿಂಗಳಲ್ಲಿ ಗ್ರಾಮ ಪಂಚಾಯಿತಿಯ ಸುಸಜ್ಜಿತ ನೂತನ ಕಟ್ಟಡ ನಿರ್ಮಾಣವಾಗಿದೆ ಎಂದು ಶ್ಲಾಘಿಸಿದ ಅವರು, ಈಗಾಗಲೇ ಕ್ಷೇತ್ರದ ವ್ಯಾಪ್ತಿಯ ಮಲೆನಾಡು ಭಾಗದಲ್ಲಿ ಹಲವಾರು ಗ್ರಾಮ ಪಂಚಾಯಿತಿ ನೂತನ ಕಟ್ಟಡವನ್ನು ಸಾರ್ವಜನಿಕ ಸಮರ್ಪಣೆ ಮಾಡಿದ್ದೇವೆಂದು ಹೇಳಿದರು.

ಆದರೆ, ಅಂಬಳೆ ಗ್ರಾಮ ಪಂಚಾಯಿತಿಯಲ್ಲಿ ಅಧ್ಯಕ್ಷರು, ಸದಸ್ಯರು ಒಗ್ಗಟ್ಟಾಗಿ ಜನಪರ ಕೆಲಸ ಮಾಡುತ್ತಿರುವುದರಿಂದ ಸಮಸ್ಯೆಗಳು ನನ್ನ ಬಳಿ ಬರುವುದು ಕಡಿಮೆಯಾಗಿದೆ.ಮುಂದಿನ ದಿನಗಳಲ್ಲಿ ಈ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಜೀವಿನಿ ಕಟ್ಟಡ ನಿರ್ಮಾಣವಾಗಬೇಕು, ಇದಕ್ಕೆ ಬೇಕಾದ ಅನುದಾನ ನೀಡುವುದಾಗಿ ಭರವಸೆ ನೀಡಿದರು.



ಅಂಬಳೆ ಗ್ರಾಮ ಪಂಚಾಯಿತಿಯಲ್ಲಿ ಜನರು ತೋರಿಸುವ ಪ್ರೀತಿ ಮಲೆನಾಡು ಭಾಗದಲ್ಲಿ ಸಿಗುತ್ತಿಲ್ಲ. ಕೆಲಸದ ಒತ್ತಡದಲ್ಲಿ ಮಾನವೀಯತೆ ಮರೆತಿರುತ್ತೇವೆ, ಪುನಃ ಆ ಪ್ರೀತಿ ಮರುಕಳಿಸುವಂತೆ ತೋರಿದ ಹಿರಿಯರಿಗೆ ತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದರು.

ರಾಜ್ಯ ಪರಿಸರ ಮಾಲಿನ್ಯ ಮಾಪನ ಪ್ರಾಧಿಕಾರದ ಅಧ್ಯಕ್ಷ ಎ.ಎನ್. ಮಹೇಶ್ ಮಾತನಾಡಿ, ಇತಿಹಾಸ ಹಾಗೂ ಐತಿಹಾಸಿಕವಾಗಿ ಇರುವ ದೊಡ್ಡ ಗ್ರಾಮ ಪಂಚಾಯಿತಿ ಇದಾಗಿದ್ದು, 94 ವರ್ಷಗಳ ನಂತರ ನೂತನ ಕಟ್ಟಡ ನಿರ್ಮಾಣ ಆಗಿರುವುದು ಯೋಗಾ ಯೋಗಗಳ ಫಲ ಎಂದು ಹೇಳಿದರು.

ಐತಿಹಾಸಿಕ ಹೊಯ್ಸಳ ಕಾಲದ ಶಿಲ್ಪಕಲೆ, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿ ಎ.ಆರ್ ಕೃಷ್ಣಶಾಸ್ತ್ರಿ ಜನಿಸಿದ ಗ್ರಾಮದಲ್ಲಿ ನೂತನ ಕಟ್ಟಡ ನಿರ್ಮಾಣವಾದ ನಂತರ ಸಾರ್ವಜನಿಕರಿಗೆ ಸಮರ್ಪಣೆಯಾಗಿ ಐಎಎಸ್, ಕೆಎಎಸ್ ಮುಂತಾದ ಸ್ಪರ್ಧಾ ಪರೀಕ್ಷೆಗಳಿಗೆ ತರಬೇತಿ ನೀಡುವ ಕೇಂದ್ರವಾಗಬೇಕು. ಜೊತೆಗೆ ಗ್ರಂಥಾಲಯವನ್ನು ಸ್ಥಾಪಿಸಿ ಗ್ರಾಮಸ್ಥರ ಸಾರ್ವಜನಿಕ ಕಾರ್ಯಕ್ರಮಗಳಿಗೆ ಸದ್ಬಳಕೆಯಾಗಲಿ ಎಂದು ಹಾರೈಸಿದರು.

ಮಾಜಿ ಪ್ರಧಾನಿ ದಿ.ರಾಜೀವ್ ಗಾಂಧಿಯವರ ಅಧಿಕಾರ ವಿಕೇಂದ್ರೀಕರಣ ಆಗಬೇಕೆಂಬ ಕನಸು ಈ ಮೂಲಕ ನನಸಾಗಿದ್ದು, ನನ್ನ ರಾಜಕೀಯ ಬೆಳವಣಿಗೆಗೆ ಅಂಬಳೆ ಹೋಬಳಿಯ ಜನರ ಆಶೀರ್ವಾದ ಕಾರಣ ಎಂದು ಸ್ಮರಿಸಿದರು.

ಮಾಜಿ ಸಚಿವೆ ಮೋಟಮ್ಮನವರ ನೇತೃತ್ವದಲ್ಲಿ ಜಾರಿಗೆ ಬಂದ ಸ್ತ್ರೀಶಕ್ತಿ ಸ್ವಸಹಾಯ ಸಂಘಗಳು ಮಹಿಳಾ ಆರ್ಥಿಕ ಸಬಲೀಕರಣಗೊಳ್ಳಲು ಪ್ರಮುಖ ಪಾತ್ರ ವಹಿಸಿದವು ಎಂದು ಹೇಳಿದರು.

## ನಗರಸಭೆಗೆ 10 ಕೋಟಿ ರೂ. ಮಂಜೂರು

**ಚಿಕ್ಕಮಗಳೂರು:** ನಗರಸಭೆಗೆ ಎಸ್.ಎಫ್.ಸಿ. ವಿಶೇಷ ಅನುದಾನದಡಿ 10 ಕೋಟಿ ರೂ.ಗಳ ಕ್ರಿಯಾ ಯೋಜನೆಯು ಮಂಜೂರಾಗಿದ್ದು, ಅದರಂತೆ ಈ ಯೋಜನೆಯಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ.

ಈ ಬಗ್ಗೆ ಪ್ರಕಟಣೆಯೊಂದನ್ನು ನೀಡಿರುವ ಅವರು, ನಗರದ ಆರು ವಾರ್ಡ್‌ಗಳಲ್ಲಿ ಮೇ 23 ರಂದು ಗುದ್ದಲಿ ಪೂಜೆ ನಡೆಸಲಾಗುವುದು. ಅಂದು ಬೆಳಿಗ್ಗೆ 7.30ಕ್ಕೆ ವಾರ್ಡ್ ನಂ.6ರ ಅಗ್ರಹಾರ ಸರ್ಕಲ್ ಹತ್ತಿರ, 8 ಗಂಟೆಗೆ ವಾರ್ಡ್ ನಂ. 9ರ ಶ್ರೀನಿವಾಸನಗರದ ಅರಣ್ಯ ವಸತಿಗೃಹದ ಬಳಿ ಗುದ್ದಲಿಪೂಜೆ ನೆರವೇರಿಸಲಾಗುವುದು ಎಂದು ತಿಳಿಸಿದ್ದಾರೆ.

ಬೆಳಿಗ್ಗೆ 8.30ಕ್ಕೆ ವಾರ್ಡ್ ನಂ. 10ರ ಉಂಡೇದಾಸರಹಳ್ಳಿಯ ರಾಮಯ್ಯ ಸರ್ಕಲ್ ಹತ್ತಿರ, ಬೆಳಿಗ್ಗೆ 9ಕ್ಕೆ ವಾರ್ಡ್ ನಂ.25ರ ವಿಜಯಪುರದ ಕೆ.ಜಿ.ಎನ್. ಆಟೋ ಸರ್ಕಲ್ ಹತ್ತಿರ, 9.30ಕ್ಕೆ ವಾರ್ಡ್ ನಂ. 17ರ ಉಪ್ಪಳ್ಳಿಯ ಯುನೈಟೆಡ್ ಶಾಲೆ ರಸ್ತೆ, 10 ಗಂಟೆಗೆ ವಾರ್ಡ್ ನಂ.18ರ ಕಲ್ಲುದೊಡ್ಡಿಯ ಚಾಮುಂಡಿ ಹಿಟ್ಟಿನ ಗಿರಣಿ ಸಮೀಪ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

## ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಮೆಸ್ಕಾಂ ಶಿವಮೊಗ್ಗ ನಗರ ಉಪವಿಭಾಗ – 2 ಕಛೇರಿಯಲ್ಲಿ ಮೇ 23 . ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ. ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದು, ಈ ಸಭೆಯಲ್ಲಿ ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.


ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ ;9448289449.

# ಅರಳುಗುಪ್ಪೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ರಾಘವೇಂದ್ರ ಆಯ್ಕೆ

**ಚಿಕ್ಕಮಗಳೂರು:** ತಾಲ್ಲೂಕು ಅರಳುಗುಪ್ಪೆ ಕೈಮರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಟಿ.ಕೆ. ರಾಘವೇಂದ್ರ, ಉಪಾಧ್ಯಕ್ಷರಾಗಿ ಎಂ.ಕೃಷ್ಣಪ್ಪ ಅವಿರೋಧ ಆಯ್ಕೆಯಾಗಿದ್ದಾರೆ.

ಇಂದು ಅಧ್ಯಕ್ಷರು, ಉಪಾಧ್ಯಕ್ಷರ ಆಯ್ಕೆಗಾಗಿ ನಡೆದ ಚುನಾವಣೆಯಲ್ಲಿ ಯಾವುದೇ ನಾಮಪತ್ರ ಸಲ್ಲಿಕೆಯಾಗದ ಹಿನ್ನೆಲೆಯಲ್ಲಿ ಈ ಇಬ್ಬರನ್ನು ಆಯಾ ಹುದ್ದೆಗಳಿಗೆ ಅವಿರೋಧ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿಯಾಗಿದ್ದ ಸಹಕಾರ ಇಲಾಖೆಯ ಅಧೀಕ್ಷಕ ಕೆ.ವಿ. ಕಲ್ಲೇಶಪ್ಪ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಎಂ. ಗಿರೀಶ್ ಘೋಷಿಸಿದರು.

ನಂತರ ನೂತನ ಅಧ್ಯಕ್ಷ ಟಿ.ಕೆ. ರಾಘವೇಂದ್ರ ಮಾತನಾಡಿ, ತಮ್ಮ ಅಧಿಕಾರವಧಿಯಲ್ಲಿ ಈ ಸೊಸೈಟಿಯನ್ನು ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ



ರೀತಿಯಲ್ಲಿ ಅಭಿವೃದ್ಧಿಪಡಿಸಲು ಗುರಿ ಹೊಂದಲಾಗಿದ್ದು, ಈಗಾಗಲೇ 5.20 ಕೋಟಿ ಸಾಲ ವಿತರಿಸಿದ್ದೇವೆ ಎಂದು ಹೇಳಿದರು.

ಸೊಸೈಟಿಗೆ ನಿವೇಶನ ದಾನ ನೀಡಿದವರಿಗೆ ಹಾಗೂ ಅಭಿವೃದ್ಧಿಗೆ ಸಹಕರಿಸಿದ ಸರ್ವ ಸದಸ್ಯರಿಗೂ ಅಭಿನಂದಿಸಿ ಡಿಸಿಸಿ ಬ್ಯಾಂಕಿನಿಂದ ವಿಶೇಷ ಅನುದಾನ ನೀಡುವಂತೆ ಮನವಿ ಸಲ್ಲಿಸಿ ನಿರೀಕ್ಷೆಯಲ್ಲಿದ್ದೇವೆ. ಅನುದಾನ ಬಂದ ಬಳಿಕ ಈ ಸೊಸೈಟಿಯನ್ನು ಪ್ರಥಮ ಸ್ಥಾನಕ್ಕೆ ಕೊಂಡೊಯ್ಯುವುದಾಗಿ ವಿಶ್ವಾಸ ವ್ಯಕ್ತಪಡಿಸಿದರು.

ಉಪಾಧ್ಯಕ್ಷ ಎಂ.ಕೃಷ್ಣಪ್ಪ ಮಾತನಾಡಿ, ಸರ್ವ ಸದಸ್ಯರ ಸಹಕಾರದೊಂದಿಗೆ ಇಂದು ಅಧ್ಯಕ್ಷರು–ಉಪಾಧ್ಯಕ್ಷರಾಗಿ ಅವಿರೋಧ ಆಯ್ಕೆಯಾಗಿದ್ದು, ಇದಕ್ಕೆ ಸಹಕರಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದ ಅವರು, ಎಲ್ಲರ ವಿಶ್ವಾಸವನ್ನು ಪಡೆದು ಡಿಸಿಸಿ ಬ್ಯಾಂಕ್ ಮೂಲಕ ಸರ್ಕಾರದ ಅನುದಾನ ಪಡೆದು ಅಭಿವೃದ್ಧಿಪಡಿಸಲು ಗುರಿ ಹೊಂದಿದ್ದೇವೆ ಎಂದರು.

ಮಾಜಿ ಅಧ್ಯಕ್ಷ ಟಿ.ಎಸ್. ಶಿವೇಗೌಡ ಮಾತನಾಡಿ, ಸರ್ವ ಸದಸ್ಯರ ವಿಶ್ವಾಸ ಪಡೆದು ನೂತನ ಅಧ್ಯಕ್ಷ–ಉಪಾಧ್ಯಕ್ಷರಾಗಿರುವ ಟಿ.ಕೆ.ರಾಘವೇಂದ್ರ ಮತ್ತು ಕೃಷ್ಣಪ್ಪ ಇವರನ್ನು ಅಭಿನಂದಿಸಿ ತಮ್ಮ ಅಧಿಕಾರವಧಿಯಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿಯನ್ನು ಸೊಸೈಟಿ ಹೊಂದಲಿ, ರೈತರಿಗೆ ಹೆಚ್ಚಿನ ರೀತಿಯಲ್ಲಿ ಆರ್ಥಿಕ ಸಾಲಸೌಲಭ್ಯ ನೀಡುವಂತಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಸದಸ್ಯರುಗಳಾದ ಹೆಚ್.ಟಿ. ಚಂದ್ರೇಗೌಡ, ಹೆಚ್.ಎಸ್. ಈಶ್ವರೇಗೌಡ, ಶಿವಕುಮಾರ್, ಎಂ.ಬಿ ಸತೀಶ್, ಎ.ಎನ್ ಪುಷ್ಪನಾಗರಾಜ್, ಗಾಯಿತ್ರಿ ಧುವೀಶ್, ಸಿ.ಜಿ ಲೀಲಾ, ನಿರ್ವಾಣಯ್ಯ, ಹರೀಶ್, ಕೆ.ಕೆ. ಮನುಕುಮಾರ್, ದೀಪಕ್, ಡಿಸಿಸಿ ಮೇಲ್ವಿಚಾರಕ ಕೆ.ಆರ್. ರಘು ಉಪಸ್ಥಿತರಿದ್ದರು.

# ‘ಸೌಲಭ್ಯ ಪಡೆಯಲು ಕಾನೂನು ಅರಿವು ಅಗತ್ಯ’

## ಸಿವಿಲ್ ನ್ಯಾಯಾಧೀಶೆ ಬಿ.ಸುಜಾತಾ ಸುವರ್ಣ

**ಹಿರಿಯೂರು:** ಕಾರ್ಮಿಕರಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಜಾರಿಗೊಳಿಸಿರುವ ಸೌಲಭ್ಯಗಳನ್ನು ಪಡೆಯಲು ಕಾನೂನು ಅರಿವು ಅತ್ಯಗತ್ಯ ಎಂದು ಜೆಎಂಎಫ್ ಸಿ ನ್ಯಾಯಾಲಯದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಬಿ. ಸುಜಾತಾ ಸುವರ್ಣ ಹೇಳಿದರು.

ನಗರದ ನ್ಯಾಯಾಲಯದ ಆವರಣದಲ್ಲಿ ಮಂಗಳವಾದ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಯೋಜನಾ ಹಾಗೂ ಕಾರ್ಮಿಕ ಇಲಾಖೆ ನೇತೃತ್ವದಲ್ಲಿ ಕಾರ್ಮಿಕರ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡಿದ್ದ ಕಾನೂನು ವು–ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನೂನು ಅರಿವು ಇದ್ದಾಗ ಮಾತ್ರವೇ ತಮಗೆ ಏನೇನು ಸೌಲಭ್ಯಗಳಿವೆ ಎಂದು ತಿಳಿದುಕೊಳ್ಳಲು ಸಾಧ್ಯ. ಪ್ರತಿಯೊಬ್ಬರೂ ಏನೂನು ಉಲ್ಲಂಘನೆಯಾಗದಂತೆ ನಡೆದುಕೊಳ್ಳಬೇಕು. ಕಾರ್ಮಿಕರ ಹಕ್ಕು ಮತ್ತು ಸೌಲಭ್ಯಗಳು ಅವರಿಗೆ ಉಪುವಂತಾಗಲು ಕಾನೂನಿನ ಅ?ವು ಇಂದು ಹೆಚ್ಚಾಗಿದೆ. ದೇಶದ ಅಭಿವೃದ್ಧಿ ಪ್ರತಿಯೊಬ್ಬರ ಕರ್ತವ್ಯ, ಕಾರ್ಮಿಕರು ಮೈಕೆಲಸದ ಜತೆಗೆ ಉತ್ತಮ ಅರೋಗ್ಯ ಉಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಕಾನೂನಿನ ಅರಿವು ಅವಶ್ಯಕ. ಅದರಲ್ಲಿಯೂ ನಿತ್ಯ ಶ್ರಮವಹಿಸಿ ದುಡಿಯುವ ಕಾರ್ಮಿಕರಿಗೆ ಕಾನೂನಿನ ತಿಳಿವಳಿಕೆ ಅವಶ್ಯಕ. ಕಾರ್ಮಿಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವತ್ತ ಹೆಚ್ಚಿನ ಗಮನ ಕೊಡಬೇಕು’ ಎಂದು ಅಧ್ಯಕ್ಷತೆ ವಹಿಸಿದ್ದ ವಕೀಲರ ಸಂಘದ ಅಧ್ಯಕ್ಷ ರಂಗೇನಹಳ್ಳಿ ರಾಮಚಂದ್ರಪ್ಪ ಸೂಚಿಸಿದರು.

‘ಕಾರ್ಮಿಕರ ಹಿತದೃಷ್ಟಿಯಿಂದ ಸರ್ಕಾರ ಕಾರ್ಮಿಕರಿಗೆಂದು ಪ್ರತ್ಯೇಕ ಇಲಾಖೆ ಸ್ಥಾಪಿಸಿದೆ. ಕಾರ್ಮಿಕರ ಮೇಲಾಗುತ್ತಿರುವ ದೌರ್ಜನ್ಯ, ಶೋಷಣೆ ತಡೆಯುವುದು ಇಲಾಖೆಯ ಆದ್ಯ ಕರ್ತವ್ಯ. ಇಲಾಖೆ ಕಾರ್ಮಿಕರಿಗೆ ನೂರಾರು ಸೌಲಭ್ಯಗಳನ್ನು ಒದಗಿಸುತ್ತಿದ್ದು, ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು’ ಎಂದು ಕಾರ್ಮಿಕ ನಿರೀಕ್ಷಕ ಅಲ್ಲಾಭಕ್ ಮನವಿ ಮಾಡಿದರು.

ವಕೀಲ ಎಸ್. ಶೇಷಾದ್ರಿ ಉಪನ್ಯಾಸ ನೀಡಿದರು. ಸಹಾಯಕ ಸರ್ಕಾರಿ ಅಭಿಯೋಜಕ ಆರ್.ಜಿ. ಚಿದಾನಂದಪ್ಪ, ವಕೀಲರ ಸಂಘದ ಉಪಾಧ್ಯಕ್ಷೆ ಎಚ್. ಬೀನಾರಾಣಿ ಹಾಗೂ ಕಾರ್ಮಿಕರು ಪಾಲ್ಗೊಂಡಿದ್ದರು.

# ಹೆದ್ದಾರಿ ನಿರ್ಮಾಣಕ್ಕೆ ಜಮೀನುಗಳ ಭೂ ಸ್ವಾಧೀನಕ್ಕೆ ಸರ್ಕಾರ ದರ ನಿಗದಿಗೆ ಪರಿಹಾರ : ಜಿಲ್ಲಾಧಿಕಾರಿ

**ಮೊಳಕಾಲ್ಮೂರು:** ತಾಲೂಕಿನ ಗಡಿ ಗ್ರಾಮಗಳಾದ ಸಂತೆಗುಡ್ಡ–ಬಾಂಡ್ರಾವಿ ಇಂದ ಸಂಡೂರು ತಾಲೂಕಿಗೆ ಸಂಪರ್ಕ ಕಲ್ಪಿಸುವ 25 ಕೋಟಿ.ರೂ.ವೆಚ್ಚದಲ್ಲಿ ಹೆದ್ದಾರಿ ನಿರ್ಮಾಣ ಕಾರ್ಯದ ವ್ಯಾಪ್ತಿಗೆ ಒಳಪಡುವ ಜಮೀನುಗಳನ್ನು ಕಡಿಮೆ ಅವಧಿಯಲ್ಲಿ ರೈತರ ಒಪ್ಪಿಗೆಯಂತೆ ಸರ್ಕಾರಿ ಹಾಗೂ ಮಾರುಕಟ್ಟೆ ಧರ ನಿಗಧಿಗೊಳಿಸಿ ಪರಿಹಾರ ನೀಡಲಾಗುವುದೆಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ತಾಲೂಕಿನ ರಾಂಪುರ ಗ್ರಾಮ ಪಂಚಾಯಿತಿ ಕಾರ್ಯಾಲಯದ ಸಭಾಂಗಣದಲ್ಲಿ ತಾಲೂಕಿನ ಸಂತೇಗುಡ್ಡ – ಬಾಂಡ್ರಾವಿ ಯಿಂದ ಸಂಡೂರು ತಾಲೂಕಿಗೆ ಸಂಪರ್ಕ ಕಲ್ಪಿಸುವ ಹೆದ್ದಾರಿ ನಿರ್ಮಾಣಕ್ಕೆ ಜಮೀನುಗಳ ಭೂ ಸ್ವಾಧೀನಕ್ಕೆ ಜಮೀನುಗಳ ಧರ ನಿಗಧಿಯ ಸಭೆಯಲ್ಲಿ ಮಾತನಾಡಿದರು.

ಹೆದ್ದಾರಿ ನಿರ್ಮಾಣ ಕಾಮಗಾರಿಗೆ ಈ ಭಾಗದ ರೈತರ ಜಮೀನಿನಲ್ಲಿ ಹಾದು ಹೋಗಲಿದ್ದು, ರೈತರ ಒಪ್ಪಿಗೆ ಪಡೆದು ಸೂಕ್ತ ಬೆಲೆ ನಿರ್ಧಾರ ಮಾಡಿ ಭೂ ಸ್ವಾದೀನ ಮಾಡಿಕೊಂಡು ರಸ್ತೆ ನಿರ್ಮಾಣ ಮಾಡಲಾಗುವುದು. ಗಡಿಭಾಗದ ಈ ರಸ್ತೆಯು ಈ ಭಾಗದ ಸುಮಾರು 30 ರಿಂದ 40 ರೈತರ ಜಮೀನಿನಲ್ಲಿ ಹಾದು ಹೋಗುವುದರಿಂದ ರೈತರಿಗೆ ತಕ್ಷಣವೇ ಸೂಕ್ತ



ಧರದೊಂದಿಗೆ ಪರಿಹಾರ ನೀಡಲಾಗುವುದು. ಈ ವ್ಯಾಪ್ತಿಯ ರೈತರ ಜಮೀನುಗಳನ್ನು ಭೂ ಸ್ವಾಧೀನ ಮಾಡಿಕೊಳ್ಳಲು ಸರ್ಕಾರಿ ಹಾಗೂ ಮಾರುಕಟ್ಟೆ ಧರವಿದ್ದು, ಈ ಎರಡನ್ನು ಹೋಲಿಕೆ ಮಾಡಿ ಇವುಗಳಲ್ಲಿ ಯಾವುದು ಹೆಚ್ಚಿನ ಧರವಿರುವುದನ್ನು ನಿಗಧಿ ಪಡಿಸಿ ಅದಕ್ಕೆ ದ್ವಿಗುಣಗೊಳಿಸಿ ಪರಿಹಾರ ನೀಡಲಾಗುವುದು. ಭೂ ಸ್ವಾಧೀನಕ್ಕೊಳಪಡುವ ಜಮೀನುಗಳ ವಿಸ್ತೀರ್ಣ ವನ್ನು ಅಳತೆ ಮಾಡಿ ನಿಗಧಿ ಪಡಿಸಿದ ಧರದಂತೆ ಪರಿಹಾರ ನೀಡಲಾಗುವುದು. ಒಂದು ವೇಳೆ ನಿಗಧಿಪಡಿಸಿದ ಧರಕ್ಕೆ ರೈತರು ಒಪ್ಪದಿದ್ದಲ್ಲಿ ಹೆಚ್ಚಿನ ಧರ ಬೇಕೆಂದಲ್ಲಿ ನಿಗಧಿಪಡಿಸಿದ ಧರದ ಪರಿಹಾರವನ್ನು ಪಡೆದು ನ್ಯಾಯಾಲಯದಲ್ಲಿ ಧಾವೆ ಹೂಡಿ ಹೆಚ್ಚಿನ ಪರಿಹಾರವನ್ನು ಪಡೆಯಬಹುದಾಗಿದೆ ಎಂದು ತಿಳಿಸಿದರು.

ಉಪ ವಿಭಾಗಾಧಿಕಾರಿ ಮಹಮದ್ ಜುಲಾನಿ ಮಾತನಾಡಿ ತಾಲೂಕಿನ ಗಡಿ ಗ್ರಾಮದಲ್ಲಿ ರಸ್ತೆ ನಿರ್ಮಾಣಕ್ಕೆ ಬಾಂಡ್ರಾವಿ ಗ್ರಾಮದ ಸ.ನಂ.1/1 ರ ಖುಷ್ಕಿ ಜಮೀನಿನಲ್ಲಿ ಒಂದುವರೆ ಗುಂಟೆ ಸ್ವಾಧೀನವಾಗುತ್ತಿದ್ದು, ವಹಿವಾಟಿನ ಧರ ಹೊರತುಪಡಿಸಿ ಎಕರೆಗೆ ಸು.2,63,120/ರೂ.ಇದ್ದು ಇದಕ್ಕೆ 10,017/ ರೂ.ಆಗಲಿದ್ದು ಇದಕ್ಕೆ ಮಾರುಕಟ್ಟೆ ಧರದ ಎರಡರಷ್ಟು 20,034/ರೂ ಆಗಲಿದ್ದು ಇದಕ್ಕೆ ಶೇ.100 ರಷ್ಟು ಸೇರಿಸಿದ್ದಲ್ಲಿ 40,068/ರೂ. ಆಗಲಿದೆ ಎಂದು ಇನ್ನಿತರ ಜಮೀನುಗಳ ಧರ ತಿಳಿಸುತ್ತಿದ್ದಂತೆಯೇ ಜಮೀನುದಾರ ಇಸ್ಮಾಯಿಲ್ ಮಾತನಾಡಿ ಈ ರಸ್ತೆಯು ಗಡಿಯಂಚಿನ ಸಂಡೂರು ತಾಲೂಕಿನ ಜಮೀನುಗಳ ಧರವು ಎಕರೆಗೆ 22 ಲಕ್ಷ ರೂ.ಮೌಲ್ಯವಿದ್ದು, ನಮ್ಮ ತಾಲೂಕಿನ ಧರಗಳಿದ್ದು, ಧರವನ್ನು ಹೆಚ್ಚಿಸಬೇಕೆಂದು ತಿಳಿಸಿದರು.

ಶಾಸಕ ಎನ್.ವೈ.ಗೋಪಾಲಕೃಷ್ಣ ಮಾತನಾಡಿ ರೈತರ ಜಮೀನುಗಳ ಸ್ವಾಧೀನ ವು ರೈತರ ಒಪ್ಪಿಗೆ ಪಡೆದು ಪರಿಹಾರ ನೀಡಲಾಗುವುದು. ಆ ಭಾಗದಲ್ಲಿ ಗಣಿ ಪ್ರದೇಶವಾಗಿರುವುದರಿಂದ ಹೆಚ್ಚಿನ ಪರಿಹಾರ ನೀಡಲಾಗುವುದು. ಹಾಗಾಗಿ ತಾಲೂಕಿನ ಮಾರುಕಟ್ಟೆಯ ಧರದಂತೆ ನಿಗಧಿಗೊಳಿಸಲಾಗಿದ್ದು, ಎಲ್ಲಾ ರೈತರು ಒಪ್ಪಿಗೆ ಸೂಚಿಸಿ ಪರಿಹಾರ ಪಡೆಯಬಹುದೆಂದು ತಿಳಿಸಿದರು.

# ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರು–ಹಿಂದುಳಿದ ವರ್ಗಗಳಿಗೆ ಮೀಸಲಾತಿ ಸರಿಯಾಗಿ ಪಾಲನೆ ಆಗುತ್ತಿದೆಯೇ ಪರಿಶೀಲಿಸಿ : ಮುಖ್ಯಮಂತ್ರಿ ಸೂಚನೆ

**ಬೆಂಗಳೂರು:** ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರು–ಹಿಂದುಳಿದ ವರ್ಗಗಳಿಗೆ ಮೀಸಲಾತಿ ಸರಿಯಾಗಿ ಪಾಲನೆ ಆಗುತ್ತಿದೆ–ಯೇ ಎಂಬುದನ್ನು ಪರಿಶೀಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಗುರುವಾರ ವಿಧಾನಸೌಧದಲ್ಲಿ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗ ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಜಂಟಿ ಸಭೆಯಲ್ಲಿ ಭಾಗವಹಿಸಿ ಮುಖ್ಯಮಂತ್ರಿಗಳು ಮಾತನಾಡಿದರು.

ಈ ವೇಳೆ ಗ್ರಾಮ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಂವಿಧಾನದ (73)(74) ರ ಅನ್ವಯ ಮೀಸಲಾತಿ ಸರಿಯಾಗಿ ಪಾಲನೆ ಆಗುತ್ತಿಲ್ಲ. ಮಹಿಳಾ , ಹಿಂದುಳಿದವರಿಗೆ ಮೀಸಲಾತಿ ಸರಿಯಾಗಿ ಪಾಲನೆ ಆಗುತ್ತಿದೆಯೇ ಎಂಬ ಬಗ್ಗೆ ರಾಜ್ಯದ ನೀತಿ ಆಯೋಗದ ಉಪಾಧ್ಯಕ್ಷರು ಗಮನ ಹರಿಸಬೇಕು. ಇದಕ್ಕಾಗಿ ನಿಯಮಿತವಾಗಿ ರಾಜ್ಯ ಪ್ರವಾಸ ಮಾಡಬೇಕು ಎಂದು ನಿರ್ದೇಶಿಸಿದರು.

ಗ್ರಾಮಠಾಣಾ ಗಡಿಯನ್ನು ಬಹಳ ಹಿಂದೆ ನಿಗದಿಪಡಿಸಲಾಗಿದೆ. ಬಳಿಕ ವಿಸ್ತರಣೆಯಾಗಿರುವ ಪ್ರದೇಶವನ್ನು ಗ್ರಾಮಠಾಣಾ ಗಡಿಗೆ ಸೇರಿಸದ ಹಿನ್ನೆಲೆಯಲ್ಲಿ ವಿಸ್ತರಣೆಯಾಗಿರುವ ಪ್ರದೇಶವನ್ನು ಪುನರ್ ಸಮೀಕ್ಷೆ ನಡೆಸಿ ನಿಗದಿ ಮಾಡಬೇಕು. ಗಡಿ ಗುರುತಿಸುವಿಕೆ ಸಮೀಕ್ಷೆ ಬೇಗ ಪೂರ್ಣಗೊಳಿಸಬೇಕು. ಅನುಮತಿಗಾಗಿ ಕಂದಾಯ ಇಲಾಖೆ, ಪಂಚಾಯತ್ ರಾಜ್ ಇಲಾಖೆ ವತಿಯಿಂದ ಪ್ರಸ್ತಾವನೆ ಕಳುಹಿಸಿ ಎಂದು ಸೂಚನೆ ನೀಡಿದರು.

ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರಿ ಜಮೀನು ಕೊರತೆ ಉಂಟಾಗುತ್ತಿದೆ. ಭೂಸ್ವಾಧೀನ ಮಾಡಿಕೊಂಡು ಮೂಲ ಸೌಕರ್ಯ ಮಾಡಲು ಹಣಕಾಸು ವೆಚ್ಚ ಹೆಚ್ಚಾಗುತ್ತಿದೆ. ಹೀಗಾಗಿ ಅಗತ್ಯಭೂಮಿ ಗುರುತಿಸಿ ಭೂ ಬ್ಯಾಂಕ್ ಸ್ಥಾಪನೆ ಮಾಡಬೇಕು ಎಂದು ಸೂಚಿಸಿದರು.

ನಾನು ವಿಕೇಂದ್ರೀಕರಣದ ಪರ. ಅಧಿಕಾರ ಒಂದೇ ಕಡೆ ಕೇಂದ್ರೀಕರಣ ಆಗುವುದು ಒಪ್ಪುವುದಿಲ್ಲ. ಹೀಗಾಗಿ ಅಧಿಕಾರ ಗ್ರಾಮ ಮಟ್ಟಕ್ಕೆ ತೆಗೆದುಕೊಂಡು ಹೋಗಬೇಕು. ಜನರ ಅಭಿಪ್ರಾಯಗಳಿಗೆ ಮನ್ನಣೆ ನೀಡಬೇಕು. ಯೋಜನಾ ಮತ್ತು ಅಭಿವೃದ್ಧಿ ಸಮಿತಿಗಳು ಬಜೆಟ್ ಮಂಡನೆಗೆ ಪೂರ್ವದಲ್ಲಿ ಸಭೆ ಕರೆದು ಚರ್ಚಿಸಬೇಕು. ಕಾನೂನು ಪ್ರಕಾರ ಎಲ್ಲಾ ಕ್ರಮವರ್ಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚಿಸಿದರು.

ನೀತಿ ಯೋಜನೆ ಸಮಿತಿಗಳ ಆಯ್ಕೆ ಕಾಲಕಾಲಕ್ಕೆ ಆಗುವ ಕುರಿತು ಹಾಗೂ ಸಭೆಗಳು ನಿಯಮಿತವಾಗಿ ನಡೆಯಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. 3 ತಿಂಗಳಿಗೊಮ್ಮೆ ಕಡ್ಡಾಯವಾಗಿ ಸಭೆ ನಡೆಯಬೇಕು. ಡೀಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗು ವುದು ಎಂದರು.

ಸ್ಥಳೀಯ ಸಂಸ್ಥೆಗಳಿಗೆ ಆರ್ಥಿಕ ಸಹಾಯ ಒದಗಿಸಲು ಹಣಕಾಸು ಆಯೋಗದ ಅಧ್ಯಕ್ಷರಾದ .ನಾರಾಯಣ ಸ್ವಾಮಿ ವರದಿ ನೀಡಿದ್ದು, ಜಾರಿಗೆ ಕ್ರಮಕೈಗೊಳ್ಳುತ್ತೇವೆ. ಇನ್ನು ಸಂವಿಧಾನದ 73ನೇ ತಿದ್ದುಪಡಿ ಅನ್ವಯ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಜವಾಬ್ದಾರಿ ನಕ್ಷೆ ಸಿದ್ಧಪಡಿಸಲು 2023–24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿತ್ತು.

# ಜಮ್ಮು – ಕಾಶ್ಮೀರದಲ್ಲಿ ರಾತ್ರೋರಾತ್ರಿ ಪರಿವರ್ತನೆ ನಿರೀಕ್ಷಿಸುವುದು ಅವಾಸ್ತವಿಕ: ಫಾರೂಕ್ ಅಬ್ದುಲ್ಲಾ

**ಶ್ರೀನಗರ:** ಕಳೆದ ವರ್ಷ ರಚನೆಯಾದ ತಮ್ಮ ಪಕ್ಷದ ನೇತೃತ್ವದ ಸರ್ಕಾರವು ಜಮ್ಮು ಮತ್ತು ಕಾಶ್ಮೀರದಲ್ಲಿ ರಾತ್ರೋರಾತ್ರಿ ಪರಿವರ್ತನೆ ತರುತ್ತದೆ ಎಂದು ನಿರೀಕ್ಷಿಸುವುದು ಅವಾಸ್ತವಿಕ ಎಂದು ನ್ಯಾಷನಲ್ ಕಾನ್ಫರೆನ್ಸ್ ಪಕ್ಷದ ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ಫಾರೂಕ್ ಅಬ್ದುಲ್ಲಾ ಗುರುವಾರ ಹೇಳಿದ್ದಾರೆ.


ಉತ್ತರ ಕಾಶ್ಮೀರದ ಕುಪ್ವಾರ ಜಿಲ್ಲೆಯಲ್ಲಿ ನಡೆದ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ‘ಒಮರ್ ಅಬ್ದುಲ್ಲಾ ನೇತೃತ್ವದ ಸರ್ಕಾರವು ಪರಿಣಾಮಕಾರಿ ಆಡಳಿತವನ್ನು ರೂಪಿಸಿ, ಪರಿವರ್ತನಾ ಯುಗಕ್ಕೆ ನಾಂದಿ ಹಾಡಿದೆ’ ಎಂದಿದ್ದಾರೆ.

ಸರ್ಕಾರದ ಅಧಿಕಾರಾವಧಿ ಐದು ವರ್ಷಗಳು. ಹೊಸದಾಗಿ ರಚನೆಯಾದ ನಮ್ಮ ಸರ್ಕಾರ ರಾತ್ರೋರಾತ್ರಿ ಈ ಪ್ರದೇಶದಲ್ಲಿ ಪರಿವರ್ತನೆ ತರುತ್ತದೆ ಎಂದು ನಿರೀಕ್ಷಿಸಲಾಗದು. ಕಳೆದ ದಶಕದಲ್ಲಿ ಈ ಪ್ರದೇಶವು ಅನುಭವಿಸಿದ ಅಭಿವೃದ್ಧಿ ಹಿನ್ನಡೆಗಳನ್ನು ಕೇವಲ ಕ್ಷಣಗಳಲ್ಲಿ ಬದಲಿಸಲು ಸಾಧ್ಯವಿಲ್ಲ ಎಂದು ಅವರು ತಿಳಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಜನರು ಕಳೆದ ದಶಕಗಳಿಂದ ಸಂಕಷ್ಟಗಳನ್ನು ಎದುರಿಸಿದ್ದಾರೆ. ತಮ್ಮ ಪಕ್ಷ ಪ್ರಣಾಳಿಕೆಯಲ್ಲಿ ನೀಡಿದ ಎಲ್ಲಾ ಭರವಸೆಗಳನ್ನು ಈಡೇರಿಸಲು ಸಂಪೂರ್ಣವಾಗಿ ಬದ್ಧವಾಗಿದೆ ಎಂದೂ ಅವರು ಪುನರುಚ್ಚರಿಸಿದ್ದಾರೆ.



ನಿರಂತರ ಸಂಘಟಿತ ಪ್ರಯತ್ನಗಳು ಮತ್ತು ಸಕ್ರಿಯ ಸಾರ್ವಜನಿಕ ಭಾಗವಹಿಸುವಿಕೆಯ ಮೂಲಕ, ಎನ್‌ಸಿ ಸರ್ಕಾರವು ಈ ದೀರ್ಘಕಾಲದ ಸವಾಲುಗಳನ್ನು ಪರಿಹರಿಸುವ ಗುರಿಯನ್ನು ಹೊಂದಿರುವ ಸ್ಪಷ್ಟ ಪಥವನ್ನು ಸ್ಥಾಪಿಸಿದೆ ಎಂದು ಅವರು ಹೇಳಿದರು. ಸಂಪೂರ್ಣ ಬಹುಮತವನ್ನು ಹೊಂದಿದ್ದರೂ, ಸರ್ಕಾರವು ಏಕಪಕ್ಷೀಯ ನಿರ್ಧಾರ ತೆಗೆದುಕೊಳ್ಳುವಿಕೆಯನ್ನು ಆಶ್ರಯಿಸುತ್ತಿಲ್ಲ ಎಂದು ಎನ್‌ಸಿ ಮುಖ್ಯಸ್ಥರು ಹೇಳಿದರು. ನಮ್ಮ ನಾಗರಿಕರು ಶೀಘ್ರದಲ್ಲೇ ಎಲ್ಲಾ ರಂಗಗಳಲ್ಲಿ ಗಮನಾರ್ಹ ಸುಧಾರಣೆಗಳನ್ನು ಅನುಭವಿಸುತ್ತಾರೆ ಎಂದು ಅವರು ಹೇಳಿದರು.

# ಸರಕು ಸಾಗಣೆ ಹಡಗಿನಲ್ಲಿ ಕಾರವಾರ ಬಂದರಿಗೆ ಬಂದ ಪಾಕ್ ಪ್ರಜೆ ವಾಪಸ್!



**ಕಾರವಾರ:** ಸರಕು ಸಾಗಣೆ ಹಡಗಿನಲ್ಲಿ ಕಾರವಾರ ಬಂದರಿಗೆ ಆಗಮಿಸಿದ ಪಾಕಿಸ್ತಾನಿ ಪ್ರಜೆಗೆ ಅಧಿಕಾರಿಗಳು ಪ್ರವೇಶ ನಿರಾಕರಿಸಿದ್ದು, ವಾಪಾಸ್ ಕಳುಹಿಸಿದ್ದಾರೆ. ಇರಾಕ್ ನಿಂದ ಬಿಟುಮೆನ್ ಸಾಗಿಸುತ್ತಿದ್ದ ಒಖಿಖ ಓಶಿಯನ್ ಹಡಗಿನಲ್ಲಿ 14 ಭಾರತೀಯ ಸಿಬ್ಬಂದಿ, ಇಬ್ಬರು ಸಿರಿಯನ್ನರು ಮತ್ತು ಒಬ್ಬ ಪಾಕಿಸ್ತಾನಿ ಪ್ರಜೆಯಲ್ಲಿದ್ದರು.

ಮೇ 12 ರಂದು ಬಂದರಿಗೆ ಆಗಮಿಸಿದ ಈ ಹಡಗಿನಲ್ಲಿ ಆಗಮಿಸಿದ ಪಾಕ್ ಪ್ರಜೆಗಳನ್ನು ವಾಪಸ್ ಕಳುಹಿಸಲಾಯಿತು ಎಂದು ಭಾರತೀಯ ಕೋಸ್ಟ್ ಗಾರ್ಡ್ ತಿಳಿಸಿದೆ.

ಪಾಕಿಸ್ತಾನ ಮತ್ತು ಭಾರತ ನಡುವಿನ ಸಂಬಂಧ ಹದಗೆಟ್ಟಿರುವ ಕಾರಣ ಪಾಕಿಸ್ತಾನಿ ಮತ್ತು ಸಿರಿಯಾ ಪ್ರಜೆಗಳು ಹಡಗಿನಿಂದ ಇಳಿಯದಂತೆ ಪೊಲೀಸ್ ಇನ್ಸ್‌ಪೆಕ್ಟರ್ ನಿಶ್ಚಲ್ ಕುಮಾರ್ ಸೂಚನೆ ನೀಡಿದ್ದರು. ಅದರಂತೆ ಪೊಲೀಸರು ಅವರ ಮೊಬೈಲ್ ಫೋನ್ ಗಳನ್ನು ವಶಕ್ಕ ಪಡೆದರು.

ಬಳಿಕ ಇರಾಕ್ ಹಡಗು ಬಂದರಿನಲ್ಲಿ ಬಿಟುಮೆನ್ ಇಳಿಸಿದ ನಂತರ ಇರಾಕ್‌ಗೆ ಹೊರಟಿತು ಎಂದು ಕಾರವಾರ ಬಂದರು ಅಧಿಕಾರಿಗಳು ತಿಳಿಸಿದ್ದಾರೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ಭಾರತವು ಪಾಕಿಸ್ತಾನಿ ಪ್ರಜೆಗಳು ದೇಶ ಪ್ರವೇಶಿಸುವುದನ್ನು ನಿಷೇಧಿಸಿದೆ ಮತ್ತು ಅವರ ವೀಸಾವನ್ನು ಸಹ ರದ್ದುಗೊಳಿಸಿದೆ. ಪಹಲ್ಗಾಮ್ ದಾಳಿಯಲ್ಲಿ 26 ಮಂದಿ ಸಾವನ್ನಪ್ಪಿದ್ದರು. ದಾಳಿಗೆ ಪ್ರತಿಯಾಗಿ ಭಾರತವು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ತಾಣಗಳನ್ನು ಗುರಿಯಾಗಿಸಿಕೊಂಡು ಆಪರೇಷನ್ ಸಿಂಧೂರ್ ಕಾರ್ಯಾಚರಣೆಯನ್ನು ಯಶಸ್ವಿಯಾಗಿ ನಡೆಸಿತು.

# ವಿನಯ್ ಕುಲಕರ್ಣಿ ವಿರುದ್ಧ ಬಲವಂತದ ಕ್ರಮ ಕೈಗೊಳ್ಳದಂತೆ ಇಡಿಗೆ ಹೈಕೋರ್ಟ್ ಆದೇಶ

**ಬೆಂಗಳೂರು:** ಜಾರಿ ನಿರ್ದೇಶನಾಲಯ(ಇಡಿ) ಧಾರವಾಡ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ವಿರುದ್ಧ ಯಾವುದೇ ಬಲವಂತದ ಕ್ರಮಗಳನ್ನು ಕೈಗೊಳ್ಳದಂತೆ ಕರ್ನಾಟಕ ಹೈಕೋರ್ಟ್ ಗುರುವಾರ ಮಧ್ಯಂತರ ಆದೇಶ ಹೊರಡಿಸಿದೆ.

ಐಶ್ವರ್ಯ ಗೌಡಗೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ಹೈಕೋರ್ಟ್ ಈ ನಿರ್ದೇಶನ ನೀಡಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಏಪ್ರಿಲ್ 24–25 ರಂದು ಕರ್ನಾಟಕದ 14 ಸ್ಥಳಗಳಲ್ಲಿ ಇಡಿ ಶೋಧ ನಡೆಸಿತ್ತು. ಐಶ್ವರ್ಯ ಗೌಡ ಅವರ ಬೆಂಗಳೂರು ಹಾಗೂ ಮಂಡ್ಯ



ನಿವಾಸ ಮತ್ತು ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಅವರ ಮನೆಗಳ ಮೇಲೆ ಜಾರಿ ನಿರ್ದೇಶನಾಲ(ಇಡಿ)ಯದ ಅಧಿಕಾರಿಗಳು ದಾಳಿ ನಡೆಸಿದ್ದರು.

ತಮ್ಮ ಮನೆ ಮೇಲಿನ ಇಡಿ ದಾಳಿ ಕಾನೂನುಬಾಹಿರ ಎಂದು ಘೋಷಿಸಬೇಕು ಮತ್ತು ಇಡಿ ಸಮನ್ಸ್ ರದ್ದುಗೊಳಿಸುವಂತೆ ಕೋರಿ ವಿನಯ್ ಕುಲಕರ್ಣಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಶಿವಶಂಕರ್ ಅಮರಣ್ಣವರ್ ಅವರಿದ್ದ ರಜಾ ಕಾಲದ ಏಕ ಸದಸ್ಯ ಪೀಠ ಈ ಮಧ್ಯಂತರ ಆದೇಶ ಹೊರಡಿಸಿದೆ.

ಇಡಿ ಪರವಾಗಿ ವಿಚಾರಣೆಗೆ ಹಾಜರಾಗಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್(ಎಎಸ್‌ಜಿ) ಅರವಿಂದ್ ಕಾಮತ್ ಅವರು, ಬಲವಾದ ಆಕ್ಷೇಪಣೆಗಳನ್ನು ವ್ಯಕ್ತಪಡಿಸಿದರು, ಆರೋಪಿಯ ಅರ್ಜಿಯ ವಿರುದ್ಧ ವಾದಿಸಲು ತಮಗೆ ನ್ಯಾಯಯುತ ಅವಕಾಶ ನೀಡಿಲ್ಲ ಎಂದು ಹೇಳಿದರು.

ಪ್ರಕರಣ ಸಂಬಂಧ ಕೇಂದ್ರ ಸರ್ಕಾರ–ಕ್ಕೆ ಹೈಕೋರ್ಟ್ ನೋಟಿಸ್ ಜಾರಿ ಮಾಡಿದ್ದು, ಮಧ್ಯಂತರ ಆದೇಶ ಪ್ರಶ್ನಿಸಿ ಅರ್ಜಿ ಸಲ್ಲಿಕೆಗೆ ಕೇಂದ್ರ ಸರ್ಕಾರಕ್ಕೆ ಸಂಪೂರ್ಣ ಸ್ವಾತಂತ್ರ್ಯ ಇದೆ ಎಂದು ತಿಳಿಸಿದೆ.

ನ್ಯಾಯಾಲಯದಲ್ಲಿದ್ದ ಕೇಂದ್ರ ಸರ್ಕಾರದ ಪರ ವಕೀಲರು, ನಮ್ಮ ವಾದ ಆಲಿಸದೆ ಮಧ್ಯಂತರ ಆದೇಶ ನೀಡಬಾರದು ಎಂದು ಮನವಿ ಮಾಡಿದರು. ಅದಕ್ಕೆ ಪೀಠ, ನಮ್ಮ ಆದೇಶವನ್ನು ಪ್ರಶ್ನೆ ಮಾಡಬಹುದು ಎಂದು ತಿಳಿಸಿ ವಿಚಾರಣೆ ಮುಂದೂಡಿತು.

ಈ ಹಿಂದೆ ನಡೆದ ಅರ್ಜಿ ವಿಚಾರಣೆ ವೇಳೆ ವಿನಯ್ ಕುಲಕರ್ಣಿ ಪರ ವಕೀಲರು, “ಪಿಎಂಎಲ್‌ಎ ಅಡಿ ಅಧಿಕಾರಿ ನಮ್ಮ ಕಕ್ಷಿದಾರರಿಗೆ ಸಮನ್ಸ್ ಜಾರಿ ಮಾಡಿಲ್ಲ. ಜಪ್ತಿ ಸಂದರ್ಭದಲ್ಲಿ ವಿನಯ್ ಕುಲಕರ್ಣಿ ಅವರ ಮನೆಯಲ್ಲಿ ಇ.ಡಿ ಅಧಿಕಾರಿಗಳಿಗೆ ಏನೂ ದೊರೆತಿಲ್ಲ. ಹೀಗಿರುವಾಗ ವಿನಯ್ ಕುಲಕರ್ಣಿ ಹೇಳಿಕೆ ದಾಖಲಿಸಿಕೊಳ್ಳುವಂತಿರಲಿಲ್ಲ. ಸಮನ್ಸ್‌ನಲ್ಲಿ ಮೂಲ ಅಪರಾಧ (ಪ್ರೆಡಿಕೇಟ್ ಅಪರಾಧ) ಯಾವುದು ಎಂದು ಹೇಳಿಲ್ಲ. ಐಶ್ವರ್ಯಾ ಗೌಡ ರಿಮ್ಯಾಂಡ್ ಅರ್ಜಿಯಲ್ಲಿಯೂ ವಿನಯ್ ಕುಲಕರ್ಣಿ ಬಗ್ಗೆ ಯಾವುದೇ ಉಲ್ಲೇಖವಿಲ್ಲ” ಎಂದು ವಾದಿಸಿದ್ದರು.

# ಬಟ್ಟೆ ತೊಳೆಯುವ ವೇಳೆ ಕಾಲು ಜಾರಿ ಬಾವಿಗೆ ಬಿದ್ದು ಇಬ್ಬರು ಬಾಲಕಿಯರು ಸಾವು



**ಯಾದಗಿರಿ:** ಬಾವಿಯಲ್ಲಿ ಬಟ್ಟೆ ತೊಳೆಯಲು ಹೋಗಿದ್ದ ಇಬ್ಬರು ಬಾಲಕಿಯರು ಕಾಲು ಜಾರಿ ಬಾವಿಯಲ್ಲಿ ಬಿದ್ದು ಮೃತಪಟ್ಟಿರುವ ದಾರುಣ ಘಟನೆ ಗುರುವಾರ ಯಾದಗಿರಿ ಜಿಲ್ಲೆಯ ಮೊಟ್ನಳ್ಳಿ ಗ್ರಾಮದ ಹೊರ ಭಾಗದಲ್ಲಿ ನಡೆದಿದೆ.

ಮೃತ ಬಾಲಕಿಯರು ವೈಶಾಲಿ(17) ಮತ್ತು ನವೀತಾ(16) ಎಂದು ಗುರುತಿಸಲಾಗಿದ್ದು, ಇಬ್ಬರು ಬಟ್ಟೆ ತೊಳೆಯಲು ಹೋಗಿದ್ದರು. ಈ ವೇಳೆ ಈ ಅವಘಡ ಸಂಭವಿಸಿದೆ. ಸ್ಥಳೀಯರು ಶವವನ್ನು ಬಾವಿಯಿಂದ ಹೊರಗೆ ತೆಗೆದಿದ್ದಾರೆ.

ಗುರುಮಠಕಲ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಮೇ 18ರಂದು ಖಾತೆದಾರರಿಗೆ ಭೂ ಪರಿಹಾರ ನೀಡಲು ಡಿಸಿ ಸೂಚನೆ

**ತುಮಕೂರು :** ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ ತಿಪಟೂರು ಉಪವಿಭಾಗಾಧಿಕಾರಿ, ವಿಶೇಷ ಭೂಸ್ವಾಧೀನಾಧಿಕಾರಿ ಹಾಗೂ ಚಿಕ್ಕನಾಯಕನಹಳ್ಳಿ ತಹಶೀಲ್ದಾರ್ ಅವರು ಮೇ 18ರಂದು ಜಂಟಿಯಾಗಿ ಕ್ಯಾಂಪ್ ನಡೆಸಿ ಖಾತೆದಾರರಿಗೆ ಭೂ ಪರಿಹಾರವನ್ನು ಪಾವತಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿ–ದರು.

ಜಿಲ್ಲಾಧಿಕಾರಿಗಳ ಕಚೇರಿ ನ್ಯಾಯಿಕ ಸಭಾಂಗಣದಲ್ಲಿ ಗುರುವಾರ ಭೂಸ್ವಾಧೀನ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಭದ್ರಾ ಮೇಲ್ದಂಡೆ ಯೋಜನೆಗಾಗಿ ಭೂಸ್ವಾಧೀನ ಪಡಿಸಿಕೊಂಡಿರುವ ಚಿಕ್ಕನಾಯಕನಹಳ್ಳಿ ತಾಲ್ಲೂಕು ಬೆಳ್ಳಾರ, ತಿಮ್ಲಾಪುರ, ಹುಲ್ಲೇನಹಳ್ಳಿ, ಕಲ್ಲಹಳ್ಳಿ, ಡಿಂಕನಹಳ್ಳಿ, ಮೋಟಿಹಳ್ಳಿ ಹಾಗೂ ತಿಮ್ಮನಹಳ್ಳಿ ಗ್ರಾಮಗಳ 226 ಭೂ ಮಾಲೀಕರಿಗೆ ಮೇ 18ರಂದು ಭೂ ಪರಿಹಾರ ಪಾವತಿಸಬೇಕು. ಅಂದಾಜು 20 ಕೋಟಿ ರೂ.ಗಳಷ್ಟು ಭೂ ಪರಿಹಾರ ಪಾವತಿಸಲು ಬಾಕಿಯಿದ್ದು, ಭೂ ಮಾಲೀಕರಿಂದ ಅಗತ್ಯ



ದಾಖಲೆಗಳನ್ನು ಪಡೆದು ಪರಿಹಾರ ಹಣವನ್ನು ಪಾವತಿಸಲು ಕ್ರಮಕೈಗೊಳ್ಳಬೇಕೆಂದು ಸೂಚನೆ ನೀಡಿದರು.

ಭೈರಲಿಂಗನಹಳ್ಳಿ ಹಾಗೂ ಕೇಶವಾಪುರದಲ್ಲಿ ತೋಟಗಾರಿಕೆ ಹಾಗೂ ಅರಣ್ಯ ಇಲಾಖೆಯಿಂದ ಈವರೆಗೂ ಮರ ಮತ್ತು ಮಾಲ್ಕಿ ಮೌಲ್ಯ ನಿರ್ಧರಣೆ ಮಾಡದೇ ಇರುವುದರಿಂದ ಭೂಸ್ವಾಧೀನ ಪ್ರಕ್ರಿಯೆ ಬಾಕಿ ಉಳಿದುಕೊಂಡಿದೆ. ಈ ನಿಟ್ಟಿನಲ್ಲಿ ಅರಣ್ಯ ಇಲಾಖೆ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಕೂಡಲೇ ಸದರಿ ಗ್ರಾಮಗಳ ಮರ ಮತ್ತು ಮಾಲ್ಕಿ ಮೌಲ್ಯ ನಿರ್ಧರಣೆ ಮಾಡಿ ವರದಿ ಸಲ್ಲಿಸಬೇಕೆಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಹೇಮಾವತಿ, ಭದ್ರಾ ಮೇಲ್ದಂಡೆ, ಎತ್ತಿನಹೊಳೆ, ರೈಲ್ವೆ ಯೋಜನೆಗಳ ಭೂಸ್ವಾಧೀನ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅಂತಿಮ ಅಧಿಸೂಚನೆ ಹೊರಡಿಸಲು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಗಳು ಈವರೆಗೂ ಅನುಮೋದನೆಯಾಗದಿದ್ದಲ್ಲಿ ತಮ್ಮ ಗಮನಕ್ಕೆ ತರಬೇಕು ಎಂದು ಸೂಚನೆ ನೀಡಿದರು.

ಎತ್ತಿನ ಹೊಳೆ ಯೋಜನೆಗಾಗಿ ತಿಪಟೂರು ತಾಲ್ಲೂಕು ಚೌಡ್ಲಾಪುರ ಗ್ರಾಮದಲ್ಲಿ 60 ಎಕರೆ ಪ್ರದೇಶವನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಅನುಮೋದನೆಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕೆಂದು ಸೂಚನೆ ನೀಡಿದರು.

ತುಮಕೂರು ನಗರದ ಬೈಪಾಸ್ ರಸ್ತೆಯಲ್ಲಿರುವ ಗೌರಿಪುರ ಹಾಗೂ ಭೈರಸಂದ್ರ ಗ್ರಾಮದ ಬಳಿ ಬೌಂಡರಿ ಕಲ್ಲು ಸಮಸ್ಯೆ ಇರುವುದರಿಂದ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿಗೆ ಅಡ್ಡಿಯಾಗಿದೆ. ಕೂಡಲೇ ಸಮಸ್ಯೆಯನ್ನು ಬಗೆಹರಿಸಲು ಕ್ರಮ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಗೌರವ್ ಕುಮಾರ್ ಶೆಟ್ಟಿ, ವಿವಿಧ ಯೋಜನೆಗಳ ವಿಶೇಷ ಭೂಸ್ವಾಧೀನಾಧಿಕಾರಿಗಳು ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ತುರ್ತು ಪರಿಸ್ಥಿತಿ ನಿರ್ವಹಣೆಗೆ ಅಣುಕು ಪ್ರದರ್ಶನ ಸಹಕಾರಿ : ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್

**ಗದಗ :** ವೈಮಾನಿಕ ದಾಳಿ ಎದುರಾದಾಗ ಸ್ಥಳಿಯ ಜನರು ಭಯಭೀತರಾಗದೇ ಪರಿಸ್ಥಿತಿಯನ್ನು ಹೇಗೆ ಎದುರಿಸಬೇಕೆಂದು ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಅಣುಕು ಪ್ರದರ್ಶನ ಕೈಗೊಳಲಾಯಿತು ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಅವರು ಹೇಳಿದರು.

ನಗರದ ವಿಡಿಎಸ್ ಟಿ ಮೈದಾನದಲ್ಲಿ ಗುರುವಾರ ನಡೆದ ಅಣುಕು ಪ್ರದರ್ಶನ ಜರುಗಿದ ನಂತರ ಮಾತಾನಾಡಿದ ಅವರು ಯುದ್ದದಂತಹ ತುರ್ತುಪರಿಸ್ಥಿತಿ ಸಂದರ್ಭದಲ್ಲಿ ಸರ್ಕಾರ ಹೇಗೆ ಕೆಲಸ ನಿರ್ವಹಿಸುತ್ತದೆ ಎಂದು ಅವರು ತಿಳಿಸಿದರು. ನಗರದಲ್ಲಿ ವೈಮಾನಿಕ ದಾಳಿಯಾದಾಗ ಅದಕ್ಕೆ ಇಲಾಖೆಅಧಕಾರಿಗಳು ಯಾವ ತರಹ ಕಾರ್ಯಾಚರಣೆ, ಪರಿಹಾರ ಕಂಡುಕೊಳ್ಳುತ್ತೇವೆ ಎನ್ನುವುದ ತಿಳಿಸುವ ಅಣುಕು ಪ್ರದರ್ಶನ ಇದಾಗಿದ್ದು , ಬಾಂಬ್ ಬಿದ್ದಿದೆ ಎಂದು ಮಾಹಿತಿ ತಿಳಿದ ಕೂಡಲೇ ಬಾಂಬ್ ಸ್ಕ್ವಾಡ್ ತಕ್ಷಣ ಹೋಗಿ ಸ್ಥಳಿಯ ಪರಿಸ್ಥಿತಿ ಅರಿತು ಇನ್ನೂ ಸ್ಫೋಟಗೊಳ್ಳದ ಬಾಂಬ್ ಗಳನ್ನು ನಿಷ್ಕ್ರೀಯಗೊಳಿಸಿದರು, ಪೊಲೀಸ್ ಅಗ್ನಿಶಾಮಕ ದಳ ಅಂಬುಲೆನ್ಸ ಸ್ವಯಂಸೇವಕರು ಬಂದು ಭಯಭೀತರಾದ ಜನರನ್ನು ಸುರಕ್ಷಿತ ಸ್ಥಳಕ್ಕೆ ಕರೆದೊಯ್ದುರು, ಗಾಯಾಳುಗಳನ್ನು ಆಸ್ಪತ್ರೆಗೆ ಸ್ಥಳಾಂತರಗೊಳಿಸಲಾಯಿತು, ಪ್ರಥಮ ಚಿಕಿತ್ಸೆ ಯ ಕ್ಯಾಂಪ್ ಗಳನ್ನು ಪ್ರಾರಂಬಿಸಲಾಯಿತು ಅವುಗಳು ಪರಿಸ್ಥಿತಿ ಗನುಗುಣವಾಗಿ ಕಾರ್ಯಗಳನ್ನು ನಿಭಾಯಿಸುವ ಬಗ್ಗೆ ಪ್ರಾತ್ಯಕ್ಷಿಕೆಯನ್ನು ಕೈಗೊಳ್ಳಲಾಯಿತು ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಅವರು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಮಾತನಾಡಿ ಅಣುಕು ಪ್ರದರ್ಶನ ಮೂಲಕ ಯಾವುದಾರರು



ತುರ್ತುಸ್ಥಿತಿ ಎದುರಾದಾಗ ಅದನ್ನು ಎದುರಿಸಲು ಯಾವ ರೀತಿ ತಯಾರಿ ಆಗಿರಬೇಕು ಎಂದು ಜನರಲ್ಲಿ ಜಾಗೃತಿ ಮೂಡಿಸಲಾಯಿತು. ಅಣುಕು ಪ್ರದರ್ಶನ ದಲ್ಲಿ 22 ಇಲಾಖೆ ಗಳು ಸೇರಿದಂತೆ ಎನ್ ಸಿ ಸಿ, ಎನ್ ಎಸ್ ಎಸ್ ,ಮಾಜಿ ಸೈನಿಕರು ಸ್ಕೌಟ್ಸ್ ಗೈಡ್ ಒಳಗೊಂಡು 300 ಜನ ಭಾಗವಹಿಸಿ ಬಾಂಬ್ ಸ್ಫೋಟವಾದಾಗ ಅದಕ್ಕೆ ಯಾವ ರೀತಿ ಪ್ರತೀಕ್ರೀಯೆ ನೀಡಬೇಕು. ಅಲರ್ಟ ಮೇಸೆಜ್ ಬಂದ ತಕ್ಷಣ ಯಾವ ತಂಡ ಯಾವ ಕೆಲಸವನ್ನು ಮಾಡಬೇಕು ಎನ್ನುವ ಜವಾಬ್ದಾರಿಗಳನ್ನು ಈ ಮೂಲಕ ತಿಳಿಸಲಾಯಿತು. ಅಣುಕು ಪ್ರದರ್ಶನ ದಲ್ಲಿ 18 ತಂಡಗಳು ಭಾಗವಹಿಸಿದ್ದವು ಎಂದು ತಿಳಿಸಿದರು.

ಅಣಕು ಪ್ರದರ್ಶನದ ನೈಜ ವಿವರ: ವೈಮಾನಿಕ ದಾಳಿಯಿಂದ ನಗರದ ಮನೆಗಳಿಗೆ ಬೆಂಕಿ ಹತ್ತಿ ಉರಿದವು ಮನೆಯಲ್ಲಿದ್ದ ಜನರು ಬೆಂಕಿಯಿಂದ ಗಾಯಗೊಂಡರು ದಾಳಿಯಿಂದ ಸುತ್ತಮುತ್ತಲಿನ ಜನರು ಮಕ್ಕಳು ಭಯಭೀತರಾದರು ಕೆಲವರಿಗೆ ಗಂಭೀರ ಗಾಯ ಸಂಭವಿಸಿ ಸ್ಥಳದಲ್ಲಿಯೇ ಮೂರ್ಛೆ ಹೋದರು. ವೈಮಾನಿಕ ಮಾಹಿತಿ ತಿಳಿದ ತಕ್ಷಣ ಅಗ್ನಿಶಾಮಕ ದಳ ದೌಡಾಯಿಸಿ ಅಗ್ನಿ ನಂದಿಸುವ ಕೆಲಸ ಪ್ರಾರಂಭಿಸಿದರು ,ಅಗ್ನಿ ಸಂಭವಿಸಿದ ಮನೆಯೊಳಗಿದ್ದ ಜನರನ್ನು ಮನೆಯೊಳಗೆ ಹೋಗಿ ಹೊರ ತಂದು ಸಂರಕ್ಷಿಸಿದರು , ತುರ್ತು ಪರಿಸ್ಥಿತಿ ಸಹಾಯವಾಣಿಯನ್ನು ಪ್ರಾರಂಭಿಸಿದರು ,ಅಂಬುಲೆನ್ಸಗಳು ಬಂದ ತಕ್ಷಣ ಸ್ಥಳದಲ್ಲಿದ ಪೊಲೀಸ್ ಸಹಾಯದಿಂದ ಗಾಯಾಳುಗಳನ್ನು ಎತ್ತುಗೊಂಡು ಆಸ್ಪತ್ರೆ ಗೆ ಸ್ಥಳಾಂತರಗೊಳಿಸುವ ಕಾರ್ಯ ಪ್ರಾರಂಭಿಸಿದರು. ಜನರಿಗೆ ಪ್ರಥಮ ಚಿಕಿತ್ಸಾ ಕ್ಯಾಂಪ್ಗಳನ್ನು ಪ್ರಾರಂಭವಾಯಿತು.

### ರಾಜ್ಯ ಉಪಾಧ್ಯಕ್ಷರಿಂದ ಎಸ್ ಆರ್ ಪಾಟೀಲರಿಂದ ಪ್ರಗತಿ ಪರಿಶೀಲನಾ ಸಭೆ

## ಗ್ಯಾರಂಟಿ ಸೌಲಭ್ಯ ಒದಗಿಸುವಲ್ಲಿ ಗದಗ ಜಿಲ್ಲೆ ಸಾಧನೆ ಪ್ರಶಂಸನೀಯ

**ಗದಗ** : ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ನೇತೃತ್ವದ ಸರ್ಕಾರ ಬಡವರ ಕಲ್ಯಾಣಕ್ಕಾಗಿ ಜಾರಿಗೊಳಿಸಿದ ಪಂಚಗ್ಯಾರಂಟಿ ಯೋಜನೆಗಳನ್ನು ಉತ್ತಮವಾಗಿ ಗದಗ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲಾಗಿದೆ. ಈ ಸಾಧನೆಗೆ ಗದಗ ಜಿಲ್ಲೆ ಪ್ರಶಂಸನೀಯ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್.ಪಾಟೀಲ ಅವರು ಹೇಳಿದರು.

ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾದಿಕಾರದ ಕಚೇರಿಯಲ್ಲಿ ಸೋಮವಾರ ಜರುಗಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪಂಚಗ್ಯಾರಂಟಿ ಅನುಷ್ಠಾನದಲ್ಲಿ ಗದಗ ಜಿಲ್ಲೆ ರಾಜ್ಯದಲ್ಲಿಯೇ ಉತ್ತಮ ಸಾಧನೆ ಮಾಡಿದೆ. ಅರ್ಹರಿಗೆ ಸರ್ಕಾರದ ಸೌಲಭ್ಯ ಒದಗಿಸುವಲ್ಲಿ ಜಿಲ್ಲೆಯು ಮುಂಚೂಣಿಯಲ್ಲಿದೆ. ಅದಕ್ಕಾಗಿ ಸಮಿತಿಯ ಜಿಲ್ಲಾ ಹಾಗೂ ತಾಲೂಕಾ ಅಧ್ಯಕ್ಷರು, ಸದಸ್ಯರುಗಳಿಗೆ ಅಭಿನಂದನೆಗಳು. ಅದೇ ತರಹ ಪಂಚಗ್ಯಾರಂಟಿ ಅನುಷ್ಠಾನದಲ್ಲಿ ಶ್ರಮಿಸಿದ ಇಲಾಖಾಧಿಕಾರಿಗಳ ಕಾರ್ಯ ವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ರಾಜ್ಯದ ಮಹಿಳೆಯರಿಗೆ ಗೃಹಲಕ್ಷ್ಮೀ ಹಾಗೂ ಶಕ್ತಿ ಯೋಜನೆಗಳು ಆರ್ಥಿಕ ಸಬಲತೆಯೊಂದಿಗೆ ಸ್ತ್ರೀ ಸ್ವಾತಂತ್ರ ನೀಡಿದೆ. ಮಹಿಳೆ ಸ್ವತಂತ್ರವಾಗಿ ಕುಟುಂಬ ನಿರ್ವಹಣೆ ಮಾಡುವ ಮೂಲಕ ಕುಟುಂಬವನ್ನು ಆರ್ಥಿಕವಾಗಿ ಪ್ರಬಲವಾಗಿಸಲು ಪಂಚ ಗ್ಯಾರಂಟಿ ಯೋಜನೆಗಳು ಸಹಕಾರಿಯಾಗಿವೆ. ಅವುಗಳನ್ನು ಇನ್ನಷ್ಟು ಅರ್ಹರಿಗೆ ತಲುಪಿಸುವಲ್ಲಿ ಅಧಿಕಾರಿ ವರ್ಗ ಶ್ರಮಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಮಾತನಾಡಿ ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸರಿಯಾಗಿ ಸಾಗಿದೆ. ಯುವನಿಧಿ ಫಲಾನುಭವಿಗಳು




ಉದ್ಯೋಗ ಮೇಳಕ್ಕೆ ಆಗಮಿಸುವ ಮೂಲಕ ಉದ್ಯೋಗ ಪಡೆಯಲು ಮುಂದಾಗಬೇಕು. ಈ ನಿಟ್ಟಿನಲ್ಲಿ ಉದ್ಯೋಗಾದಿಕಾರಿಗಳು ಸೂಕ್ತ ಕ್ರಮ ವಹಿಸಬೇಕೆಂದು ಸೂಚಿಸಿದರು. ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗುವ ಅಕ್ಕಿಯು

ಅಕ್ರಮ ಕಾಳ ಸಂತೆಯಲ್ಲಿ ಸಾಗಾಟ ಮಾಡುವುದನ್ನು ಅಧಿಕಾರಿ ವರ್ಗ ಸಂಪೂರ್ಣ ಹತೋಟಿಗೆ ತರಬೇಕು. ಆ ಮೂಲಕ ಅನ್ನಭಾಗ್ಯದ ಫಲಾನುಭವಿಗಳಿಗೆ ತಲುಪುವ ಮೂಲಕ ಹಸಿವು ಮುಕ್ತ ಕರ್ನಾಟಕ ಸಾಕಾರವಾಗಲಿ ಎಂದರು.

ಗ್ಯಾರಂಟಿ ಅನುಷ್ಠಾನ ಪ್ರಾದಿಕಾರದ ತಾಲೂಕಾಧ್ಯಕ್ಷ ಅಶೋಕ ಮಂದಾಲಿ ಮಾತನಾಡಿ ಪಂಚ ಗ್ಯಾರಂಟಿ ಯೋಜನೆಗಳನ್ನು ಸರಿಯಾಗಿ ಸದ್ಬಳಕೆ ಮಾಡಿಕೊಳ್ಳುವ ಮೂಲಕ ಫಲಾನುಭವಿಗಳು ತಮ್ಮದೇ ರೀತಿಯ ಆರ್ಥಿಕ ಸಂಪನ್ಮೂಲ ಕಂಡುಕೊಂಡಿದ್ದಾರೆ. ಹಲವಾರು ಮಹಿಳೆಯರು ಸ್ವ ಉದ್ಯೋಗ ಕೈಗೊಂಡ ಸಾಕಷ್ಟು ಉದಾಹರಣೆಗಳು ಜಿಲ್ಲೆಯಲ್ಲಿವೆ ಎಂದರು.

ಸಮಿತಿ ಸದಸ್ಯ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ ಕೆಲವು ಫಲಾನುಭವಿಗಳ ಗೃಹಲಕ್ಷ್ಮೀ ಮೊತ್ತವು ಬ್ಯಾಂಕ್ ಖಾತೆಗೆ ಜಮೆಯಾಗದೇ ಇರುವ ಪ್ರಕರಣಗಳು ಕಂಡುಬಂದಿವೆ. ಅಧಿಕಾರಿ ವರ್ಗ ಅವುಗಳನ್ನು ಪರಿಶೀಲಿಸಿ ಅರ್ಹರಿಗೆ ಗೃಹಲಕ್ಷ್ಮೀ ಮೊತ್ತ ಜಮೆ ಮಾಡಿಸುವಲ್ಲಿ ಗಮನ ಹರಿಸುವಂತೆ ತಿಳಿಸಿದರು.

ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ವಿವರ: ಗೃಹಲಕ್ಷ್ಮೀ ಯೋಜನೆಯಡಿ ಶೇ 92.02 ,

ಅನ್ನಭಾಗ್ಯ ಯೋಜನೆಯಡಿ ಶೇ 97.96, ಗೃಹ ಜ್ಯೋತಿ ಯೋಜನೆಯಡಿ ಶೇ 95.51, ಯುವ ನಿಧಿ ಯೋಜನೆಯಡಿ ಶೇ 98 ಹಾಗೂ ಶಕ್ತಿ ಯೋಜನೆಯಡಿ ಶೇ 100 ರಷ್ಟು ಪ್ರಗತಿ ಸಾಧನೆಯಾಗಿದೆ ಎಂದು ವಿವರವಾಗಿ ಅಧಿಕಾರಿಗಳು ಸಭೆಗೆ ಮಾಹಿತಿ ಒದಗಿಸಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ನೀಲವ್ವ ಬೋಳನವರ್, ಸದಸ್ಯರುಗಳಾದ ಈಶಣ್ಣ ಹುಣಸೀಕಟ್ಟಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯ್ಕರ, ದೇಸಾಯಿ, ಸಾವಿಹೂಗಾರ ಸೇರಿದಂತೆ ಇತರೆ ಸದಸ್ಯರು, ಅಧಿಕಾರಿಗಳು ಹಾಜರಿದ್ದರು.

## ಹೆಚ್ಚು ಮಳೆ ಸಂಭಾವ್ಯ ಹಿನ್ನೆಲೆ: ಅಧಿಕಾರಿಗಳು ಕೇಂದ್ರಸ್ಥಾನ ಬಿಡದಂತೆ ಜಿಲ್ಲಾಧಿಕಾರಿ ಸೂಚನೆ

**ಚಿಕ್ಕಮಗಳೂರು:** 2025ನೇ ಸಾಲಿನ ಮುಂಗಾರು ಪೂರ್ವ ಹಂಗಾಮು ಪ್ರಾರಂಭವಾಗಿರುವ ಹಿನ್ನೆಲೆಯಲ್ಲಿ ಹೆಚ್ಚು ಮಳೆಯಾಗುವ ಸಂದರ್ಭವಿರುವುದರಿಂದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಕೇಂದ್ರ ಸ್ಥಾನ ಬಿಡದಂತೆ ಹಾಗೂ 24ಫಿ7 ಪರಿಸ್ಥಿತಿಯನ್ನು ಅವಲೋಕಿಸಿ ತಮ್ಮ ಕರ್ತವ್ಯಗಳನ್ನು ನಿಭಾಯಿಸಬೇಕು ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅವರು ಸೂಚಿಸಿದರು.



ಜಿಲ್ಲಾಧಿಕಾರಿಗಳ ಕೇಸ್ವನ್ ಕೇಂದ್ರದಲ್ಲಿ ಇಂದು ವೀಡಿಯೋ ಕಾನ್ಫರೆನ್ಸ್‌ನಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಿಂದ ಮಾಹಿತಿ ಪಡೆದು ಮಾತನಾಡಿದ ಅವರು, ಹವಾಮಾನ ವೈಪರೀತ್ಯದ ಮಾಹಿತಿಗಳನ್ನು ಆಗಿಂದಾಗ್ಗೆ ಪಡೆದು ಹೆಚ್ಚಿನ ಅನಾಹುತವಾಗದಂತೆ ಎಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ ಎಂದ ಜಿಲ್ಲಾಧಿಕಾರಿಗಳು, ತಾಲ್ಲೂಕು ಕೇಂದ್ರಗಳಲ್ಲಿರುವ ಕಂಟ್ರೋಲ್ ರೂಂಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳುವುದು ಸೇರಿದಂತೆ ಹೋಂ ಗಾರ್ಡ್ಸ್, ಸ್ವಯಂ ಸೇವಕರು, ಈಜುಗಾರರು ಸದಾ ಸನ್ನದ್ಧರಾಗಿರಬೇಕು. ಹೆಚ್ಚು ಮಳೆ ಬೀಳುವ ಸಂದರ್ಭ ಗುಡ್ಡ ಹಾಗೂ ಮಣ್ಣು ಕುಸಿತ ಸಂಭವಿಸುವ ಪ್ರದೇಶಗಳನ್ನು ಗುರುತಿಸಿ ನಿಗಾ ವಹಿಸಬೇಕು ಎಂದು ಸಲಹೆ ನೀಡಿದರು.

ಅರಣ್ಯ, ಮೆಸ್ಕಾಂ, ಪೊಲೀಸ್, ಅಗ್ನಿಶಾಮಕ ಇಲಾಖೆಗಳು ರಕ್ಷಣಾ ಕಾರ್ಯಕ್ಕೆ ಸದಾ ಸನ್ನದ್ಧವಾಗಿರಬೇಕು ಹಾಗೂ ಲಭ್ಯವಿರುವ ಸಲಕರಣೆಗಳನ್ನು ಸಮರ್ಪಕವಾಗಿ ಇರಿಸಿಕೊಳ್ಳಬೇಕು. ಹಿಂದಿನ ಘಟನೆಗಳ ಆಧಾರದ ಮೇಲೆ ದುರ್ಘಟನೆ ಸಂಭಾವ್ಯ ಪ್ರದೇಶಗಳನ್ನು ಗುರುತಿಸಿ ಕಾರ್ಯ ನಿರ್ವಹಿಸಬೇಕು. ಹಾನಿಯಾಗುವ ಪ್ರದೇಶಗಳಿಗೆ ಸಂಬಂಧಿಸಿದ ತಕ್ಷಣ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಭೇಟಿ ನೀಡಿ ಪರಿಹಾರ ಕ್ರಮ ಕೈಗೊಳ್ಳವಂತಿರಬೇಕು. ತಕ್ಷಣ ರಕ್ಷಣಾ ಕಾರ್ಯಾಚರಣೆಗೆ ತಹಸೀಲ್ದಾರ್ ಹಾಗೂ ಕಾರ್ಯ ನಿರ್ವಹಣಾಧಿಕಾರಿಗಳ ತಂಡ ಕಾರ್ಯೋನ್ಮುಖವಾಗಬೇಕು ಎಂದರು.

ಆಯಾ ತಾಲ್ಲೂಕು ಕೇಂದ್ರಗಳಲ್ಲಿರುವ ಜೆಸಿಬಿ, ಹಿಟಾಚಿ,

ಟಿಪ್ಪರ್, ಟ್ರ್ಯಾಕ್ಟರ್‌ಗಳ ಮಾಹಿತಿ ತಿಳಿದುಕೊಂಡಿರಬೇಕು ಹಾಗೂ ಸರ್ಕಾರಿ ವಾಹನಗಳು ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು ಎಂದ ಅವರು, ಎಲ್ಲಾ ತಾಲ್ಲೂಕುಗಳ ತಹಸೀಲ್ದಾರರುಗಳು ಹೆಚ್ಚು ಹೆಚ್ಚು ಸಭೆಗಳನ್ನು ನಡೆಸಿ ಯಾವುದೇ ಅನಾಹುತಗಳು ಹಾಗೂ ಯಾವುದೇ ಪ್ರಾಣಹಾನಿ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು. ರಸ್ತೆ ಬದಿಯಲ್ಲಿರುವ ಮರ, ಗಿಡ, ನೀರು ಹರಿಯುವ ಚಾನಲ್‌ಗಳು ಹಾಗೂ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಯ ನೀರು ಮತ್ತು ಚರಂಡಿ ವ್ಯವಸ್ಥೆ ಬಗ್ಗೆ ಗಮನ ಹರಿಸಬೇಕು, ಚರಂಡಿಗಳು ಹಾಗೂ ತಗ್ಗು ಪ್ರದೇಶಗಳಲ್ಲಿ ನೀರು ಸರಾಗವಾಗಿ ಹರಿಯುವಂತೆ ನೋಡಿಕೊಳ್ಳಬೇಕು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಗ್ರಾ.ಪಂ.ಗಳ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಆಸುಪಾಸುಗಳನ್ನು ಸ್ವಚ್ಛಗೊಳಿಸಿ ಸರಾಗವಾಗಿ ನೀರು ಹರಿಯುವಂತೆ ಕ್ರಮ ಕೈಗೊಳ್ಳಲು ಎಲ್ಲಾ ಪಿ.ಡಿ.ಓ.ಗಳು ಪರಿಶೀಲಿಸಬೇಕು. ಕುಡಿಯುವ ನೀರಿನ ಪರಿಶುದ್ಧತೆ ಬಗ್ಗೆ ಪರಿಶೀಲನೆ ನಡೆಸಬೇಕು. ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಅವಶ್ಯಕತೆ ಇರುವ ಸಂದರ್ಭಗಳಲ್ಲಿ ಗಂಜಿ ಕೇಂದ್ರಗಳನ್ನು ತೆರೆದು ಅಲ್ಲಿ ಶುದ್ಧ ಕುಡಿಯುವ ನೀರು ಪೂರೈಸಲು ಸರಿಯಾದ ವ್ಯವಸ್ಥೆ ಕಲ್ಪಿಸಬೇಕು.

ಸ್ಥಳೀಯವಾಗಿ ಆದ ಸಮಸ್ಯೆಗಳ ಬಗ್ಗೆ ಸಂಬಂಧಿಸಿದ ಮೇಲಧಿಕಾರಿಗಳಿಗೆ ತಕ್ಷಣ ಮಾಹಿತಿ ನೀಡಬೇಕು. ಯಾವುದೇ ಕಾರಣಕ್ಕೂ ಔದಾಸೀನ್ಯ ತೋರದೆ ಕರ್ತವ್ಯ ನಿರ್ವಹಿಸಬೇಕು. ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಕೇಂದ್ರ ಸ್ಥಾನದಲ್ಲಿ ಕಡ್ಡಾಯವಾಗಿ ಇರಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಕನಕರಡ್ಡಿ ನಾರಾಯಣ ರಡ್ಡಿ, ಉಪವಿಭಾಗಾಧಿಕಾರಿ ದೇವರಾಜ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ತಹಸೀಲ್ದಾರರುಗಳು ಸೇರಿದಂತೆ ವೀಡಿಯೋ ಕಾನ್ಫರೆನ್ಸ್‌ನಲ್ಲಿ ಭಾಗವಹಿಸಿದ್ದರು.

## 14.14 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣ

ಕರ್ನಾಟಕದಲ್ಲಿಅಭಿವೃದ್ಧಿಯ ಹೊಸ ಕನಸುಗಳೊಂದಿಗೆ ಅಧಿಕಾರಕ್ಕೆ ಬಂದಿರುವ ಸರ್ಕಾರಪಂಚ ಗ್ಯಾರಂಟಿಗಳಲ್ಲಿ ಒಂದಾದಶಕ್ತಿ ಯೋಜನೆಯೂಮಹಿಳೆಯರ ಸಮಗ್ರ ಪ್ರಗತಿಗಾಗಿ ಜಾರಿಗೊಳಿಸಿದ್ದು ಬರುವಜೂನ್ 11 ಕ್ಕೆ ಎರಡು ವರ್ಷಗಳು ಪೂರೈಸುತ್ತಿದ್ದು,ಜಿಲ್ಲೆಯಲ್ಲಿಇದುವರೆಗೆ14.14 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದಾರೆ.

ರಾಜ್ಯ ಸರ್ಕಾರಿ ಸ್ವಾಮ್ಯದ ಬಸ್ಸುಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಸೌಲಭ್ಯ ಕಲ್ಪಿಸಿರುವ ಶಕ್ತಿ ಯೋಜನೆಯು ಮಹಿಳೆಯರನ್ನು ಮುಖ್ಯವಾಹಿನಿಗೆ ತಂದು ಪುರುಷರಿಗೆ ಸಮಾನವಾಗಿ ನಿಲ್ಲುವಂತೆ ಮಾಡುವ ಪ್ರಯತ್ನಕ್ಕೆ ಈ ಶಕ್ತಿ ಯೋಜನೆಯೂ ಸಹಕಾರಿಯಾಗಿದೆ.

ಶಕ್ತಿ ಯೋಜನೆ ನಿಜಕ್ಕೂ ಮಹಿಳೆಯರಲ್ಲಿ ಶಕ್ತಿ ತುಂಬಿದೆ. ಇದರಿಂದ ಮಹಿಳೆಯರಿಗೆ ತುಂಬಾ ಅನುಕೂಲವಾಗಿದೆ. ಖಾಸಗಿ ವಲಯದಲ್ಲಿ ಕೆಲಸ ಮಾಡುವ ಮಹಿಳೆಯರಿಗೆ ಬಹಳಷ್ಟು ಅನೂಕೂಲವಾಗಿದೆ ಪ್ರಯಾಣದರವನ್ನು ಭರಿಸಲುಒಂದೊತ್ತಿನಊಟವನ್ನೇತೊರೆಯುವ ಪರಿಸ್ಥಿತಿ ಇತ್ತು. ಈಗ ಶಕ್ತಿ ಯೋಜನೆಯಿಂದಎಲ್ಲಾ ಮಹಿಳೆಯರು ನೆಮ್ಮದಿಯಿಂದ ಪ್ರಯಾಣಿಸಲು ಸಾಧ್ಯವಾಗಿದೆ.

ಕರ್ನಾಟಕರಾಜ್ಯದ ನಿವಾಸಿ ಮಹಿಳೆಯರಿಗೆ, ವಿದ್ಯಾರ್ಥಿನಿಯರಿಗೆ ಮತ್ತು ಲಿಂಗತ್ವಅಲ್ಪಸಂಖ್ಯಾತರಿಗೆಕರ್ನಾಟಕ ರಾಜ್ಯರಸ್ತೆ ಸಾರಿಗೆ ಸಂಸ್ಥೆಗಳ ನಗರ ಸಾರಿಗೆ, ಸಾಮಾನ್ಯ ಮತ್ತು ವೇಗದೂತ ಬಸ್ಸುಗಳಲ್ಲಿ




ರಾಜ್ಯಾದ್ಯಂತಉಚಿತವಾಗಿ ಪ್ರಯಾಣಿಸಲು ಶಕ್ತಿ ಯೋಜನೆ ಅವಕಾಶ ಕಲ್ಪಿಸಿದೆ.

ರಾಜ್ಯದಲ್ಲಿಪ್ರತಿ ದಿನ ಸರಾಸರಿ 50ರಿಂದ 60ಲಕ್ಷ ಮಹಿಳಾ ಪ್ರಯಾಣಿಕರಿಗೆ ಈ ಯೋಜನೆಯಿಂದ ಅನುಕೂಲವಾಗುತ್ತಿದೆ. ಮಹಿಳೆಯರು ದೂರದ ಪಟ್ಟಣಗಳಿಗೆ ತೆರಳಿ ಹೆಚ್ಚಿನಆದಾಯದಉದ್ಯೋಗ ಹೊಂದಲು ಸಹಕಾರಿಯಾಗಿದೆ. ಶಕ್ತಿ ಯೋಜನೆಯುಓದುವ ಹೆಣ್ಣು ಮಕ್ಕಳ ಕನಸುಗಳಿಗೆ ರೆಕ್ಕೆ ಮೂಡಿಸಿದೆ.

ಶಕ್ತಿ ಯೋಜನೆಯಿಂದ ಮಹಿಳೆಯರು ಆರ್ಥಿಕ ಸ್ವಾವಲಂಬಿಗಳಾಗಿ ಮುನ್ನೇಲೆಗೆ ಬರುತ್ತಿದ್ದು, ಗ್ರಾಮಾಂತರ ಪ್ರದೇಶಗಳಿಂದ ನಗರಕ್ಕೆ ಬಂದುದುಡಿಯುವ ಮಹಿಳೆಯರಿಗೆ ಶಕ್ತಿ ಯೋಜನೆಯೂ ವರವಾಗಿದೆ.

ಹಾಸನ ಜಿಲ್ಲೆಯಲ್ಲಿ 8 ತಾಲ್ಲೂಕುಗಳಿದ್ದು ಹಾಸನ,ಆಲೂರು, ಅರಕಲಗೂಡು, ಚನ್ನರಾಯಪಟ್ಟಣ, ಹೊಳೆನರಸೀಪುರ ತಾಲ್ಲೂಕುಗಳು ಹಾಸನ ವಿಭಾಗಕ್ಕೆ ಹಾಗೂ ಸಕಲೇಶಪುರ, ಬೇಲೂರು, ಅರಸೀಕೆರೆ ತಾಲ್ಲೂಕುಗಳು ಚಿಕ್ಕಮಗಳೂರು ವಿಭಾಗಳ ವ್ಯಾಪ್ತಿಗೆ ಬರುತ್ತದೆ.

ಶಕ್ತಿ ಯೋಜನೆ ಪ್ರಾರಂಭವಾದ 2023 ಜೂನ್ 11 ರಿಂದ 2025 ಮೇ 15 ರ ವರೆಗೆ ಹಾಸನ ಜಿಲ್ಲೆಯಲ್ಲಿ ಸಾಮಾನ್ಯ, ನಗರ ಹಾಗೂ ವೇಗದೂತ ಬಸ್ಸುಗಳಲ್ಲಿ ಪ್ರಯಾಣಿಸಿದ 14.14 ಕೋಟಿ ಮಹಿಳೆಯರಿಗೆ ಶೂನ್ಯಟಿಕೆಟ್‌ಅನ್ನು ನೀಡಲಾಗಿದೆ. ಹಾಸನ ವಿಭಾಗಕ್ಕೆ 472.70ಕೋಟಿ ರೂಪಾಯಿಆದಾಯ ಲಭಿಸಿದೆ.

ಪ್ರತಿನಿತ್ಯಅಂದಾಜು 67ರೂ ಲಕ್ಷಆದಾಯವಾಗುತ್ತಿದ್ದು, 2 ಲಕ್ಷ ಮಹಿಳೆಯರು ಶಕ್ತಿಯಯೋಜನೆಯ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ.

### ಅನಿಸಿಕೆಗಳು.



ರಂಜಿತಾ ಆದ ನಾನು ತುಮಕೂರಿನಲ್ಲಿ ವಿದ್ಯಾಭ್ಯಾಸ ಮಾಡುವಾಗಉಚಿತ ಬಸ್ ಯೋಜನೆಯಿಂದತುಮಕೂರಿಗೆ ಪ್ರಯಾಣಿಸುವಾಗಬಹಳಅನುಕೂಲವಾಗಿದೆ, ಬಡ ಮಧ್ಯಮಕುಟುಂಬದ ಮಕ್ಕಳಾದ ನಾವುಗಳು ಪ್ರಯಾಣದ ಹಣಕ್ಕಾಗಿಆಲೋಚಿಸಬೇಕಾಗಿತ್ತುರಜೆ ಸಮಯವುಊರಿಗೆ ಬಂದು ಹೋಗುವುದಕ್ಕೂಚಿಂತಿಸಬೇಕಾಗಿತ್ತು. ಆದರೆ ಸರ್ಕಾರಉಚಿತ ಬಸ್ ಪ್ರಯಾಣಕ್ಕೆ ಅನುವು ಮಾಡಿಕೊಟ್ಟಿರುವುದು ಬಹಳ ಅನುಕೂಲವಾಗಿದೆ.

–ರಂಜಿತಾ ಸಿದ್ದಯ್ಯ ನಗರ ಹಾಸನ



. ನಾನು ಹಳ್ಳಿಯಿಂದ ಹಳ್ಳಿಗೆ ಓಡಾಡಿಕೊಂಡುದಟ್ಟವನ್ನು ಹೊಲಿಯುವ ಕೆಲಸ ಮಾಡುತ್ತಿದ್ದು ಬಸ್ಸಿನಲ್ಲಿ ಟಿಕೆಟ್‌ಇಲ್ಲದೆ ಫ್ರೀಯಾಗಿ

ಹೋಗುತ್ತಿರುವುದರಿಂದತುಂಬಾ ಅನುಕೂಲವಾಗಿದೆದುಡಿಮೆಯಲ್ಲಿ ಸ್ವಲ್ಪ ಹಣ ಉಳಿಯುವಂತಾಗಿದೆ.

## ಆರೋಗ್ಯವೇ ಸಂಪತ್ತು, ನಿಷ್ಕಾಳಜಿ ಬೇಡ



**ಗದಗ:** ಆರೋಗ್ಯವೇ ಮಹಾ ಭಾಗ್ಯವಾಗಿದ್ದು, ಆರೋಗ್ಯದ ಬಗ್ಗೆ ಯಾರೂ ನಿಷ್ಕಾಳಜಿ ಮಾಡಬಾರದು' ಎಂದು ತಾಲೂಕು ಪಂಚಾಯತಿ ಸಹಾಯಕ

ನಿರ್ದೇಶಕರಾದ (ಉಖಾ) ಕುಮಾರ ಪೂಜಾರ ತಿಳಿಸಿದರು.

ತಾಲೂಕಿನ ಕಳಸಾಪೂರ ಗ್ರಾಮ ಪಂಚಾಯಿತಿಯ ನರೇಗಾ ಕಾಮಗಾರಿ ಸ್ಥಳದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆಯುಷ್ಮನ ಆರೋಗ್ಯ ಮಂದಿರ (ಎಎಂ) ಕಳಾಸಾಪುರ ಇವುಗಳ ಆಶ್ರಯದಲ್ಲಿ ಗುರುವಾರ ಆಯೋಜಿಸಿದ್ದ ಆರೋಗ್ಯ ಶಿಬಿರದಲ್ಲಿ ಅವರು ಮಾತನಾಡಿದರು.

ಕಾಲ ಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ತಾಲೂಕಿನ ಬಹುತೇಕ ಗ್ರಾಮಗಳಲ್ಲಿಯ ಉದ್ಯೋಗ ಖಾತ್ರಿ ಕಾಮಗಾರಿ ಸ್ಥಳದಲ್ಲಿ ಆರೋಗ್ಯ ತಪಾಸಣೆ ಮಾಡಲಾಗಿದೆ. ಬಡ ಕೂಲಿಕಾರರಿಗೆ ಉಚಿತ ಆರೋಗ್ಯ ಶಿಬಿರದಿಂದ ತುಂಬಾ ಅನುಕೂಲವಾಗಿದೆ ಎಂದರು. ಕಾಲ ಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸುವುದರಿಂದ ಆರೋಗ್ಯದ ಏರುಪೇರುಗಳನ್ನು ತಿಳಿಯ ಬಹುದಾಗಿದೆ. ತಕ್ಷಣವೇ ಸಂಭವಿಸುವ ದುರಂತಗಳನ್ನು ತಡೆಯಬಹುದಾಗಿದೆ ಎಂದು ತಿಳಿಸಿದರು. ಉದ್ಯೋಗ ಖಾತ್ರಿ ಕೂಲಿ 2025ರ ಏ.1ರಿಂದ 349 ಯಿಂದ 370ಗೆ ಹೆಚ್ಚಳವಾಗಿದೆ. ಕೂಲಿಕಾರರು ಗ್ರಾ.ಪಂಗೆ ಕೆಲಸದ ಬೇಡಿಕೆ ಸಲ್ಲಿಸಿ, ಕೆಲಸ ಪಡೆಯಬೇಕು ಸಲಹೆ ನೀಡಿದರು.

ಸಮುದಾಯ ಆರೋಗ್ಯ ಅಧಿಕಾರಿ ಡಾ. ಎಲ್. ಕೃಷ್ಣ ಮಾತನಾಡಿ, ಉತ್ತಮ ಆರೋಗ್ಯ ಕಲ್ಪಿಸುವ ನಿಟ್ಟಿನಲ್ಲಿ ಕಾಮಗಾರಿ ಸ್ಥಳದಲ್ಲಿಯೇ ಬಿಪಿ, ಶುಗರ್, ಮಧುಮೇಹ, ಅತಿ ರಕ್ತದೊತ್ತಡದಂತಹ ಪ್ರಾಥಮಿಕ ಅಸಾಂಕ್ರಮಿಕ ಗುಣಲಕ್ಷಣಗಳನ್ನು ಪತ್ತೆ ಹಚ್ಚಿ ಸೂಕ್ತ ಸಮಾಲೋಚನೆ ಮಾಡಲಾಗುವುದು ಎಂದು ತಿಳಿಸಿದರು.

130 ಮಹಿಳೆಯರು, 127 ಪುರುಷರು ಸೇರಿ 257 ಕೂಲಿ ಕಾರ್ಮಿಕರ ತೂಕ, ಬಿ.ಪಿ., ಶುಗರ್ ಹಾಗೂ ಚಿಕ್ಕ ಪುಟ್ಟ ಆರೋಗ್ಯ ಸಮಸ್ಯೆಗೆ ಮಾತ್ರೆಗಳನ್ನು ನೀಡಲಾಯಿತು.

ಗ್ರಾಪಂ ಅಧ್ಯಕ್ಷರಾದ ಅನಸೂಯಾ ಬೆಟಗೇರಿ, ಉಪಾಧ್ಯಕ್ಷರಾದ ರಾಜೇಶ್ವರಿ ಘೋಡಕೆ, ತಾಪಂ ಐಇಸಿ ವೀರೇಶ ಬಸನಗೌಡ್ರ, ಗ್ರಾಪಂ ಕಾರ್ಯದರ್ಶಿ ಪ್ರೀತಮ್ ಬಳ್ಳಾರಿ,

ಗ್ರಾಪಂ ಸಿಬ್ಬಂದಿಗಳಾದ ಶರಣಪ್ಪ ಹುಯಿಲಗೋಳ, ಮಾರುತಿ ಚಲವಾದಿ, ಬಿಎಫ್‌ಟಿ ದುರ್ಗಪ್ಪ ಆಲೂರ, ಮೈಲಾರಪ್ಪ ಸೋಮನಕಟ್ಟಿ, ಆರೋಗ್ಯ ಇಲಾಖೆಯ ಎಲ್.ಎಂ. ದೇವದುರ್ಗ, ಆಶಾ ಕಾರ್ಯಕರ್ತೆಯರಾದ ಬಸವಣ್ಣೆಮ್ಮ ಓಳೇಕಾರ, ಲಲಿತಾ ತಳವಾರ, ರತ್ನ ಲಮಾಣಿ, ಚನ್ನಮ್ಮ ಮಾದರ, ಕಾಯಕ ಬಂಧುಗಳು ಹಾಗೂ ಕೂಲಿಕಾರರು ಇದ್ದರು.

### ಪೊಲೀಸ್ ಸಬ್ ಇನ್ಸ್ ಪೆಕ್ಟರ್ ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿಗೆ ಮಂಜೂರಾದ ರಾಜ್ಯದ ಬೆಳಗಾವಿ, ಮೈಸೂರು ಕಂದಾಯ ವಿಭಾಗಗಳಲ್ಲಿನ ಪೊಲೀಸ್ ಸಬ್ ಇನ್ಸ್ ಪೆಕ್ಟರ್ ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಯನ್ನು ಪಡೆಯಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಪಾರ್ಸಿ ಯುವಜನರಿಗೆ 90 ದಿನಗಳ ವಸತಿಯುತ ಪುರುಷ & ಮಹಿಳಾ ಅಭ್ಯರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಯ ಮೂಲಕ ಈ ತರಬೇತಿ ನಡೆಸಲಾಗುವುದು. ಸೇವಾ ಸಿಂಧು ಪೋರ್ಟಲ್ https://sevasindhu.karnataka.gov.in ನಲ್ಲಿ ಮೇ.23 ರೊಳಗಾಗಿ ಅರ್ಜಿ ಸಲ್ಲಿಸಬಹುದು.

ಇಲಾಖೆ ವೆಬ್ ಸೈಟ್ :dom.karkataka.gov.in ನಲ್ಲಿ ಪರಿಶೀಲಿಸಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದು. ಹಾಗೂ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ: 8277799990 ಸಂಪರ್ಕಿಸಲು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಜಗಳೂರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ, ಪ.ವರ್ಗ ಮತ್ತು ಇತರೆ ಜನಾಂಗದವರು ಅರ್ಜಿ ಸಲ್ಲಿಸಬಹುದು.

ವೆಬ್ ಸೈಟ್ https://shp.karnataka.gov.in/bcwd ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜೂನ್ 16 ಕೊನೆಯ ದಿನವಾಗಿರುತ್ತದೆ. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನ್ನು ವೀಕ್ಷಿಸಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ತಾಲ್ಲೂಕು ಕಲ್ಯಾಣಾಧಿಕಾರಿಗಳ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಜಗಳೂರು ದೂ.ಸಂ:08196-227040 ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬೇಕೆಂದು ಇಲಾಖೆಯ ಅಧಿಕಾರಿ ಅಸ್ಮಾಬಾನು ತಿಳಿಸಿದ್ದಾರೆ.

## ಸಾರ್ವಜನಿಕರ ಆರೋಗ್ಯ ಕಾಪಾಡಲು ತಪಾಸಣಾ ಶಿಬಿರ ಸಹಕಾರಿ : ಸಗೀರ್ ಅಹಮದ್

**ಚಿಕ್ಕಮಗಳೂರು:** ಸಾರ್ವಜನಿಕರ ಆರೋಗ್ಯ ಕಾಪಾಡಲು ಉಚಿತ ಆರೋಗ್ಯ ತಪಾಸಣಾ ಶಿಬಿರ ಸಹಕಾರಿ ಎಂದು ಮಾಜಿ ಸಚಿವ ಸಿ.ಆರ್. ಸಗೀರ್ ಅಹಮದ್ ತಿಳಿಸಿದರು.

ಅವರು ಐಜಿ ರಸ್ತೆಯ ಉರ್ದು ಶಾಲೆಯಲ್ಲಿ ನ್ಯಾಷನಲ್ ವೆಲ್‌ಫೇರ್ ಮತ್ತು ಚಾಲಿಟೇಬಲ್ ಟ್ರಸ್ಟ್ ಹಾಗೂ ಕಣಚೂರು ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಮಂಗಳೂರು ಇವರುಗಳ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದರು.

ರಾಜಕೀಯದಲ್ಲಿ ಯಾವ ಮುಸಲ್ಮಾನ ನೂರಾರು ಕೋಟಿ ರೂವರೆಗೆ ಲೂಟಿ ಹೊಡೆದಿಲ್ಲ, ಈ ಕುರಿತು ಬಿಜೆಪಿ ಆರೋಪಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ದೇಶದ್ರೋಹದ ಕೆಲಸ ಮಾಡುವ ವ್ಯಕ್ತಿ ಇಲ್ಲಿ ಬದುಕಲು ಅವಕಾಶವಿಲ್ಲ, ನಾವೆಲ್ಲಾ ಭಾರತ ಮಾತೆಯ ಮಕ್ಕಳು, ದೇಶ ಮತ್ತು ಪ್ರಜೆಗಳನ್ನು ರಕ್ಷಿಸಲು ದೇವರಲ್ಲಿ ಪ್ರಾರ್ಥಿಸುತ್ತೇವೆ ಎಂದರು.

ಜಾತಿ ಸಮೀಕ್ಷೆ ನಡೆಯುತ್ತಿದ್ದು, ಕಾಂಗ್ರೆಸ್ ಸರ್ಕಾರದ ಈ ನಿರ್ಧಾರದಿಂದ ಎಲ್ಲಾ ಸಮುದಾಯದ ವರ್ಗದ ಜನರಿಗೆ ಅನುಕೂಲವಾಗಬೇಕು, ಯಾವುದೇ ಸರ್ಕಾರ ಅಸ್ತಿತ್ವಕ್ಕೆ ಬರಬೇಕಾದರೆ ಪ.ಜಾ, ಪ.ಪಂ ಹಾಗೂ ಮುಸ್ಲಿಂರ ಬೆಂಬಲ ಬೇಕು. ಆದರೆ, ಕಾಂಗ್ರೆಸ್ ಸರ್ಕಾರ ಬಂದು ಎರಡು ವರ್ಷವಾದರೂ ಒಂದು ನಿವೇಶನ ವಿತರಿಸಿಲ್ಲ ಎಂದು ಆರೋಪಿಸಿದರು.

ಸಾರ್ವಜನಿಕರ ಆರೋಗ್ಯ ಕಾಪಾಡುವಲ್ಲಿ ಮಂಗಳೂರಿನ ಆಸ್ಪತ್ರೆ ಉಚಿತ ಆರೋಗ್ಯ ತಪಾಸಣೆಯನ್ನು ನಡೆಸುವ ಮೂಲಕ ಕಾರ್ಯಪ್ರವೃತ್ತರಾಗಿ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿರುವುದು ಶ್ಲಾಘನೀಯ ಎಂದ ಅವರು, ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು.

ಖ್ಯಾತ ಮಕ್ಕಳ ತಜ್ಞ ಡಾ.ಜೆ.ಪಿ ಕೃಷ್ಣೇಗೌಡ ಮಾತನಾಡಿ, ಬಡವರು ಶ್ರೀಮಂತರು ಎಂಬ ಬೇಧ ಭಾವವಿಲ್ಲದೆ ಒಳ್ಳೆಯ ಮನಸ್ಸಿನಿಂದ ಜನರ ಆರೋಗ್ಯಕ್ಕೆ ಪೂರಕವಾದ ಉಚಿತ



ಚಿಕಿತ್ಸಾ ಶಿಬಿರಗಳನ್ನು ಆಯೋಜಿಸಿರುವುದು ಸಂತೋಷಕರ ಸಂಗತಿ, ಬ್ರೆಸ್ಟ್ ಕ್ಯಾನ್ಸರ್‌ಗೆ ತುತ್ತಾಗಿ ವಾರ್ಷಿಕ 16 ಲಕ್ಷ ಮಹಿಳೆಯರು ನಿಧನರಾಗುತ್ತಿದ್ದಾರೆಂದು ವಿವರಿಸಿದರು.

ಇದರ ಜೊತೆಗೆ ಗರ್ಭಕಂಠ ಕ್ಯಾನ್ಸರ್ ಹೆಚ್ಚಾಗುತ್ತಿದ್ದು, ಇದನ್ನು ಮನಗಂಡು ಎಲ್ಲರೂ ಆಸ್ಪತ್ರೆಗೆ ಹೋಗು ಚಿಕಿತ್ಸೆ ಪಡೆಯಲು ಶಕ್ತರಾಗಿರುವುದಿಲ್ಲ, ಇಂತಹ ಶಿಬಿರಗಳಲ್ಲಿ ತಜ್ಞ ವೈದ್ಯರುಗಳನ್ನು ಕರೆತಂದು ಆ ಮೂಲಕ ಉಚಿತ ಚಿಕಿತ್ಸೆ ನೀಡುತ್ತಿರುವುದ ನಮ್ಮೆಲ್ಲರ ಭಾಗ್ಯ ಎಂದರು.

ಮಾಜಿ ಸಚಿವ ಸಗೀರ್ ಅಹಮದ್ ಅವರ ಶ್ರಮದ ಫಲವಾಗಿ ಚಿಕ್ಕಮಗಳೂರು ನಗರದ ಜನತೆ ಯಗಚಿ ನೀರು ಕುಡಿಯಲು ಸಹಕಾರಿಯಾಗಿದ್ದು, ಇದಕ್ಕಾಗಿ ಅವರನ್ನು ಅಭಿನಂದಿಸುತ್ತ ಸಮಾಜದಲ್ಲಿ ಸಿಕ್ಕಿದ ಅಧಿಕಾರವಧಿಯಲ್ಲಿ ಶಾಶ್ವತವಾದ ಜನೋಪಯೋಗಿ ಕಾರ್ಯಗಳನ್ನು ಕೈಗೊಳ್ಳಬೇಕೆಂದು ಕಿವಿಮಾತು ಹೇಳಿದರು.

ಕಣಚೂರು ಆಸ್ಪತ್ರೆಯ ಮುಖ್ಯಸ್ಥ ಡಾ.ಯು.ಕೆ. ಮೋಣು ಮಾತನಾಡಿ, ವರ್ಷವಿಡೀ ನಡೆಯುವ ಸಾಮೂಹಿಕ, ಸಾಮಾನ್ಯ ಉಚಿತ ವೈದ್ಯಕೀಯ ಶಿಬಿರಗಳನ್ನು ಉತ್ತರ ಕರ್ನಾಟಕ ಭಾಗದಲ್ಲಿ ಟ್ರಸ್ಟಿಗಳು ನಡೆಸುತ್ತಾ ಬರುತ್ತಿದ್ದಾರೆ. ಇದರಲ್ಲಿ ಅತ್ಯುತ್ತಮವಾಗಿ ಇಲ್ಲಿನ ನ್ಯಾಷನಲ್ ಟ್ರಸ್ಟ್ ಸಮಯಕ್ಕೆ ಸರಿಯಾಗಿ ಯಾವುದೇ ಜಾತಿ, ಮತ, ಭೇದವಿಲ್ಲದೆ ರೋಗಿಗಳಿಗೆ ಶುಶ್ರೂಷೆ ನಡೆಸಿ ಆರೋಗ್ಯ ಕಾಪಾಡುತ್ತಿದ್ದಾರೆ ಎಂದರು.

ರಾಜ್ಯದ ಹಲವಾರು ಆಸ್ಪತ್ರೆಗಳಲ್ಲಿ ಕಣಚೂರು ಆಸ್ಪತ್ರೆ ರೋಗಿಗಳ ಸೇವೆಯಲ್ಲಿ ಅಗ್ರಗಣ್ಯ ಸ್ಥಾನದಲ್ಲಿದೆ, ನಂ 1ನೇ ಸ್ಥಾನದಲ್ಲಿರುವ ಈ ಆಸ್ಪತ್ರೆ ಇನ್ನೂ ಹೆಚ್ಚಿನ ಸ್ಥಾನಮಾನ ಗಳಿಸಬೇಕೆಂಬ ಉದ್ದೇಶದಿಂದ ಹೃದಯ, ಕಿಡ್ನಿ ಕ್ಯಾನ್ಸರ್ ಇನ್ನೂ ಮುಂತಾದ ದೊಡ್ಡ ದೊಡ್ಡ ರೋಗಗಳಿಗೆ ಚಿಕಿತ್ಸೆ ನೀಡಬೇಕೆಂಬ ಗುರಿಯೊಂದಿಗೆ ನಿರ್ಧರಿಸಿ ತರಿಸಲಾಗಿರುವ ಸಲಕರಣೆಗಳನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಉದ್ಘಾಟಿಸಿದ್ದಾರೆ ಎಂದು ಹೇಳಿದರು.

ಈ ಆಸ್ಪತ್ರೆಯಲ್ಲಿ ದೊಡ್ಡಮಟ್ಟದ ಕಾಯಿಲೆಗಳಿಗೆ ಎಲ್ಲಾ ರೀತಿಯ ಚಿಕಿತ್ಸಾ ಸೌಲಭ್ಯಗಳು ದೊರೆಯಲಿವೆ, ರೋಗಿಗಳ ಅನುಕೂಲಕ್ಕಾಗಿ ಚಿಕ್ಕಮಗಳೂರಿನಿಂದ ಬಸ್ ಸೌಲಭ್ಯ ಸಹ ಏರ್ಪಡಿಸಲಾಗಿದ್ದು, ಇದರ ಸೌಲಭ್ಯ ಪಡೆದುಕೊಳ್ಳುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಟ್ರಸ್ಟ್ ಅಧ್ಯಕ್ಷ ಮಹಮದ್ ರಿಯಾಜ್ ಖಾನ್, ಉಪಾಧ್ಯಕ್ಷ ಸೈಯದ್ ಗೌಸ್ ಮೊಹಿದ್ದೀನ್ ಶಾಖಾದ್ರಿ, ಪ್ರಧಾನ ಕಾರ್ಯದರ್ಶಿ ಶಫೀಉಲ್ಲಾ, ಖಜಾಂಚಿ ಮಹಮದ್ ಯೂನಸ್ ಸಲೀಮ್, ಬಿ.ಎ. ಅಕ್ಮಲ್, ಇಕ್ಬಲ್ ಅಹಮದ್ ಖುರೇಷಿ, ಅನ್ವರ್ ಅಲಿ, ಪರ್ವೀಜ್, ಅಸ್ಲಮ್, ಫಯಾಜ್ ಅಹಮದ್, ಮಹಮದ್ ಜಿಯಾ, ನವೀದ್ ಪಾಷಾ, ರಫೀಕ್ ಅಹಮದ್, ಸುಹೀಲ್ ತಾಜ್, ಮಹಮದ್ ಇರ್ಷಾದ್, ಕೆ.ಟಿ. ರಾಧಾಕೃಷ್ಣ, ಅಂಜದ್, ಝುಹೀರ್ ಸಾಬ್, ಮತ್ತಿತರರು ಉಪಸ್ಥಿತರಿದ್ದರು.

### ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ., ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ-1, ಎಸ್.ಸಿ., ಎಸ್.ಟಿ.ಗೆ 2.50 ಲಕ್ಷ ರೂ., ಪ್ರವರ್ಗ- 2ಎ, 2ಬಿ, 3ಎ, 3ಬಿ ಇತರೆ ಹಿಂದುಳಿಗೆ ವರ್ಗ ಹಾಗೂ ಇತರೆ ಒಂದು ಲಕ್ಷ ರೂ. ಆಗಿದ್ದು, ವಿದ್ಯಾರ್ಥಿಗಳು ಮೇ 16 ರೊಳಗೆ htttps://shp.karanataka.gov.in/bcwd ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ತಾಲ್ಲೂಕುವಾರು ವಿದ್ಯಾರ್ಥಿ ನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ htttps:// bcwd.karanataka.gov.in/ ಅನ್ನು ಸಂಪರ್ಕಿಸಬಹುದು. ಹೆಚ್ಚಿನ ವಿವರಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಥವಾ ಸಹಾಯವಾಣಿ (8050770004 ಮತ್ತು 8050770005)ಯನ್ನು ಸಂಪರ್ಕಿಸಬಹುದು.

### ತಾಳೆ ಬೆಳೆ ಪ್ರದೇಶ ವಿಸ್ತರಣೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಭದ್ರಾವತಿ ತಾಲೂಕು ತೋಟಗಾರಿಕೆ ಇಲಾಖೆಯು 2025-26ನೇ ಸಾಲಿನ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ - ತಾಳೆ ಬೆಳೆ ಯೋಜನೆಯಡಿ ಹೊಸದಾಗಿ ತಾಳೆ ಬೆಳೆಯನ್ನು ಬೆಳೆಯಲು ಇಚ್ಚಿಸುವ ರೈತರಿಗೆ ಉಚಿತವಾಗಿ ತಾಳೆ ಸಸಿಗಳನ್ನು ವಿತರಿಸಿ ಮುಂದಿನ 3 ವರ್ಷಗಳವರೆಗೆ ನೆಟ್ಟ ಸಸಿಗಳ ನಿರ್ವಹಣೆಗಾಗಿ ಸಹಾಯಧನವನ್ನು ನೀಡುತ್ತಿದ್ದು, ಆಸಕ್ತ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರಿಂದ ಅರ್ಜಿ ಆಹ್ವಾನಿಸಿದೆ.

ಆಸಕ್ತರು ನಿಗದಿತ ಅರ್ಜಿಯನ್ನು ಶಿಕಾರಿಪುರ ತಾಲೂಕು ತೋಟಗಾರಿಕೆ ಇಲಾಖೆಯ ಕಚೇರಿಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಸೂಕ್ತ ದಾಖಲೆಗಳೊಂದಿಗೆ ಮೇ 31ರೊಳಗಾಗಿ ಸಲ್ಲಿಸುವಂತೆ ಭದ್ರಾವತಿ ಹಿರಿಯ ಸಹಾಯ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.\ ಹೆಚ್ಚಿನ ಮಾಹಿತಿಗಾಗಿ ಭದ್ರಾವತಿ ಹಿರಿಯ ಸಹಾಯ ತೋಟಗಾರಿಕೆ ನಿರ್ದೇಶಕರ ಕಚೇರಿಯನ್ನು ಖುದ್ದಾಗಿ ಸಂಪರ್ಕಿಸುವುದು.

# ಮದ್ಯ ಮಾರಾಟ ನಿಷೇಧ

ಚಿಕ್ಕಮಗಳೂರು.ಮೇ.20: ವಿವಿಧ ಕಾರಣಗಳಿಂದ ಖಾಲಿ ಇರುವ/ತೆರವಾಗಿರುವ ಗ್ರಾಮ ಪಂಚಾಯಿತಿಗಳ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಚುನಾವಣೆ ನಡೆಯುವ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ

ಮತದಾನವನ್ನು ಮುಕ್ತ ಹಾಗೂ ನಿಷ್ಪಕ್ಷಪಾತವಾಗಿ ಮತ್ತು ಸುವ್ಯವಸ್ಥಿತವಾಗಿ ನಡೆಸುವ ಹಿತದೃಷ್ಟಿಯಿಂದ ಅಜ್ಜಂಪುರ ತಾಲ್ಲೂಕು ಸೊಕ್ಕೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕ ಶಾಂತಿ ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವುದು ಅತ್ಯಾವಶ್ಯಕವಾಗಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಮೇ 23 ರಂದು ಸಂಜೆ 5:00 ಗಂಟೆಯಿಂದ ಮೇ 25 ರಂದು ಸಂಜೆ ಚುನಾವಣಾ ಪ್ರಕ್ರಿಯೆ ಮುಗಿಯುವರೆಗೂ ಪರವಾನಗಿ ಆಧಾರಿತ ಎಲ್ಲಾ ರೀತಿಯ ಮದ್ಯ ಮಾರಾಟ ಮಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳೂ ಆಗಿರುವ ಜಿಲ್ಲಾ ದಂಡಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಆದೇಶ ಹೊರಡಿಸಿದ್ದಾರೆ.

# ಶಸ್ತ್ರ, ಆಯುಧಗಳ ಠೇವಣಿ

**ಚಿಕ್ಕಮಗಳೂರು.ಮೇ.20:** ವಿವಿಧ ಕಾರಣಗಳಿಂದ ಖಾಲಿ ಇರುವ/ತೆರವಾಗಿರುವ ಗ್ರಾಮ ಪಂಚಾಯಿತಿಗಳ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಚುನಾವಣೆ ನಡೆಯುವ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ

ಮತದಾನವನ್ನು ಮುಕ್ತ ಹಾಗೂ ನಿಷ್ಪಕ್ಷಪಾತವಾಗಿ ಮತ್ತು ಸುವ್ಯವಸ್ಥಿತವಾಗಿ ನಡೆಸುವ ಹಿತದೃಷ್ಟಿಯಿಂದ ಅಜ್ಜಂಪುರ ತಾಲ್ಲೂಕು ಸೊಕ್ಕೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕ ಶಾಂತಿ ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವುದು ಅತ್ಯಾವಶ್ಯಕವಾಗಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಮೇ 23 ರಂದು ಸಂಜೆ 5:00 ಗಂಟೆಯಿಂದ ಮೇ 25 ರಂದು ಸಂಜೆ ಚುನಾವಣಾ ಪ್ರಕ್ರಿಯೆ ಮುಗಿಯುವರೆಗೂ ಆ ವ್ಯಾಪ್ತಿಯ ಪೊಲೀಸ್ ಠಾಣೆಯಲ್ಲಿ ಪರವಾನಗಿ ಆಧಾರಿತ ಎಲ್ಲಾ ಶಸ್ತ್ರ, ಆಯುಧಗಳ ಠೇವಣಿ ಇರಿಸುವಂತೆ ಹಾಗೂ ಚುನಾವಣೆ ಘೋಷಿತ ಪ್ರದೇಶದಲ್ಲಿ ಯಾವುದೇ ವ್ಯಕ್ತಿಗಳು ಶಸ್ತ್ರ, ಆಯುಧಗಳನ್ನು ಹೊಂದಿ ತಿರುಗಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳೂ ಆಗಿರುವ ಜಿಲ್ಲಾ ದಂಡಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಆದೇಶ ಹೊರಡಿಸಿದ್ದಾರೆ.

# ಜಿಲ್ಲೆಯಲ್ಲಿ ರೆಡ್ ಅಲರ್ಟ್:ಕ್ರಮಕ್ಕೆ ಸಾರ್ವಜನಿಕರಿಗೆ ಸೂಚನೆ

**ಚಿಕ್ಕಮಗಳೂರು.ಮೇ.20:** ಪೂರ್ವ ಮುಂಗಾರು ಮಳೆ ಪ್ರಾರಂಭವಾಗಿದ್ದು, ಮುಂದಿನ 2 ದಿನಗಳು ಹೆಚ್ಚಿನ ಮಳೆಯಾಗುವ ಸಾಧ್ಯತೆ ಇರುವುದರಿಂದ ಜಿಲ್ಲೆಯಲ್ಲಿ ಮೇ 21 ರಂದು ರೆಡ್ ಅಲರ್ಟ್ ಹಾಗೂ ಮೇ 22 ರಂದು ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಹಿಸಬೇಕಿದ್ದು, ಸಾರ್ವಜನಿಕರಿಗೆ ಮುಂದಿನ ಎರಡು ದಿನಗಳು ಅಥವಾ ಮಳೆ ಕಡಿಮೆಯಾಗುವವರೆಗೆ ಈ ಕೆಳಕಂಡ ಸೂಚನೆಗಳನ್ನು ಪಾಲಿಸುವಂತೆ ಕೋರಲಾಗಿದೆ.

ಸಾರ್ವಜನಿಕರು ನದಿಗಳಿಗೆ ಅಥವಾ ತಗ್ಗು ಪ್ರದೇಶಗಳಿಗೆ ತೆರಳದಂತೆ ಕಟ್ಟೆಚ್ಚರ ವಹಿಸುವುದು. ಸಾರ್ವಜನಿಕರು ಜಾನುವಾರುಗಳನ್ನು ಶುಚಿಗೊಳಿಸಲು ಅಥವಾ ಬಟ್ಟೆಗಳನ್ನು ತೊಳೆಯಲು ಹಳ್ಳ. ಕೆರೆ ಕಟ್ಟೆಗಳಿಗೆ ತೆರಳಬಾರದು. ಹಾಗೂ ಮಳೆಯಿಂದಾಗಿ ಧರೆ, ಗುಡ್ಡ ಕುಸಿತ ಉಂಟಾಗುವ ಸಂಭವವಿರುವುದರಿಂದ ಸಾರ್ವಜನಿಕರು ಎಚ್ಚರ ವಹಿಸುವುದು

ಈ ಸೂಚನೆಗಳನ್ನು ಪಾಲಿಸುವ ಮೂಲಕ ಸಾರ್ವಜನಿಕರು ಯಾವುದೇ ಅಪಾಯಕಾರಿ ಘಟನೆಗಳಿಗೆ ಅವಕಾಶ ಕೊಡದೆ ಜಿಲ್ಲಾಡಳಿತಕ್ಕೆ ಸಹಕಾರ ನೀಡಲು ಕೋರಿದೆ

ಹೆಚ್ಚಿನ ಮಾಹಿತಿಗಾಗಿ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ–08262–238950 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು ತಿಳಿಸಿದ್ದಾರೆ.

# ನಗರಸಭೆ ವ್ಯಾಪ್ತಿಯ ಆಸ್ತಿಗಳ ಆಧುನೀಕರಣಗೊಳಿಸಲು ನಕ್ಷಾ ಯೋಜನೆ ಜಾರಿ

**ಚಿಕ್ಕಮಗಳೂರು:** ನಗರಸಭೆ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಆಸ್ತಿಗಳನ್ನು ಆಧುನೀಕರಣಗೊಳಿಸಬೇಕೆಂಬ ಗುರಿಯೊಂದಿಗೆ ಡ್ರೋನ್ ಸರ್ವೆ ಮೂಲಕ ಗಣಕೀಕರಣಗೊಳಿಸಿ ಸಂಪೂರ್ಣ ಮಾಹಿತಿಯನ್ನು ಒಳಗೊಂಡ ದಾಖಲೆ ಸಿದ್ದಪಡಿಸಲು ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನಕ್ಷಾ ಯೋಜನೆಯನ್ನು ಪರಿಣಾಮಕಾರಿಯಾಗಿ ನಡೆಸಲು ಉದ್ದೇಶಿಸಲಾಗಿದೆ ಎಂದು ಪೌರಾಯುಕ್ತ ಬಿ.ಸಿ. ಬಸವರಾಜ್ ತಿಳಿಸಿದರು.




ಅವರು ಇಂದು ನಗರಸಭೆಯ ಸಭಾಂಗಣದಲ್ಲಿ ನಕ್ಷಾ ಯೋಜನೆಯ ಬಗ್ಗೆ ಸರ್ವೆ ಅಧಿಕಾರಿಗಳಿಗೆ ಏರ್ಪಡಿಸಲಾಗಿದ್ದ ಮಾಹಿತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ನಗರದ ಅಭಿವೃದ್ಧಿಗೆ ಬೇಕಾಗುವ ಪೂರಕ ದಾಖಲಾತಿಗಳನ್ನು ಗಣಕೀಕರಣಗೊಳಿಸಿ ಪ್ರತೀ ಬಿಲ್ಡಿಂಗ್, ರಸ್ತೆ, ವಿದ್ಯುತ್ ಕಂಬ, ಚರಂಡಿ, ಸ್ಮಶಾನ, ಕೆರೆ ಸೇರಿದಂತೆ ನಗರಸಭೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಆಸ್ತಿಗಳ ಜೊತೆಗೆ ಖಾಸಗಿ ಆಸ್ತಿಗಳನ್ನು ಈ ಯೋಜನೆಯಡಿ ಗಣಕೀಕರಣಗೊಳಿಸಿದರೆ ಸಂಪೂರ್ಣ ಮಾಹಿತಿ ಖಾತೆದಾರರಿಗೆ ಲಭ್ಯವಾಗಲಿದೆ ಎಂದು ಹೇಳಿದರು.

ನಗರದ ಅಭಿವೃದ್ಧಿಗೆ ಸಂಪೂರ್ಣ ಮಾಹಿತಿ ದೊರೆಯುವುದರಿಂದ ಈ ಸರ್ವೆಯನ್ನು ನಿಗದಿತ ಸಮಯಕ್ಕೆ ಮುಕ್ತಾಯಗೊಳಿಸಿದರೆ ಸರ್ಕಾರದಿಂದ ಹೆಚ್ಚಿನ ಅನುದಾನ ಬಿಡುಗಡೆಯಾಗುವ ಭರವಸೆ ಇದೆ ಎಂದು ತಿಳಿಸಿದರು.

ಸಾರ್ವಜನಿಕರು ತಮ್ಮ ಆಸ್ತಿಗೆ ಸಂಬಂಧಿಸಿದ ಸಂಪೂರ್ಣ ವಿವರಗಳನ್ನು ಮನೆಗೆ ಬರುವ ಸರ್ವೆ ಅಧಿಕಾರಿಗಳಿಗೆ ನೀಡುವ ಮೂಲಕ ನಗರಸಭೆಯೊಂದಿಗೆ ಸಹಕರಿಸಬೇಕೆಂದು ಮನವಿ ಮಾಡಿದ ಅವರು, ಈ ಸರ್ವೆ ಕಾರ್ಯವನ್ನು ಡಿಸೆಂಬರ್ ಮಾಹೆಯ ಒಳಗೆ ಪೂರ್ಣಗೊಳಿಸಬೇಕೆಂದು ಸರ್ಕಾರ ಆದೇಶ ನೀಡಿದೆ ಎಂದು ವಿವರಿಸಿದರು.

ಭೂದಾಖಲೆ ಇಲಾಖೆ ಸಹಾಯಕ ನಿರ್ದೇಶಕ ರುದ್ರೇಶ್ ಮಾತನಾಡಿ, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನಕ್ಷಾ ಯೋಜನೆಯಡಿ ರಾಜ್ಯದ ಹತ್ತು ನಗರ ಸ್ಥಳೀಯ ಸಂಸ್ಥೆಗಳನ್ನು ಆಯ್ಕೆಮಾಡಲಾಗಿದ್ದು, ಇದರಲ್ಲಿ ಚಿಕ್ಕಮಗಳೂರು ನಗರಸಭೆ ಸೇರ್ಪಡೆಯಾಗಿದೆ ಎಂದು ತಿಳಿಸಿದರು.

ನಗರಸಭೆ ಮತ್ತು ಭೂದಾಖಲೆಗಳ ಇಲಾಖೆಯಿಂದ 8 ತಂಡಗಳನ್ನು ರಚಿಸಲಾಗಿದ್ದು, ಪ್ರತೀ ಆಸ್ತಿಗಳ ಬೌಂಡರಿ ಅಳತೆ ಮಾಡಿ ಕೆರೆ, ಕಾಲುವೆ, ಸರ್ಕಾರಿ ಆಸ್ತಿಗಳ ಜೊತೆಗೆ ಖಾಸಗಿ ಸಾರ್ವಜನಿಕರ ಆಸ್ತಿಗಳನ್ನು ಸಮರ್ಪಕವಾಗಿ ಅಳತೆ ಮಾಡಿ ಈಗಾಗಲೇ ನಗರಸಭೆ ಕಣಜ ಸಾಫ್‌ವೇರ್‌ನಲ್ಲಿ ಐಡಿ ಇದ್ದು, ಲಿಂಕ್ ಮಾಡಿ ಅಳತೆಮಾಡಲಾಗುವುದೆಂದು ಹೇಳಿದರು.

ಆಸ್ತಿಯ ಎಲ್ಲಾ ವಿವರಗಳು ಡ್ರೋನ್‌ನಲ್ಲಿ ಚಿತ್ರೀಕರಣಗೊಂಡಾಗ ಒಟ್ಟಾರೆ ಇಮೇಜ್ ಬಂದಿರುತ್ತದೆ. ಅದನ್ನು ರೋವರ್ ಸರ್ವೆಯಲ್ಲಿಟ್ಟುಕೊಂಡು ಪ್ರತೀ ಆಸ್ತಿಗೆ ಪಾಲಿಗನ್ ಸಿದ್ದಪಡಿಸುತ್ತೇವೆ ನಂತರ ಪಿಆರ್ ಕಾರ್ಡ್‌ಗೆ ಮಾಹಿತಿಯನ್ನು ಲಿಂಕ್ ಮಾಡುತ್ತೇವೆ ಎಂದರು.

ಈ ರೀತಿ ಮಾಹಿತಿ ಸಂಗ್ರಹವಾದ ಪಿಆರ್ ಕಾರ್ಡನ್ನು ಆಸ್ತಿ ಹೊಂದಿರುವ ಸಾರ್ವಜನಿಕರಿಗೆ ವಿತರಿಸುತ್ತೇವೆ, ಕಾರ್ಡ್ ಪಡೆದ ಬಳಿಕ ಏನಾದರೂ ಆಕ್ಷೇಪಣೆಗಳಿದ್ದರೆ ಸಂಬಂಧಪಟ್ಟ ಅಧಿಕಾರಿಗಳಿಗೆ ಅರ್ಜಿ ಸಲ್ಲಿಸಲಿ ಅವಕಾಶ ನೀಡಲಾಗಿದ್ದು, ಸರಿಯಾದ ಮಾಹಿತಿ ದೊರಕಿದೆ ಎಂದು ದೃಢಪಟ್ಟಾಗ ಅಂತಿಮವಾಗಿ ಖಾತೆದಾರರಿಗೆ ಪಿಆರ್ ಕಾರ್ಡ್ ವಿತರಿಸುತ್ತೇವೆ ಎಂದು ಹೇಳಿದರು.

ಪಿಆರ್ ಕಾರ್ಡ್‌ನಲ್ಲಿ ದಾಖಲಾಗಿರುವ ಸಮಗ್ರ ಮಾಹಿತಿ ಭೂಮಿಯ ಯಾವ ಭಾಗದಲ್ಲಿ ಯಾವ ಸ್ಥಿತಿಯಲ್ಲಿ ನಮ್ಮ ಆಸ್ತಿಯಿದೆ ಎಂಬ ಸಮಗ್ರ ಮಾಹಿತಿ ಲಭ್ಯವಾಗುತ್ತದೆ. ಇದೂವರೆಗೆ ಆಸ್ತಿಗಳಿಗೆ ಸರ್ವೆ ನಂಬರ್ ಮಾತ್ರ ಇದ್ದು, ಆಸ್ತಿ ಎಲ್ಲಿದೆ ಎಂಬ ಮಾಹಿತಿ ಇರಲಿಲ್ಲ, ಪಿಆರ್ ಕಾರ್ಡ್‌ನಲ್ಲಿ ಆಸ್ತಿಯ ಬಗ್ಗೆ ಖಾತೆದಾರನ ವಿವರ ಮತ್ತಿತರ ಸಮಗ್ರ ಮಾಹಿತಿ ಇರುತ್ತದೆ ಎಂದು ತಿಳಿಸಿದರು.

# ಮುಂಗಾರು ಮಳೆ ಹಾನಿ ತಡೆಗೆ ಅಗತ್ಯ ಮುಂಜಾಗ್ರತಾ ಕ್ರಮ : ಮೀನಾ ನಾಗರಾಜ್

**ಚಿಕ್ಕಮಗಳೂರು:** ಈ ಬಾರಿಯ ಮುಂಗಾರು ಮಳೆ ಜೂನ್ ಮತ್ತು ಜುಲೈ ತಿಂಗಳಲ್ಲಿ ಹೆಚ್ಚಿನ ಪ್ರಮಾಣದ ಮಳೆಯಾಗುವ ಸಂಭವವಿರುವುದರಿಂದ ಮಳೆ ಹಾನಿ ತಡೆಗಟ್ಟಲು ಜಿಲ್ಲಾಡಳಿತ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ತಿಳಿಸಿದರು.



ಅವರು ಇಂದು ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಮುಂಗಾರು ಪೂರ್ವ ಉತ್ತಮ ಮಳೆಯಾಗಿದೆ. ಮುಂಗಾರು ಮಳೆ ಆರಂಭವಾಗಲಿದ್ದು, ಮಳೆ ಹಾನಿ ತಡೆಗಟ್ಟಲು ಅಗತ್ಯ ಪರಿಕರಗಳನ್ನು ಸಿದ್ಧವಿಟ್ಟುಕೊಳ್ಳಲಾಗಿದೆ. ಜಿಯಲಾಜಿಕಲ್ ಸರ್ವೇ ಆಫ್ ಇಂಡಿಯಾ ಭೂ ಕುಸಿತ ಸಂಭವಿಸಬಹುದಾದ ಸ್ಥಳಗಳನ್ನು ಗುರುತಿಸಿದ್ದು, ಶೃಂಗೇರಿ, ಬಸರೀಕಟ್ಟೆ, ಗುಡ್ಡೆತೋಟ, ಸೀತಾಳಯ್ಯನಗಿರಿ, ಮುಳ್ಳಯ್ಯನಗಿರಿ ಪ್ರದೇಶಗಳಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಕವಿಕಲ್ ಗಂಡಿಯಲ್ಲಿ ಈಗಾಗಲೇ ಕಾಮಗಾರಿ ನಡೆಯುತ್ತಿದೆ. ಮಣ್ಣಿನಲ್ಲಿ ತೇವಾಂಶ ಅಧಿಕವಾಗಿದ್ದು, ಮುತ್ತೋಡಿ ಹೋಗುವ ರಸ್ತೆಯಲ್ಲಿ ಗುಡ್ಡ ಕುಸಿತ ಉಂಟಾಗುವ ಸಾಧ್ಯತೆಗಳಿವೆ. ಚಾರ್ಮಾಡಿ ಘಾಟಿ ಪ್ರದೇಶದಲ್ಲಿ ಗುಡ್ಡ ಕುಸಿತ ಸಂಭವಿಸುವ ಸಾಧ್ಯತೆಗಳಿದ್ದು, ಅಗತ್ಯ ಕ್ರಮ ಕೈಗೊಳ್ಳುವಂತೆ ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳು, ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗುತ್ತದೆ ಎಂದರು. ವಿಪತ್ತು ನಿರ್ವಹಣಾ ಘಟಕಕ್ಕೆ ಈಗಾಗಲೇ ತರಬೇತಿಯನ್ನು ನೀಡಲಾಗಿದೆ. ಸ್ವಯಂ ಸೇವಕರ ಅಣಿಗೊಳಿಸಲಾಗಿದೆ.

ಕಾಳಜಿ ಕೇಂದ್ರಗಳನ್ನು ತೆರೆಯಲು ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಮಳೆಹಾನಿ ತಡೆಗಟ್ಟಲು ಅಗತ್ಯ ಅನುದಾನವೂ ಇದೆ ಎಂದ ಅವರು, ಜಿಲ್ಲೆಯಲ್ಲಿ ಮುಂಗಾರು ಪೂರ್ವ ಉತ್ತಮ ಮಳೆಯಾಗಿದ್ದು, 9 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮುಂಗಾರು ಪೂರ್ವ ಬಿತ್ತನೆ ಪೂರ್ಣಗೊಂಡಿದೆ. ಮುಂಗಾರು ಬಿತ್ತನೆಗೆ ಅಗತ್ಯ ಬಿತ್ತನೆ ಬೀಜ ಮತ್ತು ರಸಗೊಬ್ಬರವನ್ನು ದಾಸ್ತಾನು ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಕಳೆದ ವರ್ಷ ಸಂಭವಿಸಿದ ಮಳೆಯಿಂದ ಮನೆಗಳಿಗೆ ಹಾನಿಯಾಗಿದ್ದು, ಕಚ್ಚಾ ಮನೆಗಳ ಸರ್ವೇ ಕಾರ್ಯ ನಡೆಸಲಾಗುತ್ತಿದೆ ಎಂದು ಹೇಳಿದರು.

# ಕಳಪೆ ಕಾಮಗಾರಿ ವಿರೋಧಿಸಿ ಸಾಮಾಜಿಕ ಕಾರ್ಯಕರ್ತರ ಧರಣಿ



**ತರೀಕೆರೆ:** ತಾಲ್ಲೂಕಿನ ಕೆಲವು ಭಾಗಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಡೆಸುತ್ತಿರುವ ಕಳಪೆ ಕಾಮಗಾರಿಯನ್ನು ವಿರೋಧಿಸಿ ರಾಜ್ಯ ಮಾಹಿತಿ ಹಕ್ಕು ಮತ್ತು ಸಾಮಾಜಿಕ ಕಾರ್ಯಕರ್ತರ ವೇದಿಕೆ ವತಿಯಿಂದ ಪಟ್ಟಣದ ಮಹಾತ್ಮ ಗಾಂಧಿ ವೃತ್ತದ ಬಳಿ ಧರಣಿ ಸತ್ಯಾಗ್ರಹ ನಡೆಸಿದರು.

ತಾಲ್ಲೂಕಿನ ನೇರಲಕೆರೆ ಗ್ರಾಮದಲ್ಲಿ ನಡೆದಿರುವ ರಸ್ತೆ ಅಭಿವೃದ್ಧಿ ಕಾಮಗಾರಿ, ಪಟ್ಟಣದಲ್ಲಿ ನಡೆಯುತ್ತಿರುವ ಬಿ.ಎಚ್. ರಸ್ತೆ ಅಭಿವೃದ್ಧಿ ಕಾಮಗಾರಿ, ಯುಜಿಡಿ ಮತ್ತು ಕುಡಿಯುವ ನೀರಿನ ಭಾರಿ ಗಾತ್ರದ ಪೈಪ್‌ಲೈನ್‌ಗಳಿಗೆ ಸಂಬಂಧಿಸಿದಂತೆ ಸಾಕಷ್ಟು ಪ್ರಮಾಣದಲ್ಲಿ ಲೋಪದೋಷಗಳು ಉಂಟಾಗಿದ್ದು, ಇವುಗಳನ್ನು ಸರಿಪಡಿಸಬೇಕೆಂದು ಒತ್ತಾಯಿಸಿ ಚಳುವಳಿಯನ್ನು ಮಾಡಲಾಯಿತು.

ಈ ಸಂದರ್ಭದಲ್ಲಿ ವೇದಿಕೆಯ ಮುಖಂಡರಾದ ಎಂ. ಓಂಕಾರಪ್ಪ, ವಸಂತಕುಮಾರ್, ಮೀನಾ, ಪರಮೇಶ್, ಲಕ್ಷ್ಮೀ, ಬಲರಾಮ್, ವೆಂಕಟೇಶ್ ಹಾಗೂ ರೈತ ಸಂಘದ ಸೋಮಶೇಖರ್ ಮೊದಲಾದವರಿದ್ದರು.

# ದರ್ಶನ್ ತೂಗುದೀಪ, ಪವಿತ್ರಾಗೌಡ ಕೋರ್ಟ್‌ಗೆ ಹಾಜರ್

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಲಯದಲ್ಲಿ ಮಂಗಳವಾರ ವಿಚಾರಣೆ ನಡೆದಿದ್ದು, ನಟ ದರ್ಶನ್ ಹಾಗೂ ಅವರ ಗೆಳತಿ ಪವಿತ್ರಾ ಗೌಡ ಸೇರಿ ಇತರೆ ಆರೋಪಿಗಳು ಹಾಜರಾಗಿದ್ದರು.



57ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಜೈಶಂಕರ್ ಅವರು ಅರ್ಜಿ ವಿಚಾರಣೆ ನಡೆಸಿದರು. ಕೆಲ ಆರೋಪಿಗಳು ಕೋರ್ಟ್‌ಗೆ ಹಾಜರಾಗಿರ ಕಾರಣಕ್ಕೆ ವಿಚಾರಣೆಯನ್ನು ಜೂನ್ 10 ಕ್ಕೆ ಮುಂದೂಡಲಾಯಿತು. ಕಳೆದ ತಿಂಗಳು ನಟ ದರ್ಶನ್ ಅವರು ಕೋರ್ಟ್‌ಗೆ ಹಾಜರಾಗದೇ ಗೈರಾಗಿದ್ದರು. ಈ ಹಿನ್ನೆಲೆ ನ್ಯಾಯಧೀಶರು ಈ ಬಗ್ಗೆ ಆರೋಪಿ ದರ್ಶನ್ ಅವರನ್ನು ಪ್ರಶ್ನೆ ಮಾಡಿ ತರಾಟೆಗೆ ತೆಗದುಕೊಂಡರು ಎನ್ನಲಾಗಿದೆ.

ಮುಂದಿನ ದಿನಗಳಲ್ಲಿ ತಪ್ಪದೇ ವಿಚಾರಣೆಗೆ ಹಾಜರಾಗುವಂತೆ ಸೂಚನೆ ನೀಡಲಾಗಿದೆ. ವಿಚಾರಣೆಗೆ ಎ3 ಪವನ್ ಹಾಜರಾಗಿರಲಿಲ್ಲ. ಇನ್ನು ಇದೇ ಸಂದರ್ಭದಲ್ಲಿ ಕೆಲ ಆರೋಪಿಗಳು ಎ11 ನಾಗರಾಜು ಕೇಸ್ ಮೇಲೆ ಹೊಸಪೇಟೆಗೆ ತೆರಳಲು ಅನುಮತಿ ನೀಡಿತು. ಆರೋಪಿಗಳ ವಿಚಾರಣೆಗೆ ಹಾಜರಾಗಲು ಹೆಚ್ಚಿನ ಕಾಲಾವಕಾಶ ಕೋರಿದ ಹಿನ್ನೆಲೆಯಲ್ಲಿ ಅರ್ಜಿ ವಿಚಾರಣೆಯನ್ನು ಜುಲೈ 10 ಕ್ಕೆ ಮುಂದೂಡಿಕೆ ಮಾಡಲಾಯಿತು. ಕೋರ್ಟ್ ಪವಿತ್ರಾಗೌಡಗೆ 15 ದಿನ ಹೊರರಾಜ್ಯಕ್ಕೆ ತೆರಳಲು ಅವಕಾಶ ನೀಡಿದೆ.

# ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ಪ್ರವಾಸ

**ಚಿಕ್ಕಮಗಳೂರು, ಮೇ 20:** ರಾಜ್ಯ ಅಲ್ಪಸಂಖ್ಯಾತರ ಆಯೋಗದ ಮಾನ್ಯ ಅಧ್ಯಕ್ಷ ಯು.ನಿಸಾರ್ ಅಹಮ್ಮದ್ ಅವರು ಮೇ 21 ರಂದು ಬೆಳಿಗ್ಗೆ ಜಿಲ್ಲೆಗೆ ಆಗಮಿಸುವರು. ಬೆಳಿಗ್ಗೆ 11.30ಕ್ಕೆ ಅಲ್ಪಸಂಖ್ಯಾತರ ಇಲಾಖೆಯ ಸಂಸ್ಥೆಗಳು, ಅಂಗನವಾಡಿ ಕೇಂದ್ರ ಮತ್ತು ಕೊಳಚೆ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸುವರು. ಮಧ್ಯಾಹ್ನ 3.30ಕ್ಕೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲೆಯ ಎಲ್ಲ ಅಲ್ಪಸಂಖ್ಯಾತ ಸಮುದಾಯಗಳ ಪ್ರಮುಖರೊಂದಿಗೆ ಸಭೆ ನಡೆಸಲಿದ್ದು, ರಾತ್ರಿ ವಾಸ್ತವ್ಯ ಮಾಡುವರು.

# ಹಿರಿಯೂರು–ಚಳ್ಳಕೆರೆ ಹೊಸ ರೈಲ್ವೆ ಮಾರ್ಗಕ್ಕೆ ಸಚಿವ ಡಿ. ಸುಧಾಕರ್ ಮನವಿ

**ಚಿತ್ರದುರ್ಗ :** ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನಿಂದ ಚಳ್ಳಕೆರೆ ತಾಲ್ಲೂಕಿಗೆ ಹೊಸದಾಗಿ ರೈಲ್ವೆ ಸಂಪರ್ಕ ಕಲ್ಪಿಸಲು ಹೊಸ ರೈಲ್ವೇ ಮಾರ್ಗ ಯೋಜನೆ ರೂಪಿಸಿ ಅನುಷ್ಠಾನಗೊಳಿಸಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮನವಿ ಮಾಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಕೇಂದ್ರ ರೈಲ್ವೆ ಖಾತೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರ ಅಧ್ಯಕ್ಷತೆಯಲ್ಲಿ ಜರುಗಿದ ದಾವಣಗೆರೆ–ಚಿತ್ರದುರ್ಗ–ತುಮಕೂರು ನೂತನ ರೈಲ್ವೆ ಮಾರ್ಗದ ಕಾಮಗಾರಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರು ಈ ಮನವಿ ಸಲ್ಲಿಸಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಹೊಸದಾಗಿ ದಾವಣಗೆರೆ – ಚಿತ್ರದುರ್ಗ–ತುಮಕೂರು ನೇರ ರೈಲ್ವೇ ಯೋಜನೆಯ ಕಾಮಗಾರಿಯು ಪ್ರಾರಂಭ ವಾಗಿರುವುದು ಜಿಲ್ಲೆಯ ಜನತೆಗೆ ಸಂತೋಷದ ವಿಷಯವಾಗಿರುತ್ತದೆ. ಈ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿಗೆ ರೈಲ್ವೇ ಸಂಪರ್ಕ ಕಲ್ಪಿಸಲಾಗುತ್ತಿದ್ದು, ಅದೇ ರೀತಿ ಚಿತ್ರದುರ್ಗ ಜಿಲ್ಲೆಯ, ಹೊಳಲ್ಕೆರೆ, ಹೊಸದುರ್ಗ ಮತ್ತು ಚಳ್ಳಕೆರೆ ತಾಲ್ಲೂಕಿಗೆ ಈಗಾಗಲೇ ವಿವಿಧ ರೀತಿಯಲ್ಲಿ ರೈಲ್ವೇ ಸಂಪರ್ಕ ಕಲ್ಪಿಸಲಾಗಿದ್ದು, ಹಿರಿಯೂರು ತಾಲ್ಲೂಕಿನಿಂದ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿಗೆ ಇದುವರೆವಿಗೂ ಯಾವುದೇ ರೈಲ್ವೆ ಸಂಪರ್ಕ ಕಲ್ಪಿಸಿರುವುದಿಲ್ಲ. ಇದರಿಂದ ಚಳ್ಳಕೆರೆ ಮತ್ತು ಹಿರಿಯೂರು ತಾಲ್ಲೂಕಿನ ಮಧ್ಯ ಭಾಗದ ಸಾರ್ವಜನಿಕರ, ರೈತರ ಉತ್ಪನ್ನಗಳಿಗೆ ಹಾಗೂ



ಇತರ ಕೃಷಿಯೇತರ ಉತ್ಪನ್ನಗಳಿಗೆ ಸಾಗಣೆ ಮಾಡಲು ತೊಂದರೆಯಾಗುತ್ತಿದ್ದು ಅಲ್ಲದೇ ಸಾರ್ವಜನಿರು ಸಹ ರೈಲ್ವೆ ಸೇವೆಯಿಂದ ವಂಚಿತರಾಗಿದ್ದು, ಅವರು ಬೆಂಗಳೂರಿಗೆ ಮತ್ತು ಉತ್ತರ ಭಾರತದ ನಗರಗಳಿಗೆ ಸಂಪರ್ಕ ಕೈಗೊಳ್ಳಬೇಕಾದಲ್ಲಿ ಚಳ್ಳಕೆರೆಯಿಂದ ಬಸ್ ಮೂಲಕ ಬೆಂಗಳೂರಿಗೆ ತೆರಳಿ ಅಲ್ಲಿಂದ ಉತ್ತರ ಭಾರತದ ನಗರಗಳಿಗೆ ರೈಲು ಮೂಲಕ ತೆರಳುತ್ತಿದ್ದು ಇದರಿಂದ ಅಧಿಕ ಆರ್ಥಿಕ ವೆಚ್ಚವಾಗುತ್ತಿದೆ. ಹೀಗಾಗಿ ಚಳ್ಳಕೆರೆ ಹಾಗೂ ಹಿರಿಯೂರು ಮಧ್ಯಭಾಗದ ಸಾರ್ವಜನಿಕರಿಗೆ ಹಾಗೂ ರೈತರಿಗೆ ಮತ್ತು ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಹಿರಿಯೂರು ತಾಲ್ಲೂಕಿನಿಂದ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿಗೆ ಹೊಸದಾಗಿ ರೈಲ್ವೇ ಸಂಪರ್ಕ ಕಲ್ಪಿಸಲು ಹೊಸ ರೈಲ್ವೇ ಮಾರ್ಗ ಯೋಜನೆ ರೂಪಿಸುವುದು ಅತ್ಯವ್ಯಶಕವಾಗಿದೆ. ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನಿಂದ ಚಳ್ಳಕೆರೆ ತಾಲ್ಲೂಕಿಗೆ ಹೊಸದಾಗಿ ರೈಲ್ವೇ ಸಂಪರ್ಕ ಕಲ್ಪಿಸಲು ಹೊಸ ರೈಲ್ವೆ ಮಾರ್ಗ ಯೋಜನೆ ರೂಪಿಸಿ ತುರ್ತಾಗಿ ಅನುಷ್ಠಾನಗೊಳಿಸುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಚಿವ ಡಿ. ಸುಧಾಕರ್ ಅವರು ಮನವಿ ಮಾಡಿದರು.

ಚಳ್ಳಕೆರೆ ಶಾಸಕ ಟಿ. ರಘುಮೂರ್ತಿ ಅವರು ಕೂಡ ಇದೇ ವಿಷಯದ ಬಗ್ಗೆ ಕೇಂದ್ರ ರೈಲ್ವೆ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಮಾಡಿ, ಹಿರಿಯೂರು–ಚಳ್ಳಕೆರೆ ನೂತನ ರೈಲ್ವೆ ಮಾರ್ಗ ಕೈಗೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿದರು. ಮನವಿ ಸ್ವೀಕರಿಸಿದ ಸಚಿವ ಸೋಮಣ್ಣ ಪ್ರತಿಕ್ರಿಯಿಸಿ, ಈ ಕುರಿತು ರೈಲ್ವೆ ಅಧಿಕಾರಿಗಳೊಂದಿಗೆ ಸಾಧ್ಯಾಸಾಧ್ಯತೆಗಳ ಬಗ್ಗೆ ಪರಿಶೀಲಿಸಿ, ರೈಲ್ವೆ ಕಾರ್ಗೋ ಕಾರಿಡಾರ್ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂಸದ ಗೋವಿಂದ ಎಂ. ಕಾರಜೋಳ, ಶಾಸಕರಾದ ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಕೆ.ಸಿ.ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ರೈಲ್ವೆ ಇಲಾಖೆ ಮುಖ್ಯ ಆಡಳಿತಾಧಿಕಾರಿ (ನಿರ್ಮಾಣ) ಅಜಯ್ ಶರ್ಮಾ, ವಿಭಾಗೀಯ ರೈಲ್ವೆ ವ್ಯವಸ್ಥಾಪಕ (ಡಿಜಿಎಂ) ಮುದಿತ್ ಮಿತ್ತಲ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಒ ಎಸ್. ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ನೇರ ರೈಲ್ವೆ ಯೋಜನೆ ವಿಶೇಷ ಭೂಸ್ವಾಧೀನಾಧಿಕಾರಿ ವೆಂಕಟೇಶ್, ಸೇರಿದಂತ ರೈಲ್ವೆ ಇಲಾಖೆ ಅಧಿಕಾರಿಗಳು ಇದ್ದರು.

# ಸಮನ್ವಯದೊಂದಿಗೆ ಕಾರ್ಯ ನಿರ್ವಹಣೆ–ಏಡ್ಸ್ ಕುರಿತು ಜಾಗೃತಿಗೆ ಡಿಸಿ ಸೂಚನೆ

**ಶಿವಮೊಗ್ಗ:** ಜಿಲ್ಲೆಯ ಎಲ್ಲ ರಕ್ತನಿಧಿ ಕೇಂದ್ರಗಳು ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಹಾಗೂ ಲೈಂಗಿಕ ಕಾರ್ಯಕರ್ತ ಸಮುದಾಯದಲ್ಲಿ ಹೆಚ್‌ಐವಿ ಕುರಿತು ಪರಿಣಾಮಕಾರಿಯಾಗಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಡಳಿತ ಕಚೇರಿಯಲ್ಲಿ ಶನಿವಾರ ಏರ್ಪಡಿಸಲಾಗಿದ್ದ ರಕ್ತ ಟಾಸ್ಕ್ ಫೋರ್ಸ್ ಮೊದಲನೇ ತ್ರೈಮಾಸಿಕ ಸಮಿತಿ ಹಾಗೂ ಟಿಬಿ ಕೋಮಾರ್ಬಿಟಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜಿಲ್ಲೆಯಲ್ಲಿ ಮೆಗ್ಗಾನ್ ಆಸ್ಪತ್ರೆಯಲ್ಲಿರುವ ಒಂದು ಸರ್ಕಾರಿ ರಕ್ತನಿಧಿ ಕೇಂದ್ರ ಸೇರಿದಂತೆ ಒಟ್ಟು 09 ರಕ್ತನಿಧಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಮೆಗ್ಗಾನ್ ಆಸ್ಪತ್ರೆಯಲ್ಲೇ ಪ್ರತಿ ಒಂದು ದಿನಕ್ಕೆ 60 ರಿಂದ 70 ಯೂನಿಟ್‌ಗಳಷ್ಟು ರಕ್ತದ ಬೇಕಾಗುತ್ತದೆ. ಪ್ಯಾಕಡ್ ರೆಡ್ ಸೆಲ್ಸ್, ಪ್ಲೇಟ್‌ಲೆಟ್ಸ್‌ಗೆ ಹೆಚ್ಚಿನ ಬೇಡಿಕೆ ಇರುತ್ತದೆ.

2024–25 ನೇ ಸಾಲಿನಲ್ಲಿ ಜಿಲ್ಲೆಯಲ್ಲಿ 24090 ಯುನಿಟ್ ರಕ್ತವನ್ನು ರಕ್ತನಿಧಿ ಕೇಂದ್ರಗಳಲ್ಲಿ, 14106 ಯುನಿಟ್ ರಕ್ತವನ್ನು ಸ್ವಯಂ ಪ್ರೇರಿತ ರಕ್ತದಾನ ಶಿಬಿರಗಳಲ್ಲಿ ಸಂಗ್ರಹಿಸಲಾಗಿದ್ದು ಒಟ್ಟು 422 ರಕ್ತದಾನ ಶಿಬಿರಗಳನ್ನು ಕೈಗೊಳ್ಳಲಾಗಿದೆ.

ರಕ್ತನಿಧಿ ಕೇಂದ್ರಗಳು ಸಮನ್ವಯದೊಂದಿಗೆ ನಿಯಮಾನುಸಾರ ಕಾರ್ಯ ನಿರ್ವಹಿಸಬೇಕು. ರಕ್ತ ವ್ಯರ್ಥವಾಗದಂತೆ ಬಳಕೆ ಮಾಡಬೇಕು. ಖಾಸಗಿ ರಕ್ತ ಕೇಂದ್ರಗಳು ಸ್ವಯಂಪ್ರೇರಿತ ರಕ್ತದಾನ ಶಿಬಿರದಲ್ಲಿ ಸಂಗ್ರಹವಾದ ರಕ್ತದಲ್ಲಿ ನಿಯಮಾನುಸಾರ ಪ್ರತಿ ತಿಂಗಳು ಜಿಲ್ಲಾ ಸರ್ಕಾರಿ ರಕ್ತ ಕೇಂದ್ರಕ್ಕೆ ಶೇ.25 ರಷ್ಟು ರಕ್ತವನ್ನು ನೀಡಬೇಕೆಂದು ತಿಳಿಸಿದರು.

ಕಳೆದ ಸಾಲಿನಲ್ಲಿ ಜಿಲ್ಲಾಸ್ಪತ್ರೆಯ ಸರ್ಕಾರಿ ರಕ್ತನಿಧಿ ಕೇಂದ್ರದಿಂದ 160 ಶಿಬಿರ ಸೇರಿದಂತೆ ಇತರೆ ರಕ್ತ ಕೇಂದ್ರಗಳು 422 ರಕ್ತದಾನ ಶಿಬಿರ ಏರ್ಪಡಿಸಿದ್ದು, ಇನ್ನೂ ಹೆಚ್ಚು ಶಿಬಿರಗಳನ್ನು ಕೈಗೊಂಡು ಹೆಚ್ಚಿನ ರಕ್ತದಾನವಾಗುವಂತೆ ಗಮನ ಹರಿಸಬೇಕು.

ರಕ್ತದ ಯೂನಿಟ್‌ಗಳಿಗೆ ನಿಗದಿಪಡಿಸಿರುವ ದರದ ಮಾಹಿತಿಯನ್ನು ಮತ್ತು ರಕ್ತದ ಯುನಿಟ್‌ಗಳ ಲಭ್ಯತೆಯ ಮಾಹಿತಿಯನ್ನು ರಕ್ತ ಕೇಂದ್ರದ ಮುಂಭಾಗ ಪ್ರಕಟಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ನಾಗೇಶ್ ಬಿ.ಪಿ ಮಾತನಾಡಿ, ಜಿಲ್ಲಾ ಏಡ್ಸ್ ನಿಯಂತ್ರಣ ಕಾರ್ಯಕ್ರಮದಡಿ ನಿಯಮಿತವಾಗಿ ಹೆಚ್‌ಐವಿ ಪರೀಕ್ಷೆಗಳನ್ನು ನಡೆಸಿ ಪಾಸಿಟಿವ್ ಬಂದಿರುವವರಿಗೆ ಎಆರ್‌ಟಿ ಚಿಕಿತ್ಸೆಗೆ ಒಳಪಡಿಸಲಾಗುತ್ತಿದೆ. ಹಾಗೂ ಅರಿವು ಮತ್ತು ಜಾಗೃತಿ ಕಾರ್ಯಕ್ರಮ ಮಾಡಲಾಗುತ್ತಿದೆ.

2024–25 ರಲ್ಲಿ 249 ಜನ ಹೆಚ್‌ಐವಿ ಪಾಸಿಟಿವ್ ಇದ್ದು 245 ಜನರು ಎಆರ್‌ಟಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇಬ್ಬರು ಮರಣ ಹೊಂದಿದ್ದಾರೆ. ಪ್ರಸವಪೂರ್ವ ಚಿಕಿತ್ಸೆ ಪಡೆಯುವ ಎಎನ್‌ಸಿ ವಿಭಾಗದಲ್ಲಿ 8 ಗರ್ಭಿಣಿಯರಲ್ಲಿ ಹೆಚ್‌ಐವಿ ಪಾಸಿಟಿವ್ ಕಂಡುಬಂದಿದ್ದು ಎಲ್ಲರಿಗೂ ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ.

ಕ್ಷಯ ಪತ್ತೆಗಾಗಿ ನಿಯಮಿತವಾಗಿ ಪರೀಕ್ಷೆಗಳು, ಸಕ್ರಿಯ ಪತ್ತೆ ಚಟುವಟಿಕೆಗಳು ನಡೆಯುತ್ತಿದ್ದು 2024–25 ರಲ್ಲಿ 611 ಜನರಲ್ಲಿ ಕ್ಷಯ ರೋಗ ಪತ್ತೆಯಾಗಿದ್ದು ಎಲ್ಲರಿಗೂ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿಗಳು, ಏಡ್ಸ್ ರೋಗದ ಕುರಿತು ಮಹಿಳಾ, ಪುರುಷ, ಇತರೆ ಲೈಂಗಿಕ ಕಾರ್ಯಕರ್ತರಲ್ಲಿ ಇಲಾಖೆ ಸೇರಿದಂತೆ ಎನ್‌ಜಿಓ ಗಳು ವೈಯಕ್ತಿಕವಾಗಿ ಅವರನ್ನು ಭೇಟಿ ಮಾಡಿ ಹಾಗೂ ಅವರು ಇರುವ ಸ್ಥಳಕ್ಕೆ ತೆರಳಿ ಜಾಗೃತಿ ಮೂಡಿಸಬೇಕು. ಅರಿವು ಆಂದೋಲನವನ್ನು ಕೈಗೊಳ್ಳಬೇಕು. ಹಾಗೂ ಎಲ್ಲ ತಾಲ್ಲೂಕುಗಳಲ್ಲಿ ಕ್ಷಯ ರೋಗ ಪತ್ತೆ ಪರೀಕ್ಷೆಗಳನ್ನು ಮಾಡಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ನಮ್ಮ ಕ್ಲಿನಿಕ್ ತೆರೆಯಲು ಸೂಕ್ತ

# ಪ.ಜಾತಿಗಳ ಸಮಗ್ರ ಸಮೀಕ್ಷೆ :ಅವಧಿ ವಿಸ್ತರಣೆ–ಶುಭ ಕಲ್ಯಾಣ್

**ತುಮಕೂರು:** ಜಿಲ್ಲೆಯಲ್ಲಿ ಮೇ 5 ರಿಂದ ಕೈಗೊಂಡಿರುವ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆಯಡಿ ಮನೆ–ಮನೆ ಭೇಟಿ ನೀಡಿ ಗಣತಿ ಮಾಡುವ ಅವಧಿಯನ್ನು ಮೇ 25ರವರೆಗೂ ವಿಸ್ತರಣೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಕೇಸ್ವಾನ್ ಸಭಾಂಗಣದಲ್ಲಿ ಶುಕ್ರವಾರ ಸಂಜೆ ಪತ್ರಿಕಾ ಹೇಳಿಕೆ ನೀಡಿದ ಅವರು ಮನೆ–ಮನೆ ಭೇಟಿ ಅವಧಿಯಲ್ಲಿ ಬಿಟ್ಟುಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿ ಸಂಗ್ರಹಿಸಲು ಮೇ 26 ರಿಂದ 28ರವರೆಗೆ ಸಮೀಕ್ಷೆಯ ಬ್ಲಾಕ್ ವ್ಯಾಪ್ತಿಯಲ್ಲಿ ವಿಶೇಷ ಶಿಬಿರಗಳನ್ನು ನಡೆಸಲಾಗುವುದು. ಮನೆ–ಮನೆ ಸಮೀಕ್ಷೆ ಹಾಗೂ ವಿಶೇಷ ಶಿಬಿರದಲ್ಲಿ ಜಾತಿಯ ಬಗ್ಗೆ ಘೋಷಣೆ ಮಾಡಿಕೊಳ್ಳದವರು ಆನ್‌ಲೈನ್ ಮೂಲಕ ಸ್ವಯಂ ಘೋಷಣೆ ಮಾಡಿಕೊಳ್ಳಲು ಮೇ 19 ರಿಂದ 28ರವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಸಮೀಕ್ಷೆಯಲ್ಲಿ ತಾಂಡಾ, ಕಾಲೋನಿಗಳ ಮನೆ–ಮನೆ ಭೇಟಿ ಕೈಬಿಟ್ಟು ಹೋಗಿದ್ದಲ್ಲಿ ಈ ದಿನವೇ ತೆರಳಿ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಬೇಕು. ತಮಗೆ ವಹಿಸಿರುವ ಗಣತಿ ಕಾರ್ಯವನ್ನು ಶೇ.100ರಷ್ಟು ಪೂರ್ಣಗೊಳಿಸಬೇಕು. ಸಮೀಕ್ಷಾ ಕಾರ್ಯಕ್ಕೆ ಗೈರು ಹಾಜರಾಗಿರುವ ಗಣತಿದಾರರು ಕೂಡಲೇ ಕರ್ತವ್ಯಕ್ಕೆ ಹಾಜರಾಗಬೇಕು. ಕರ್ತವ್ಯಕ್ಕೆ ಹಾಜರಾಗದ ಗಣತಿದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಗಣತಿದಾರರಿಗೆ ಸೂಚನೆ ನೀಡಿದರು.

ಗಣತಿದಾರರು ತಮ್ಮ ವ್ಯಾಪ್ತಿಯಲ್ಲಿರುವ ಗಣ್ಯ ವ್ಯಕ್ತಿಗಳು, ಸಂಸದರು, ಸಚಿವರು, ಶಾಸಕರು, ವಿವಿಧ ಜನಪ್ರತಿನಿಧಿಗಳಿದ್ದಲ್ಲಿ ಅವರನ್ನು ಭೇಟಿ ಮಾಡಿ ಅವರನ್ನು ಸಮೀಕ್ಷೆಗೆ ಒಳಪಡಿಸಬೇಕೆಂದು ಗಣತಿದಾರರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಕೃಷ್ಣಪ್ಪ ಹಾಜರಿದ್ದರು.

# ಯಾವುದೇ ದೇಶದ ಅಭಿವೃದ್ಧಿ ಹೊಂದಲು ಸಾರ್ವತ್ರಿಕ ಶಿಕ್ಷಣ ಅಗತ್ಯ : ಡಾ.ಪ್ರಕಾಶ್

**ಹರಿಹರ :** ಯಾವುದೇ ದೇಶದ ಅಭಿವೃದ್ಧಿ ಹೊಂದಲು ಸಾರ್ವತ್ರಿಕ ಶಿಕ್ಷಣ ಅಗತ್ಯವಾಗಿರುತ್ತದೆ ಎಂದು ಚಳ್ಳಕೆರೆಯ ಹೆಚ್.ಪಿ.ಪಿ.ಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಮಾಜಶಾಸ್ತ್ರ ವಿಭಾಗ ಸಹ ಪ್ರಾಧ್ಯಾಪಕ ಡಾ.ಸಿ.ಎಂ.ಪ್ರಕಾಶ್ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಮಾಜಶಾಸ್ತ್ರ ವಿಭಾಗ ಮತ್ತು ಐ.ಕ್ಯೂ.ಎಸ್.ಸಿ ಸಹಯೋಗದಲ್ಲಿ ಕಾಲೇಜಿನಲ್ಲಿ ಶನಿವಾರ ಜರುಗಿದ 'ಜಾಗತೀಕರಣ ಮಹಿಳೆ ಮತ್ತು ಸಾಮಾಜಿಕ ನ್ಯಾಯ'




ಎಂಬ ವಿಶೇಷ ಉಪನ್ಯಾಸ ಮತ್ತು ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ತಿಪ್ಪೇಸ್ವಾಮಿ.ಹೆಚ್ ರ ಕೃತಿ 'ಹ್ಯಾಂಡ್ ಬುಕ್ ಆಫ್ ಎಜುಕೇಶನ್ ಅಂಡ್ ರಿಯ್ಯಾಬಿಟೇಷನ್' ಪುಸ್ತಕ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಭಿವೃದ್ಧಿ ಹೊಂದುತ್ತಿರುವ ದೇಶಗಳಲ್ಲಿನ ಜನರ ವೈಯಕ್ತಿಕ ಬೆಳವಣಿಗೆಯ ಸಾಮರ್ಥ್ಯವನ್ನು ಹೆಚ್ಚಿಸಲು, ಭಾವನಾತ್ಮಕ ಮತ್ತು ಸಾಮಾಜಿಕ ಬೆಳವಣಿಗೆಯ ಸಮಾನವಾದ ಅವಕಾಶ ಕಲ್ಪಿಸಲು ಸಾರ್ವತ್ರಿಕ ಶಿಕ್ಷಣ ಅಗತ್ಯವಾಗಿದೆ. ಅಭಿವೃದ್ಧಿಯಾಗದ, ಅಭಿವೃದ್ಧಿಶೀಲ ಮತ್ತು ಅಭಿವೃದ್ಧಿ ಹೊಂದಿದ ದೇಶಗಳ ನಡುವಿನ ಪ್ರಮುಖ ವ್ಯತ್ಯಾಸವೆಂದರೆ ಆಯಾ ದೇಶದ ಜನಸಂಖ್ಯೆಗೆ ಒದಗಿಸಲಾಗುವ ಶಿಕ್ಷಣದ ಮಟ್ಟ ಮತ್ತು ಗುಣಮಟ್ಟವಾಗಿದೆ. ಶಿಕ್ಷಣದ ಹಕ್ಕನ್ನು ಹಲವಾರು ದೇಶಗಳು ಮೂಲಭೂತ ಮಾನವ ಹಕ್ಕು ಎಂದು ಗುರುತಿಸಿವೆ. ಶಿಕ್ಷಣ ಮತ್ತು ದೇಶದ ಅಭಿವೃದ್ಧಿಯ ನಡುವೆ ನಿರಾಕರಿಸಲಾಗದ ಸಂಬಂಧವನ್ನು ಹೊಂದಿದೆ ಎಂದು ಹೇಳಿದರು. ಲಿಂಗ ತಾರತಮ್ಯ ಎಂದರೆ ಸಾಮಾಜಿಕ, ಆರ್ಥಿಕ, ರಾಜಕೀಯ ಮತ್ತು ಕಾನೂನು ಸಂದರ್ಭಗಳಲ್ಲಿ ಎಲ್ಲಾ ಲಿಂಗಗಳ ವ್ಯಕ್ತಿಗಳನ್ನು ನ್ಯಾಯಯುತವಾಗಿ ಮತ್ತು ಸಮಾನವಾಗಿ ನಡೆಸಿಕೊಳ್ಳದೆ ಇರುವುದು.ಮಹಿಳೆಯರು ತಮ್ಮ ಜೀವನ, ಸುರಕ್ಷತೆ ಮತ್ತು ಯೋಗ ಕ್ಷೇಮದ ಮೇಲೆ ನೇರವಾಗಿ ಪರಿಣಾಮ ಬೀರುವ ನಿರ್ಧಾರ ತೆಗೆದುಕೊಳ್ಳುವ ಪಾತ್ರಗಳಲ್ಲಿ ಕಡಿಮೆ ಎಂದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**